ಸಂಪುಟ: 05 ಸಂಚಿಕೆ: 175 ಪುಟಗಳು: 08 ಸೋಮವಾರ 08 ಸೆಪ್ಟೆಂಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ಕ್ರೌರ್ಯಕ್ಕೆ ಕ್ರೌರ್ಯವೇ ಉತ್ತರ ಎನ್ನುವವರು ನಿಶ್ಚಿತವಾಗಿಯೂ ಬೌದ್ಧಿಕ ದಾರಿದ್ರ್ಯವನ್ನು ಅನುಭವಿಸುತ್ತಿರುತ್ತಾರೆ. ಅದು ವಿಷವರ್ತುಲದ ಆರಂಭವಷ್ಟೆ.

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮೇಲ್ಮನೆಗೆ ರಮೇಶ್‌ಬಾಬು, ಆರತಿ ಕೃಷ್ಣ ಸೇರಿ ನಾಲ್ವರ ನೇಮಕ

• **ಉದಯವಾಹಿನಿ, ಬೆಂಗಳೂರು**

ವಿಧಾನ ಪರಿಷತ್‌ನಲ್ಲಿ ಹಲವು ತಿಂಗಳಿಂದ ಖಾಲಿ ಇದ್ದ ನಾಲ್ಕು ಸದಸ್ಯ ಸ್ಥಾನಗಳಿಗೆ ಆರತಿ ಕೃಷ್ಣ, ರಮೇಶ್ ಬಾಬು, ಎಫ್.ಎಚ್. ಜಕ್ಕಪ್ಪನವರ್ ಮತ್ತು ಶಿವಕುಮಾರ್ ಅವರನ್ನು ನಾಮನಿರ್ದೇಶನ ಮಾಡಿ ಸರ್ಕಾರ ಭಾನುವಾರ ಅಧಿಕೃತ ಆದೇಶ ಹೊರಡಿಸಿದೆ. ಏಳು ತಿಂಗಳ ಹಗ್ಗ ಜಗ್ಗಾಟದ ಬಳಿಕ ಕಾಂಗ್ರೆಸ್ ಈ ನಾಲ್ವರನ್ನು ವಿಧಾನ ಪರಿಷತ್‌ಗೆ ನಾಮನಿರ್ದೇಶನ ಮಾಡಿದೆ. ಈ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆಗಳ ಸಚಿವಾಲಯ ಅಧಿಕೃತ ಪ್ರಕಟಣೆ ಹೊರಡಿಸಿದೆ. ಕೆಪಿಸಿಸಿ ಮಾಧ್ಯಮ ವಿಭಾಗದ ಮುಖ್ಯಸ್ಥ ರಮೇಶ್‌ಬಾಬು, ಕರ್ನಾಟಕ ಸರ್ಕಾರದ ಅನಿವಾಸಿ ಭಾರತೀಯ ಸಮಿತಿಯ ಅಧ್ಯಕ್ಷೆ ಆರತಿ ಕೃಷ್ಣ, ಎಐಸಿಸಿ ಪರಿಶಿಷ್ಟ ಜಾತಿ ವಿಭಾಗದ ಪ್ರಧಾನ ಕಾರ್ಯದರ್ಶಿ ಜಕ್ಕಪ್ಪನವರ್, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತರೂ ಆದ ಪತ್ರಕರ್ತ ಮೈಸೂರಿನ ಶಿವಕುಮಾರ್ ಅವರಿಗೆ ಅವಕಾಶ ಒಲಿದಿದೆ. ಸರ್ಕಾರದಿಂದ ನಾಮನಿರ್ದೇಶನಗೊಂಡಿದ್ದ ಕಾಂಗ್ರೆಸ್ ಯು.ಬಿ. ವೆಂಕಟೇಶ್ ಮತ್ತು ಪ್ರಕಾಶ್ ಕೆ. ರಾಥೋಡ್ ಅವರ ಅವಧಿ 2024ರ ಅಕ್ಟೋಬರ್‌ನಲ್ಲಿ ಮತ್ತು ಜೆಡಿಎಸ್‌ನ ಕೆ.ಎ. ತಿಪ್ಪೇಸ್ವಾಮಿ ಅವರ ಅವಧಿ 2025ರ ಜನವರಿ ವೇಳೆಗೆ ಮುಕ್ತಾಯಗೊಂಡಿತ್ತು.

## ಮೋದಿ ಪ್ರಧಾನಿ ಅಹಂ ಬಿಟ್ಟು ದೇಶದ ಪ್ರಗತಿಗೆ ಶ್ರಮಿಸಲಿ

• **ಉದಯವಾಹಿನಿ, ಕಲಬುರಗಿ**

ಜಿಎಸ್‌ಟಿ ಇಳಿಕೆಯಿಂದ ಬಡವರಿಗೆ ಅನುಕೂಲವಾಗಲಿದೆ. ಇದನ್ನು ಟೀಕಿಸಲ್ಲ. ಆದರೆ, ಜಿಎಸ್‌ಟಿ ಇಳಿಸುವಂತೆ ನಾವು ಎಂಟು ವರ್ಷಗಳ ಹಿಂದೆಯೇ ಹೇಳಿದ್ದೆವು. ಆಗ ಅವರು ಪರಿಷ್ಕರಿಸಲಿಲ್ಲ. ಎಂದು ಎಐಸಿಸಿ ಅಧ್ಯಕ್ಷ, ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಹೇಳಿದರು. ಈಗ ದಿಢೀರ್ ಆಗಿ ಯಾವ ಕಾರಣಕ್ಕೆ ಪರಿಷ್ಕರಿಸುತ್ತಿದ್ದಾರೋ ಮೋದಿ ಅವರಿಗೆ ಗೊತ್ತು. ನಾವು ಎಂದಿಗೂ ಜನಪರವಾದ ಸಮಸ್ಯೆಗಳನ್ನು ಎತ್ತಿಹಿಡಿದು ಸರ್ಕಾರಕ್ಕೆ ಹೇಳುತ್ತೇವೆ. ಆದರೆ, ಅವರು ಯಾವಾಗಲೂ ನಿರ್ಲಕ್ಷಿಸುತ್ತಾರೆ' ಎಂದರು. ನರೇಂದ್ರ ಮೋದಿ ಅವರಿಗೆ ತಾನು ಏನು ಮಾಡಿದರೂ ನಡೆಯುತ್ತದೆ ಎಂಬ ಅಹಂಕಾರವಿದೆ. ಅವರ ಅಹಂಕಾರವೇ ಅವರಿಗೆ ಮುಳುವಾಗಿದೆ. ಸುಂಕಾಸ್ತ್ರ ಎದುರಿಸುವಂತಾಗಿದೆ. ವಿದೇಶಾಂಗ ನೀತಿಯಲ್ಲಿ ಭಾರತ ದಶಕಗಳಿಂದ ಅನುಸರಿಸಿದ್ದ ಅಲಿಪ್ತ ನೀತಿ ನಿರ್ಲಕ್ಷಿಸಿದರು. ಮೋದಿ ವಿದೇಶದಲ್ಲಿ ಹೋಗಿ ಯಾವುದೇ ರಾಜಕೀಯ ನಾಯಕರ ಪರ ಪ್ರಚಾರ ಮಾಡಬಾರದು ಎಂದು ಹೇಳಿದರೂ ಕೇಳದೇ ಟ್ರಂಪ್ ಪರ ಪ್ರಚಾರ ಮಾಡಿದರು. ತನ್ನ ಆತ್ಮೀಯ ಸ್ನೇಹಿತ ಎಂದು ಹೇಳಿಕೊಂಡರು. ಈ ನಡೆ ಭವಿಷ್ಯದಲ್ಲಿ ಬೇರೆ ರಾಷ್ಟ್ರಗಳ ನಾಯಕರು ಭಾರತಕ್ಕೆ ಬಂದು ಪ್ರಚಾರ ಮಾಡಲು ಮೇಲ್ಪಂಕ್ತಿಯಿಂದ ಹಾಕಿದಂತಾಗಲ್ಲವೇ' ಎಂದು ಕೇಳಿದರು.

## ಸಾರಿಗೆ ನಿಗಮ: 2,736 ಹುದ್ದೆ ಭರ್ತಿಗೆ ಪ್ರಸ್ತಾವ

• **ಉದಯವಾಹಿನಿ, ಕಲಬುರಗಿ**

ನಾಲ್ಕು ಸಾರಿಗೆ ನಿಗಮಗಳಲ್ಲಿ ಖಾಲಿ ಇರುವ 2,736 ಅಧಿಕಾರಿ, ನೌಕರರ ಹುದ್ದೆಗಳ ಭರ್ತಿಗೆ ಅನುಮತಿ ನೀಡುವಂತೆ ಕೋರಿ ಹಣಕಾಸು ಇಲಾಖೆಗೆ ಪ್ರಸ್ತಾವ ಸಲ್ಲಿಸಲಾಗಿದೆ' ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದರು. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ 5 ಕೋಟಿ ವೆಚ್ಚದಲ್ಲಿ ಪಟ್ಟಣದಲ್ಲಿ ನಿರ್ಮಿಸಲಿರುವ ಬಸ್ ನಿಲ್ದಾಣದ ಕಾಮಗಾರಿಗೆ ಶನಿವಾರ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. 2016ರಿಂದ 2023ರವರೆಗೆ ನೇಮಕಾತಿ ಮಾಡದ ಕಾರಣ ಬಸ್‌ಗಳ ಕಾರ್ಯಾಚರಣೆಯಲ್ಲಿ ವ್ಯತ್ಯಯವಾಗಿತ್ತು. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಸಂಸ್ಥೆಯಲ್ಲಿ ಒಂದು ಸಾವಿರ ಅನುಕಂಪದ ಹುದ್ದೆ ಸೇರಿದಂತೆ ಇದುವರೆಗೆ 10 ಸಾವಿರ ನೌಕರರನ್ನು ನೇಮಕಾತಿ ಮಾಡಿಕೊಂಡಿದ್ದೇವೆ' ಎಂದರು.

## ಹಿಂದೂಗಳೆಂದು ಬರೆಸಬೇಡಿ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಕರೆ

• **ಉದಯವಾಹಿನಿ, ಬೆಂಗಳೂರು**

ಜಾತಿವಾರು ಸಮೀಕ್ಷೆ ವೇಳೆ ಲಿಂಗಾಯತ ವೀರಶೈವ ಸಮುದಾಯದ ಯಾರೂ, ಧರ್ಮದ ಕಾಲಂನಲ್ಲಿ ಹಿಂದೂ ಎಂದು ನಮೂದಿಸಬಾರದು. ಬದಲಿಗೆ 'ವೀರಶೈವ ಲಿಂಗಾಯತ' ಎಂದು ಬರೆಯಿಸಿ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಕರೆ ನೀಡಿದೆ. ಮಹಾಸಭಾದ ಮಹಾಪ್ರಧಾನ ಕಾರ್ಯದರ್ಶಿ ಈಶ್ವರ ಬಿ.ಖಂಡ್ರೆ ಅವರು, ನಗರದಲ್ಲಿ ಭಾನುವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಈ ಕರೆ ನೀಡಿದರು. 'ಹಿಂದೂ ಸನಾತನ ಧರ್ಮಕ್ಕೂ, ವೀರಶೈವ ಲಿಂಗಾಯತ ಧರ್ಮಕ್ಕೂ ಸಂಬಂಧವಿಲ್ಲ. ಹೀಗಾಗಿ ನಮ್ಮ ಸಮುದಾಯದ ಎಲ್ಲರೂ, ತಾವು 'ವೀರಶೈವ ಲಿಂಗಾಯತ' ಧರ್ಮದವರು ಎಂದೇ ಬರೆಸಬೇಕು' ಎಂದು ಹೇಳಿದರು. ''ಜಾತಿಗಳ ಕಾಲಂನಲ್ಲಿ 'ಲಿಂಗಾಯತ' ಅಥವಾ 'ವೀರಶೈವ' ಅಥವಾ 'ವೀರಶೈವ ಲಿಂಗಾಯತ' ಎಂದು ಬರೆಸಬೇಕು. ಉಪಜಾತಿಯ ಕಾಲಂನಲ್ಲಿ, ನಿಮ್ಮ ಉಪಜಾತಿಗಳ ಹೆಸರನ್ನು ಸ್ಪಷ್ಟವಾಗಿ ಬರೆಸಬೇಕು. ಗಣತಿದಾರರು ಸರಿಯಾಗಿ ಮಾಹಿತಿ ದಾಖಲಿಸಿದ್ದಾರೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು' ಎಂದರು.

## ಮೋದಿಯಿಂದ ಮಾತ್ರ ಭಾರತ ಮುನ್ನಡೆಸಲು ಸಾಧ್ಯ ಅಂತ ಜನ ಒಪ್ಪಿದ್ದಾರೆ: ವಿಜಯೇಂದ್ರ

## ರಾಹುಲ್ ಗಾಂಧಿ, ಸಿದ್ದರಾಮಯ್ಯಗೇಕೆ ಇವಿಎಂ ಮೇಲೆ ವಿಶ್ವಾಸ ಕಡಿಮೆ ಆಗಿದೆ

# ಕೈ ವಿರುದ್ಧ ಕಮಲ ಕೆಂಡ

**ಬ್ಯಾಲೆಟ್ ಪೇಪರ್ ವಿರುದ್ಧ ಕಾನೂನು ಸಮರ**






**1** ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಬಿಜೆಪಿ ನಾಯಕರು ಮಾಜಿ ಪ್ರಧಾನಿ ದೇವೇಗೌಡರನ್ನು ಭೇಟಿ

**2** ದೇಶದ ಜನತೆ ಕಾಂಗ್ರೆಸ್ ಪಕ್ಷದ ಬಗ್ಗೆ ಏಕೆ ವಿಶ್ವಾಸ ಕಳೆದುಕೊಂಡಿದ್ದಾರೆ ಎಂದು ಚರ್ಚಿಸಬೇಕು

**3** ಚುನಾವಣಾ ಆಯೋಗದ ವಿರುದ್ಧ ಆರೋಪ ಮಾಡುತ್ತಿದ್ದಾರೆ. ಇವಿಎಂ ದೋಷಪೂರಿತ ಎಂದು ಆರೋಪ

• **ಉದಯವಾಹಿನಿ, ಬೆಂಗಳೂರು**

ಮೋದಿಜಿ ಅವರಿಂದ ಮಾತ್ರ ಭಾರತವನ್ನ ಮುನ್ನಡೆಸುವುದಕ್ಕೆ ಸಾಧ್ಯವೆಂದು ದೇಶದ ಜನ ಒಪ್ಪಿಕೊಂಡಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ ವಿಜಯೇಂದ್ರ ಹೇಳಿದರು. ಮಾಧ್ಯಮಗಳ ಜೊತೆ ಮಾತನಾಡಿದ ಅವರು, ದೇಶದ ಜನತೆ ಕಾಂಗ್ರೆಸ್ ಪಕ್ಷದ ಬಗ್ಗೆ ಏಕೆ ವಿಶ್ವಾಸ ಕಳೆದುಕೊಂಡಿದ್ದಾರೆ ಎಂದು ಚರ್ಚಿಸಬೇಕು ಅಥವಾ ಚಿಂತನೇ ಮಾಡಬೇಕೆ ವಿನಾಃ ಇವಿಎಂ ಬಗ್ಗೆ ಪ್ರಶ್ನೆ ಮಾಡುತ್ತಿರುವುದು ಮುರ್ಖತನದ ಪರಮಾವಧಿ.

ದೇಶದ ಭವಿಷ್ಯದ ದೃಷ್ಟಿಯಿಂದ ನರೇಂದ್ರ ಮೋದಿ ಜೀ ಅವರಿಂದ ಮಾತ್ರ ಭಾರತವನ್ನ ಮುನ್ನಡೆಸುವುದಕ್ಕೆ ಸಾಧ್ಯವೆಂದು ದೇಶದ ಜನ ಒಪ್ಪಿಕೊಂಡಿದ್ದಾರೆ. ಆದರೆ ಕಾಂಗ್ರೆಸ್ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಇದನ್ನು ಒಪ್ಪಿಕೊಳ್ಳುವುದಕ್ಕೆ ತಯಾರಿಲ್ಲದೆ ಪ್ರಸ್ತುತ ಇವಿಎಂ ಮೇಲೆ ದೂರುವುದು ಮತ್ತು ದೋಷಪೂರಿತ ಎಂದು ಕಾಂಗ್ರೆಸ್ ಹೇಳುತ್ತಿರುವುದು ಹುಚ್ಚುತನದ ಪರಮಾವಧಿ ಎಂದು ಲೇವಡಿ ಮಾಡಿದರು. ರಾಹುಲ್ ಗಾಂಧಿ ಮತ್ತು ಸಿದ್ದರಾಮಯ್ಯನವರಿಗೆ ಇವಿಎಂ ಮೇಲೆ ಏಕೆ ವಿಶ್ವಾಸ ಕಡಿಮೆ ಆಗಿದೆ ರಾಹುಲ್ ಗಾಂಧಿಯವರು ಸತತವಾಗಿ 3 ಬಾರಿ ಕೇಂದ್ರ ಲೋಕಸಭಾ ಚುನಾವಣೆಯ ಸೋಲನ್ನು ಒಪ್ಪಿಕೊಂಡಿದ್ದಾರೆ ಎಂದರು. ಬ್ಯಾಲೆಟ್ ಪೇಪರ್ ಸಂಬಂಧ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅವರು, ಬಿಜೆಪಿಯು ಬ್ಯಾಲೆಟ್ ಪೇಪರ್‌ಗೆ ಹೆದರುವುದಿಲ್ಲ, ನಾವು ಏಕೆ ಹೆದರಬೇಕು ಎಂದು ಕೇಳಿದರಲ್ಲದೇ ಕೇಂದ್ರದಲ್ಲಿ ಸತತವಾಗಿ 3 ಬಾರಿ ನರೇಂದ್ರ ಮೋದಿ ಜೀ ಅವರ ಸರ್ಕಾರ ಇದೆ. ಬಿಜೆಪಿ ಬ್ಯಾಲೆಟ್ ಪೇಪರ್‌ಗೆ ಹೆದರಿಕೊಳ್ಳುವ ಅವಶ್ಯಕತೆ ಇಲ್ಲ. ಇವಿಎಂ ಬಗ್ಗೆಯೂ ಹೆದರುವ ಅವಶ್ಯಕತೆ ಇಲ್ಲ ಎಂದು ತಿಳಿಸಿದರು.

ರಾಹುಲ್ ಗಾಂಧಿಯವರಿಗೆ ಮತ್ತು ರಾಜ್ಯದ ಮುಖ್ಯಮಂತ್ರಿಗಳಿಗೆ ಇವಿಎಂ ಬಗ್ಗೆ ಸಮಸ್ಯೆ ಇದ್ದರೆ ಕಾಂಗ್ರೆಸ್ ಪಕ್ಷ ಹಿಮಾಚಲ ಪ್ರದೇಶದಲ್ಲಿ ಹೇಗೆ ಅಧಿಕಾರಕ್ಕೆ ಬಂದಿತು ತೆಲಂಗಾಣ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಹೇಗೆ ಅಧಿಕಾರಕ್ಕೆ ಬಂತು ಇದೇ ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ಹೇಗೆ ಅಧಿಕಾರಕ್ಕೆ ಬಂತು.. ಆ ಸಮಯದಲ್ಲಿ ಇವಿಎಂ ಸಮಸ್ಯೆ ಇರಲಿಲ್ಲವೇ ಬ್ಯಾಲೆಟ್ ಪೇಪರ್ ಬೇಕು ಅನ್ನಿಸಲಿಲ್ಲವೇ ಮಹಾರಾಷ್ಟ್ರ, ಹರಿಯಾಣ ರಾಜ್ಯಗಳಲ್ಲಿ ಸತತವಾಗಿ ಸೋಲನ್ನು ಕಂಡಿರುವ ಕಾಂಗ್ರೆಸ್ ಪಕ್ಷದವರು ಇಂದು ಹತಾಶರಾಗಿ ಚುನಾವಣಾ ಆಯೋಗದ ವಿರುದ್ಧ ಆರೋಪ ಮಾಡುತ್ತಿದ್ದಾರೆ. ಇವಿಎಂ ದೋಷಪೂರಿತ ಎಂದು ಆರೋಪ ಮಾಡುತ್ತಾರೆ ಎಂದು ಕಿಡಿಕಾರಿದರು. ಮೋದಿಜೀ ಅವರ ಅಪೇಕ್ಷೆಯಂತೆ ಒಂದು ದೇಶ ಒಂದು ಚುನಾವಣೆಯಿಂದ ದೇಶಕ್ಕೆ ಸಾಕಷ್ಟು ಒಳಿತಾಗುತ್ತದೆ.

ಆ ನಿಟ್ಟಿನಲ್ಲಿ ಜನಾಭಿಪ್ರಾಯ ಮೂಡಿಸಬೇಕು ಸದುದ್ದೇಶ ಇಟ್ಟುಕೊಂಡು ದೇಶಾದ್ಯಂತ ಒಂದು ದೇಶ ಒಂದು ಚುನಾವಣೆ ಕಾರ್ಯಕ್ರಮ ನಡೆಯುತ್ತಿದೆ. ಆದ್ರೆ ಕಾಂಗ್ರೆಸ್ಸಿನವರು ಎಲ್ಲದರಲ್ಲೂ ವಿರೋಧ ಮಾಡುತ್ತಿದ್ದಾರೆ. ವಕ್ಫ್ ಬೋರ್ಡ್ ಬಗ್ಗೆ ಹೋರಾಟ ಮಾಡಿ ತಿದ್ದುಪಡಿ ಕಾಯ್ದೆಯನ್ನ ವಿರೋಧಿಸಿದರು, ಆರ್ಟಿಕಲ್ 370 ಬಗ್ಗೆ ವಿರೋಧ ವ್ಯಕ್ತಪಡಿಸಿದರು, ಒಂದು ದೇಶ ಒಂದು ಚುನಾವಣೆಯನ್ನೂ ವಿರೋಧ ಮಾಡಿದರು. ಅದೇ ರೀತಿ ಇವಿಎಂ ಅನ್ನು ವಿರೋಧ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.



### ಇಳಿವಯಸ್ಸಿನಲ್ಲೂ ದೇವೇಗೌಡರು ದೇಶದ ಬಗ್ಗೆ ಇಟ್ಟಿರುವ ಕಾಳಜಿ

ಇಳಿವಯಸ್ಸಿನಲ್ಲೂ ದೇವೇಗೌಡರು ದೇಶದ ಬಗ್ಗೆ ಇಟ್ಟಿರುವ ಕಾಳಜಿ, ಮೋದಿ ಅವರ ನಾಯಕತ್ವದ ಬಗ್ಗೆ ಅವರು ಇಟ್ಟಿರುವ ವಿಶ್ವಾಸ ಇವೆಲ್ಲವೂ ಯುವ ರಾಜಕಾರಣಿಗಳು, ನಮ್ಮಂಥವರಿಗೆ ಮಾದರಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು. ದೇವೇಗೌಡರನ್ನು ಭೇಟಿ ಮಾಡಿ ಆಶೀರ್ವಾದ ಪಡೆಯಲು ಮತ್ತು ಅವರಿಗೆ ಅಭಿನಂದನೆ ಸಲ್ಲಿಸಲು ಬಯಸಿದ್ದೆ. ಅವರ ಮಾರ್ಗದರ್ಶನ ಪಡೆಯಲು ನಾನು ಮತ್ತು ಪಕ್ಷದ ಹಿರಿಯ ಶಾಸಕರು ಬಂದು ಅವರನ್ನು ಭೇಟಿ ಮಾಡಿದ್ದೇವೆ. ಮುಕ್ಕಾಲು ಗಂಟೆಗೂ ಹೆಚ್ಚು ಕಾಲ ರಾಜ್ಯದ ಮತ್ತು ದೇಶದ ಪ್ರಚಲಿತ ರಾಜಕಾರಣದ ಬಗ್ಗೆ ಅವರು ಚರ್ಚೆ ಮಾಡಿದರು. ಪ್ರಧಾನಮಂತ್ರಿಗಳಾಗಿ ಇದ್ದ ದಿನಗಳನ್ನೂ ಅವರು ಮೆಲುಕು ಹಾಕಿದರು ಎಂದರು.ಭಾರತವನ್ನು ಸದೃಢವಾಗಿ ಮುನ್ನಡೆಸಲು ನರೇಂದ್ರ ಮೋದಿಯವರಿಂದ ಮಾತ್ರ ಸಾಧ್ಯ. ಇನ್ನ್ಯಾರಿಂದಲೂ ಇದು ಸಾಧ್ಯವಿಲ್ಲ; ಮೋದಿಜೀ ಅವರು ಸವಾಲನ್ನು ಸ್ವೀಕರಿಸಿ ದೇಶವನ್ನು ಮುನ್ನಡೆಸುತ್ತಿದ್ದಾರೆ. ಅವರೇ ಇಂಥ ಬಲಿಷ್ಠ ಭಾರತ ಮುನ್ನಡೆಸಲು ಸಾಧ್ಯ ಎಂಬ ಮಾತನ್ನೂ ಅವರು ಉಲ್ಲೇಖಿಸಿದರು ಎಂದು ತಿಳಿಸಿದರು.

**ಇವಿಎಂ ಬದಲು ಬ್ಯಾಲೆಟ್ ಪೇಪರ್**

ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ವಿದ್ಯುನ್ಮಾನ ಮತಯಂತ್ರ ಬದಲಿಗೆ ಬ್ಯಾಲೆಟ್ ಪೇಪರ್ ಬಳಸಲು ರಾಜ್ಯ ಸಚಿವ ಸಂಪುಟ ತೀರ್ಮಾನಿಸಿದ್ದನ್ನು ಬಿಜೆಪಿ ತೀವ್ರವಾಗಿ ವಿರೋಧಿಸುತ್ತಿದೆ. ಹಳೆಯ ಚುನಾವಣಾ ಪದ್ಧತಿಯನ್ನು ಮರುಸ್ಥಾಪಿಸುವುದು ಅರ್ಥಹೀನ ಎಂದು ಹೀಗಳೆದಿದೆ. ಸಂವಿಧಾನವಾದಿ, ಪ್ರಜಾಪ್ರಭುತ್ವವಾದಿ ಎಂದು ಇತಿಹಾಸದಲ್ಲಿ ಗುರುತಿಸಿಕೊಳ್ಳಲು ಬಯಸುತ್ತಿರುವ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಅವರೇ, ನೀವು ಹೈಕಮಾಂಡ್ ಗುಲಾಮಗಿರಿಗಾಗಿ, ಅಧಿಕಾರಕ್ಕಾಗಿ ಆತ್ಮಸಾಕ್ಷಿಯನ್ನೇ ಮಾರಿಕೊಂಡು ಆತ್ಮವಂಚಕ ಎಂಬ ಹಣೆಪಟ್ಟಿ ಕಟ್ಟಿಕೊಳ್ಳಲು ಬಯಸುವಿರೇ ಎಂದು ಪ್ರಶ್ನಿಸಿದ್ದಾರೆ. ಬ್ಯಾಲೆಟ್ ಪೇಪರ್= ಬೋಗಸ್ ವೋಟಿಂಗ್, ಬ್ಯಾಲೆಟ್ ಪೇಪರ್ = ಬೂತ್ ಕ್ಯಾಪ್ಚರಿಂಗ್ ಎಂದು ವ್ಯಾಖ್ಯಾನಿಸಿರುವ ಅವರು, ಹ್ಯಾಟ್ರಿಕ್ ಝೀರೋ ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಸಂಪೂರ್ಣ ನೆಲಕಚ್ಚಿರುವ ಕಾಂಗ್ರೆಸ್ ಪಕ್ಷ, ಅವರನ್ನು ರಕ್ಷಿಸಲು, ಚುನಾವಣಾ ಆಯೋಗ, ಚುನಾವಣಾ ಪ್ರಕ್ರಿಯೆ, ಮತಯಂತ್ರಗಳ ಬಗ್ಗೆ ಇಲ್ಲಸಲ್ಲದ ಅನುಮಾನ ಬಿತ್ತಿ ಊಹಾಪೋಹ ಸೃಷ್ಟಿ ಮಾಡುವ ಪ್ರಯತ್ನ ಕಾಂಗ್ರೆಸ್ ಮಾಡುತ್ತಿದೆ.

**ಚುನಾವಣಾ ಆಯೋಗದ ವಿರುದ್ಧ ಆರೋಪ**

**ಸೋತಾಗ ಇವಿಎಂ ಸರಿ ಇಲ್ಲ**

ಮುಂಬರುವ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಇವಿಎಂ ಬದಲಿಗೆ ಮತಪತ್ರ (ಬ್ಯಾಲೆಟ್ ಪೇಪರ್) ಜಾರಿಗೆ ತರಲು ಮುಂದಾಗಿರುವ ರಾಜ್ಯ ಸರ್ಕಾರದ ಕ್ರಮದ ವಿರುದ್ಧ ಕಾನೂನು ಹೋರಾಟ ನಡೆಸುವುದಾಗಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಮಹಾರಾಷ್ಟ್ರ, ಹರಿಯಾಣ, ದೆಹಲಿ ಮತ್ತಿತರ ಕಡೆ ಸೋತು ಸುಣ್ಣವಾಗಿರುವ ಕಾಂಗ್ರೆಸ್ ಒಲ್ಲದ ಗಂಡನಿಗೆ ಮೊಸರಲ್ಲಿ ಕಲ್ಲು ಎಂಬಂತೆ ಇವಿಎಂ ಮೇಲೆ ದೂಷಣೆ ಮಾಡುತ್ತಿದೆ ಎಂದು ವಾಗ್ದಾಳಿ ನಡೆಸಿದರು. ಕಾಂಗ್ರೆಸ್ ಗೆದ್ದಾಗ ಇವಿಎಂ ಸೇರಿದಂತೆ ಇಡೀ ವ್ಯವಸ್ಥೆ ಚೆನ್ನಾಗಿರುತ್ತದೆ. ಸೋತಾಗ ಇವಿಎಂ ಸರಿ ಇಲ್ಲ, ಚುನಾವಣಾ ಆಯೋಗವೂ ಸರಿ ಇಲ್ಲ. ಇದು ಅದರ ದ್ವಂದ್ವ ನೀತಿ ಎಂದು ಕಿಡಿಕಾರಿದರು.

## ಬದುಕಿದ್ದೇವೆಂದು ತೋರಿಸಿಕೊಳ್ಳುವ ಯತ್ನ: ಡಿಕೆ ಶಿವಕುಮಾರ್

• **ಉದಯವಾಹಿನಿ, ಬೆಂಗಳೂರು**

**ಉದ್ಘಾಟನೆ ವಿರೋಧಿಸಿ ಅರ್ಜಿ**

ತಾವು ಬದುಕಿದ್ದೇವೆ ಎಂದು ತೋರಿಸಿಕೊಳ್ಳಲು ಕೆಲವರು ಬಾನು ಮುಷ್ತಾಕ್‌ಅವರಿಂದ ದಸರಾ ಉದ್ಘಾಟನೆ ವಿರೋಧಿಸಿ ಹೈಕೋರ್ಟ್ ನಲ್ಲಿ ಅರ್ಜಿ ಸಲ್ಲಿಸಿದ್ದಾರೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿರುಗೇಟು ನೀಡಿದ್ದಾರೆ.

ಸದಾಶಿವನಗರ ನಿವಾಸದ ಬಳಿ ಡಿಕೆ ಶಿವಕುಮಾರ್ ಅವರು ಬಾನು ಮುಷ್ತಾಕ್ ವಿರುದ್ಧ ಮಾಜಿ ಸಂಸದ ಅರ್ಜಿ ಸಲ್ಲಿಸಿರುವ ಬಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ಭಾನುವಾರ ಪ್ರತಿಕ್ರಿಯೆ ನೀಡಿದರು.

ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಅವರನ್ನು ಆಹ್ವಾನಿಸಿರುವುದನ್ನು ಪ್ರಶ್ನಿಸಿ ಮಾಜಿ ಸಂಸದ ಪ್ರತಾಪ್ ಸಿಂಹ ಅವರು ಹೈ ಕೋರ್ಟ್ ಮೆಟ್ಟಿಲೇರಿರುವ ಬಗ್ಗೆ ಕೇಳಿದಾಗ, ಈ ಬಗ್ಗೆ ಸಿಎಂ ಈಗಾಗಲೇ ಉತ್ತರ ನೀಡಿದ್ದಾರೆ. ಅವರ ಪಕ್ಷ ಅವರನ್ನು (ಪ್ರತಾಪ್ ಸಿಂಹ) ಕಡೆಗಣಿಸಿದೆ. ಪಾಪ ಆತನಿಗೂ ರಾಜಕೀಯ ಮಾಡಬೇಕಿದೆ. ಹೀಗಾಗಿ ತನ್ನ ಅಸ್ತಿತ್ವ ತೋರಿಸಿಕೊಳ್ಳಲು ಹೀಗೆಲ್ಲಾ ಮಾಡುತ್ತಿದ್ದಾರೆ. ಈ ಬಗ್ಗೆ ಕೋರ್ಟ್ ವಿಚಾರಣೆ ಮಾಡಿ, ತೀರ್ಮಾನ ಮಾಡಲಿದೆ ಎಂದರು.

ನಾಡ ಹಬ್ಬ ವಿಚಾರದಲ್ಲಿ ರಾಜಕೀಯ ಮಾಡುತ್ತಿರುವ ಬಗ್ಗೆ ಕೇಳಿದಾಗ, ಇದರ ಹೊರತಾಗಿ ರಾಜಕೀಯ ಮಾಡಲು ಅವರಿಗೆ ಬೇರೆ ವಿಚಾರ ಇಲ್ಲ. ಅವರಿಗೆ ರಾಜ್ಯದ ಬಗ್ಗೆ ಕಾಳಜಿ ಇದ್ದರೆ ದೆಹಲಿಗೆ ಹೋಗಿ ಕೇಂದ್ರ ಸರ್ಕಾರದ ಮೇಲೆ ಒತ್ತಡ ತಂದು ಬೆಂಗಳೂರು ಅಭಿವೃದ್ಧಿಗೆ ಅನುದಾನ, ಮೇಕೆದಾಟು, ಮಹದಾಯಿ, ಕೃಷ್ಣಾ ಮೇಲ್ದಂಡೆ ಯೋಜನೆಗಳಿಗೆ ಅನುಮತಿ, ನರೇಗಾ ಅನುದಾನ ಕೊಡಿಸಲಿ. ಅದನ್ನು ಬಿಟ್ಟು ಈ ರೀತಿ ಖಾಲಿ ಮಾತು ಆಡೋದು ಬೇಡ.



ಕೇವಲ ಪ್ರಚಾರಕ್ಕೆ ಅವರೆಲ್ಲ ಹೀಗೆ ರಾಜಕೀಯ ಮಾಡುತ್ತಾರೆ ಎಂದು ಹರಿಹಾಯ್ದರು.

**ಬಿಜೆಪಿ ನಾಯಕರಿಂದಲೇ ಧರ್ಮಸ್ಥಳಕ್ಕೆ ಅಪಮಾನ:** ಧರ್ಮಸ್ಥಳ ವಿಚಾರದಲ್ಲಿ ಸತ್ಯಾಂಶ ಒದಗಿಸಿರುವವರು ನಾವು. ಆದರೆ ಅವರು ನಮಗಿಂತ ಮುಂಚಿತವಾಗಿ ಹೈಸ್ಪೀಡ್ ನಲ್ಲಿ ಹೊರಟಿದ್ದಾರೆ. ಬಿಜೆಪಿಯ ಎರಡು ಗುಂಪುಗಳ ನಡುವಣ ತಿಕ್ಕಾಟಕ್ಕೆ ಧರ್ಮಸ್ಥಳವನ್ನು ದುರುಪಯೋಗ ಮಾಡಿಕೊಳ್ಳುತ್ತಿದ್ದಾರೆ. ಬಲಿಪಶು ಮಾಡುತ್ತಿದ್ದಾರೆ. ಧರ್ಮಸ್ಥಳ ವಿಚಾರದಲ್ಲಿ ಷಡ್ಯಂತ್ರ ಮಾಡುತ್ತಿರುವವರು ಬಿಜೆಪಿಯವರು. ಬುರುಡೆ ಗಿರಾಕಿ ಯಾರು ಬಿಜೆಪಿ ಕಾರ್ಯಕರ್ತರಲ್ಲವೇ ಧರ್ಮಸ್ಥಳಕ್ಕೆ ಅಪಮಾನ ಆಗಿದ್ದರೆ ಅದು ಬಿಜೆಪಿ ನಾಯಕರು ಹಾಗೂ ಅದರ ಸಂಘಟನೆಯವರಿಂದ ಮಾತ್ರ ಎಂದು ಕಿಡಿಕಾರಿದರು.

ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಸುವ ಬಗ್ಗೆ ಬಿಜೆಪಿ ಟೀಕೆ ಬಗ್ಗೆ ಕೇಳಿದಾಗ, ಒಂದೆರಡು ದಿನಗಳಲ್ಲಿ ಬಿಜೆಪಿಯವರು ಮಾಡಿರುವ ಕಾನೂನನ್ನು ನಿಮ್ಮ ಮುಂದೆ ತಂದಿಡುತ್ತೇನೆ. ಅವರು ಮಾಡಿರುವ ಕಾನೂನಿನಲ್ಲಿ ಈ ಚುನಾವಣೆ ವೇಳೆ ಮತಯಂತ್ರ ಅಥವಾ ಮತಪತ್ರ ಬಳಕೆ ಮಾಡಬಹುದು ಎಂದು ಹೇಳಿದ್ದಾರೆ ಅವರು ಮಾಡಿರುವ ಕಾನೂನು ಪ್ರಕಾರ ನಡೆದರೆ ತಪ್ಪೇನಿದೆ ಎಂದು ಪ್ರಶ್ನಿಸಿದರು. ಬಾನು ಮುಷ್ತಾಕ್ ಅವರು ದಸರಾ ಉದ್ಘಾಟಕರಾಗಿ ಆಯ್ಕೆಯಾದ ದಿನಗಳಿಂದಲೂ ಪ್ರತಾಪ್ ಸಿಂಹ ವಿರೋಧ ವ್ಯಕ್ತಪಡಿಸುತ್ತಲೇ ಇದ್ದರು. ನಿಮ್ಮ ಅಲ್ಲಾಹ್ ನಿಮ್ಮನ್ನು ಮಸೀದಿ ಒಳಗೆ ಕರೆಸಿಕೊಳ್ಳುವುದಿಲ್ಲ. ಇನ್ನು ನಮ್ಮ ದೇವರು ಹೇಗೆ ಎಂದು ಈ ಹಿಂದೆ ಹೇಳಿಕೆ ಕೊಟ್ಟಿದ್ದರು. ಮೈಸೂರು ಜಿಲ್ಲಾಡಳಿತ ಸಾಹಿತಿ ಬಾನು ಮುಷ್ತಾಕ್‌ರಿಗೆ ಅಧಿಕೃತವಾಗಿ ಆಹ್ವಾನ ಕೊಟ್ಟ ನಂತರವೂ ಬಿಜೆಪಿ ನಾಯಕರು ವಿರೋಧ ವ್ಯಕ್ತಪಡಿಸುತ್ತಲೇ ಇದ್ದಾರೆ.

## ಬಿಡದಿ ಜಮೀನನ್ನ ರೈತರಿಗೆ ದಾನ ಮಾಡ್ತೇವೆ: ನಿಖಿಲ್

### ಬಿಡದಿ ಟೌನ್‌ಶಿಪ್ ಯೋಜನೆಯಲ್ಲಿ ಎಚ್‌ಡಿ ಕುಮಾರಸ್ವಾಮಿ ಪತ್ನಿ ಹಾಗೂ ಪುತ್ರ ಜಮೀನು ಸ್ವಾಧೀನಕ್ಕೆ ಅರ್ಜಿ

• **ಉದಯವಾಹಿನಿ, ಬೆಂಗಳೂರು**

ಬಿಡದಿ ಟೌನ್‌ಶಿಪ್ ಯೋಜನೆಯಲ್ಲಿ ಎಚ್‌ಡಿ ಕುಮಾರಸ್ವಾಮಿ ಪತ್ನಿ ಹಾಗೂ ಪುತ್ರ, ಜಮೀನು ಭೂಸ್ವಾಧೀನ ಪರಿಹಾರಕ್ಕೆ ಅರ್ಜಿ ಹಾಕಿದ್ದಾರೆ ಎಂದ ಡಿಕೆ ಶಿವಕುಮಾರ್ ಅವರಿಗೆ ನಿಖಿಲ್ ಕುಮಾರಸ್ವಾಮಿ ತಿರುಗೇಟು ನೀಡಿದ್ದಾರೆ. ನಾವು ಪರಿಹಾರಕ್ಕೆ ಅರ್ಜಿ ಹಾಕಿದ್ದರೆ, ಆ ಜಮೀನನ್ನು ರೈತರಿಗೆ ದಾನ ಮಾಡುತ್ತೇವೆ ಎಂದು ಹೇಳಿದ್ದಾರೆ.

ಯಶವಂತಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ನಡೆದ ಜೆಡಿಎಸ್ ಕಾರ್ಯಕ್ರದಲ್ಲಿ ಭಾನುವಾರ ಮಾತನಾಡಿದ ನಿಖಿಲ್ ಕುಮಾರಸ್ವಾಮಿ ಡಿಕೆ ಶಿವಕುಮಾರ್ ವಿರುದ್ಧ ವಾಗ್ದಾಳಿ ನಡೆದಿದರು.

ಡಿಕೆ ಶಿವಕುಮಾರ್ ಹೇಳಿದ್ದೆಲ್ಲಾ ಸುಳ್ಳು ಎಂದು ಹೇಳಿದರು. ಮಿಸ್ಟರ್ ಶಿವಕುಮಾರ್ ಅವರೇ ಸುಳ್ಳು ನಿಮ್ಮನೆ ದೇವರು. ವಿಷಯ ತಿಳಿದುಕೊಂಡು ಮಾತಾಡಿ. ಜಿಲ್ಲೆಯಲ್ಲಿ ಹೋಗಿ ತಾಲ್ಲೂಕಿನ ರೈತರ ಮುಂದೆ ಅಪಪ್ರಚಾರ ಮಾಡಿದ್ರೆ, ನಾವು ಕೈಕಟ್ಟಿ ಸುಮ್ನೆ ಕುಳಿತುಕೊಳ್ಳಲ್ಲ. ಅನಿತಾ ಕುಮಾರಸ್ವಾಮಿ ಅವರು ಜಮೀನು ಪರಿಹಾರ ಕೇಳಿ ಅರ್ಜಿ ಹಾಕಿದ್ರೆ, ಆ ಜಮೀನನ್ನ ರೈತರಿಗೆ ಬಡವರಿಗೆ ದಾನ ಮಾಡ್ತೇವೆ ಎಂದು ನಿಖಿಲ್ ಕುಮಾರಸ್ವಾಮಿ ಅವರು ಗುಡುಗಿದರು. ಡಿಕೆ ಶಿವಕುಮಾರ್ ಅವರೇ ನಾವು ಅಲ್ಲಿ ಯಾವುದೇ ಶಿಕ್ಷಣ ಸಂಸ್ಥೆ, ದೊಡ್ಡ ದೊಡ್ಡ ಮಾಲ್ ಗಳನ್ನ ನಾವು ಕಟ್ಟಿಕೊಂಡಿಲ್ಲ. ಕಂಡ ಕಂಡವರ ಜಮೀನಿಗೆ ಹೋಗಿಲ್ಲ. ಇನ್ನು ಬಹಳ ವಿಷಯವಿದೆ ರಾಮನಗರದಲ್ಲಿ ಬಂದು ಉತ್ತರ ಕೊಡ್ತೇನೆ ಎಂದು ಗುಡುಗಿದರು.

ರಾಮನಗರ ಜಿಲ್ಲೆಯಲ್ಲಿ ನಾಲ್ಕು ಕಾಂಗ್ರೆಸ್ ಶಾಸಕರು ಇದ್ದಾರೆ. ಬಿಡದಿ ಟೌನ್ ಶಿಪ್ ವಿಚಾರವಾಗಿ ಎಷ್ಟು ಜನ ಹೋಗಿ ರೈತರ ಕಷ್ಟವನ್ನ ಕೇಳಿದ್ರಿ, ರೈತರ ಮನೆಗೆ ಯಾರದ್ರು ಹೋಗಿದ್ರಾ. ಎಂದು ವಾಗ್ದಾಳಿ ನಡೆಸಿದರು. ಡಿ.ಕೆ ಶಿವಕುಮಾರ್ ಅವರಿಗೆ ಯಾವ ಅಧಿಕಾರಿ ಹೇಳಿದ್ರೋ ಗೊತ್ತಿಲ್ಲ. ಅನಿತಾ ಕುಮಾರಸ್ವಾಮಿ ಅವರ ಹೆಸರಿನಲ್ಲಿ ಎಷ್ಟು ಎಕರೆ ಜಮೀನು ಇದೆ ಅಂತ ಡಿಕೆ ಶಿವಕುಮಾರ್ ಅವರಿಗೆ ಗೊತ್ತಿಲ್ಲ. ಡಿ.ಕೆ ಶಿವಕುಮಾರ್ ಗಾಳಿಯಲ್ಲಿ ಗುಂಡಿ ಹೊಡೆಯೋ ಅಭ್ಯಾಸ ಎಂದು ಲೇವಡಿ ಮಾಡಿದರು. ಜಮೀನು ಖರೀದಿಸಿ 20ವರ್ಷದ ಮೇಲೆ ಆಗಿದೆ. ಇದ್ರಲ್ಲಿ ಮುಚ್ಚುಮರೆ ಏನು ಇಲ್ಲ ಇದು ಕೃಷಿ ಜಮೀನು. ದೇವೇಗೌಡರು ಕುಮಾರಣ್ಣ ಮೂಲತಃ ಕೃಷಿಕರು, ರೈತರು. ಕೇತಗನಹಳ್ಳಿ ಜಮೀನಿನ ಮೇಲೆ ರಚನೆ ಮಾಡಿದ್ರಿ. ಕೊನೆಗೆ ಸುಪ್ರೀಂ ಕೋರ್ಟ್ ನಲ್ಲಿ ಏನಾಯ್ತು ಎಂದು ನಿಖಿಲ್ ಕುಮಾರಸ್ವಾಮಿ ಅವರು ಗುಡುಗಿದರು.



### ಜೆಡಿಎಸ್ ಎರಡು ಸ್ಥಾನಕ್ಕಿಂತ ಜಾಸ್ತಿ ಗೆಲ್ಲಲ್ಲ ಎಂಬ ಹೇಳಿಕೆಗೆ ಟಾಂಗ್

ನಿಮಗೆ ತಾಕತ್ತು ಧಮ್ಮು ಇದ್ದರೆ ಪ್ರಾದೇಶಿಕ ಪಕ್ಷ ಕಟ್ಟಿ ನೋಡಿ. ಪ್ರಾದೇಶಿಕ ಪಕ್ಷ ಕಟ್ಟಿ ಕನಿಷ್ಟ ಎರಡಲ್ಲ ಒಂದು ಸ್ಥಾನ ತಗೊಳ್ಳಿ ನೋಡೋಣ. ಜೆಡಿಎಸ್ ಶಕ್ತಿ ಏನು ಅಂತ ಮುಂದಿನ ಚುನಾವಣೆಯಲ್ಲಿ ತೋರಿಸ್ತೇವೆ, ದಯವಿಟ್ಟು ಸ್ವಲ್ಪ ಸಹನೆ ಇರಲಿ ಎಂದು ಸಿದ್ದರಾಮಯ್ಯಗೆ ಹಾಗೂ ಡಿಕೆಶಿಗೆ ನಿಖಿಲ್ ಕುಮಾರಸ್ವಾಮಿ ಸವಾಲ್ ಹಾಕಿದರು. ಕಮೀಷನ್‌ಗಾಗಿ ಡಿಕೆಶಿ ಟನೆಲ್ ರೋಡ್ ಕಾಮಗಾರಿ ಮಾಡ್ತಿದ್ದಾರೆ. ಟೋಲ್ ಜಾಸ್ತಿ ಇರೋ ರಸ್ತೆಯಲ್ಲಿ ಶ್ರೀಮಂತರಷ್ಟೇ ಓಡಾಡಬೇಕು. ಈ ಸುರಂಗ ಮಾರ್ಗ ಯಾರಿಗೋಸ್ಕರ ಮಾಡ್ತಿದ್ದೀರಿ ಡಿಕೆಶಿ ಅಣ್ಣಾ ಟನೆಲ್ ರೋಡ್‌ನಲ್ಲಿ ಎಷ್ಟು ಕಮೀಷನ್ ತಗೊಳ್ತಿದೀಯಣ್ಣ ಯಾರಿಗೆ ಟೆಂಡರ್ ಕೊಡ್ತಿದ್ದೀಯಣ್ಣ ಜನರ ಮುಂದೆ ಹೇಳಿ ಶ್ವೇತಪತ್ರ ಹೊರಡಿಸಿ ಎಂದು ಕಿಡಿಕಾರಿದರು.

ರಿಯಲ್ ಎಸ್ಟೇಟ್ ದಂಧೆ ಮಾಡಲು ಬಿಬಿಎಂಪಿ ಪಂಚ ಪಾಲಿಕೆ ಮಾಡಿದ್ದಾರೆ. ಸಿಲಿಕಾನ್ ಸಿಟಿಯನ್ನು ಡಿಕೆಶಿ ಗಾರ್ಬೇಜ್ ಸಿಟಿ ಮಾಡಿದ್ದಾರೆ.

ಪಂಚ ಪಾಲಿಕೆಗಳಿಗೆ ಕಚೇರಿ ಮಾಡೋ ಮೊದಲು ನಗರದಲ್ಲಿ ಕಸ ಎತ್ತಿ. ಜಿಬಿಎ ಮಾಡಿದ್ರೆ, ಬೆಂಗಳೂರು ಅಭಿವೃದ್ಧಿ ಆಗುತ್ತಾ ಎಂದು ನಿಖಿಲ್ ಕುಮಾರಸ್ವಾಮಿ ಅವರು ಕಿಡಿಕಾರಿದರು.

ನಮ್ಮ ಮಿತ್ರಪಕ್ಷ ಬಿಜೆಪಿ ಜತೆ ನಮಗೆ ಆರೋಗ್ಯಕರ ಮಿತ್ರತ್ವ ಇದೆ. ನಾವು ಎರಡೂ ಪಕ್ಷಗಳು ಜನತೆಗೂಡಿ ಕೆಲಸ ಮಾಡ್ತಿದ್ದೇವೆ. ಮಾಜಿ ಸಿಎಂ ಯಡಿಯೂರಪ್ಪ ಅವರು ಮುತ್ಸದ್ದಿಗಳು. ಅವರು ಇತ್ತೀಚೆಗೆ ಅಭಿಮಾನದಿಂದ ಬಿಜೆಪಿ ಅಭ್ಯರ್ಥಿಯನ್ನು ಘೋಷಿಸಿದರು. ಇದರಿಂದ ಜೆಡಿಎಸ್ ಕಾರ್ಯಕರ್ತರು ಗೊಂದಲವಾಗಬಾರದು. ಬಿಜೆಪಿ ರಾಜ್ಯಾಧ್ಯಕ್ಷ ಅವರೇ ಅದಕ್ಕೆ ಸ್ಪಷ್ಟನೆ ಕೊಟ್ಟಿದ್ದಾರೆ ಎಂದು ಹೇಳಿದರು. ಡಿ.ಕೆ ಶಿವಕುಮಾರ್ ಅವರು ದೇವೇಗೌಡರ ಮೊಮ್ಮಗನಿಗೆ ಸೋಲಿಸಿದ್ದೇವೆ, ತಂತ್ರ ಮಾಡೋದು ನಮಗೂ ಗೊತ್ತಿದೆ ಅಂದಿದ್ದಾರೆ. ಆದರೆ ನಾನು ಕಾರ್ಯಕರ್ತರಿಗಾಗಿ ಚನ್ನಪಟ್ಟಣ ಚುನಾವಣೆಯಲ್ಲಿ ಸ್ಪರ್ಧಿಸಿದ್ದೆ. ಇವತ್ತು ಡಿಕೆಶಿ ಅವರು ತಮ್ಮ ಬೆನ್ನು ತಾವೇ ಬೆನ್ನು ತಟ್ಟಿಕೊಳ್ತಿದ್ದಾರೆ. ನಮಗೂ ಕಾಲ ಬರುತ್ತೆ, ಅಧಿಕಾರ ಶಾಶ್ವತ ಅಲ್ಲ ಎಂದು ಡಿಕೆಶಿಗೆ ನಿಖಿಲ್ ಕುಮಾರಸ್ವಾಮಿ ಟಾಂಗ್ ನೀಡಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಬ್ಯಾಲೆಟ್ ಪೇಪರ್ ತರಲು ಹೊರಟಿದೆ. ಕಾಂಗ್ರೆಸ್ ಪಕ್ಷ ಅನಾದಿ ಕಾಲಕ್ಕೆ ಹೋಗ್ತಿದೆ. ಎರಡು ಸಲ ಕಾಂಗ್ರೆಸ್ ಗೆದ್ದಿದ್ದು ಇವಿಎಂ ಮೂಲಕವೇ ನಿಮಗೆ ಇವಿಎಂ ಬೇಡ ಅಂದ್ರೆ ರಾಜೀನಾಮೆ ಕೊಡಿ ಡಿಸಿಎಂ ಅವರೇ ರಾಜೀನಾಮೆ ಕೊಟ್ಟು ಚುನಾವಣೆಗೆ ಬನ್ನಿ. ಕಾಂಗ್ರೆಸ್ ನಾಯಕರದ್ದು ಉದ್ಧಟತನದ ರಾಜಕಾರಣ ಎಂದು ನಿಖಿಲ್ ಕುಮಾರಸ್ವಾಮಿ ಅವರು ವಾಗ್ದಾಳಿ ನಡೆಸಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹10,849/Gram24ct ₹9,945/Gram22ct ಬೆಳ್ಳಿ: ₹128.00/Gram

## 15 ದಿನಕ್ಕೆ 45 ಕೋಟಿ ದಾಟಿದ ದಂಡ ಪಾವತಿಯ ಮೊತ್ತ

• **ಉದಯವಾಹಿನಿ, ಬೆಂಗಳೂರು**

ಟ್ರಾಫಿಕ್ ಫೈನ್ ಪಾವತಿಗೆ 50% ಡಿಸ್ಕೌಂಟ್ ನೀಡಿದ್ದಕ್ಕೆ ಭರ್ಜರಿ ರೆಸ್ಪಾನ್ಸ್ ದೊರೆತಿದ್ದು, 15 ದಿನಕ್ಕೆ ದಂಡದ ಪಾವತಿ ಮೊತ್ತ 45 ಕೋಟಿ ರೂ. ದಾಟಿದೆ. ವಾಹನ ಮಾಲೀಕರು 16,21,721 ಬಾಕಿ ಕೇಸ್‌ಗಳಿಗೆ ದಂಡ ಪಾವತಿಸಿದ್ದು, ಇಲ್ಲಿವರೆಗೆ 45.52 ಕೋಟಿ ರೂ. ದಂಡ ಪಾವತಿಯಾಗಿದೆ. ಬೆಂಗಳೂರು ಸಂಚಾರಿ ಪೊಲೀಸರು ವಾಹನ ಸವಾರರಿಗೆ ಆ.23ರಿಂದ ದಂಡ ಪಾವತಿಸಲು ರಿಯಾಯಿತಿ ನೀಡಿದ್ದರು.

ಇನ್ನೂ ಸೆ.12ರವರೆಗೆ ದಂಡ ಪಾವತಿ ಮಾಡಲು ಕಾಲಾವಕಾಶವಿದ್ದು, ಕೇವಲ ಬೆಂಗಳೂರು ವ್ಯಾಪ್ತಿಯಲ್ಲಿ ನಿಯಮ ಉಲ್ಲಂಘಿಸಿದವರಿಗೆ ಮಾತ್ರ ದಂಡ ಪಾವತಿಸಲು ಅವಕಾಶವಿರುತ್ತದೆ. ಈ ಕುರಿತು ರಾಜ್ಯ ಸಾರಿಗೆ ಇಲಾಖೆ ಅಧೀನ ಕಾರ್ಯದರ್ಶಿ ಪುಷ್ಪ ವಿ.ಎಸ್ ಅವರು ಆದೇಶ ಹೊರಡಿಸಿ, ದಂಡ ಬಾಕಿ ಉಳಿಸಿಕೊಂಡಿರುವ ವಾಹನ ಮಾಲೀಕರು ಆ.23ರಿಂದ ಸೆ.12ರವರೆಗೂ ದಂಡದ ಕೇವಲ 50% ಮೊತ್ತವನ್ನು ಪಾವತಿಸುವಂತೆ ರಿಯಾಯಿತಿ ಘೋಷಿಸಿದ್ದರು.

## ಲೈಬ್ರರಿಯ ಕ್ಲರ್ಕ್ ಆದ ಪ್ರಜ್ವಲ್ ರೇವಣ್ಣ : ದಿನಕ್ಕೆ 522 ರೂ. ಸಂಬಳ

• **ಉದಯವಾಹಿನಿ, ಬೆಂಗಳೂರು**

ಅತ್ಯಾಚಾರ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಪರಪ್ಪನ ಅಗ್ರಹಾರದಲ್ಲಿ ಸಾಮಾನ್ಯ ಕೈದಿಗಳಂತೆ ತಮ್ಮ ತಪ್ಪಿಗೆ ಶಿಕ್ಷೆಯನ್ನ ಅನುಭವಿಸುತ್ತಿದ್ದಾರೆ. ಜೈಲಾಧಿಕಾರಿಗಳು ಪ್ರಜ್ವಲ್ ರೇವಣ್ಣರನ್ನು ಲೈಬ್ರರಿಯ ಕ್ಲರ್ಕ್ ಆಗಿ ನೇಮಿಸಿದ್ದು, ಪುಸ್ತಕಗಳನ್ನು ಕೊಡುವುದು ಹಾಗೂ ನೋಂದಣಿ ಮಾಡಿಕೊಳ್ಳುವ ಕೆಲಸವನ್ನು ಮಾಡುತ್ತಿದ್ದಾರೆ. ಸದ್ಯ ಒಂದು ದಿನದ ಮಟ್ಟಿಗೆ ಪ್ರಜ್ವಲ್ ಕೆಲಸ ಮಾಡಿದ್ದು, ದಿನಗೂಲಿಯಾಗಿ ದಿನಕ್ಕೆ 522 ರೂ. ಗಳನ್ನ ನೀಡಲಾಗುತ್ತದೆ. ಕೆಲಸಕ್ಕೆ ಹಾಜರಾಗದಿದ್ದರೆ ಸಂಬಳ ನೀಡಲಾಗುವುದಿಲ್ಲ. ಟ್ರಯಲ್ ಕೋರ್ಟ್‌ಗೆ ಆಗಾಗ ಬರಬೇಕಾಗಿರುವುದರಿಂದ ಹಾಗೂ ವಕೀಲರ ಜೊತೆ ಇತರೇ ಕೇಸ್‌ಗಳ ಸಂಬಂಧ ಚರ್ಚೆ ಮಾಡಬೇಕಾಗಿರುವ ಕಾರಣ ಪ್ರಜ್ವಲ್ ರೇವಣ್ಣ ಅವರನ್ನು ಪೂರ್ತಿ ಕೆಲಸಕ್ಕೆ ನಿಯೋಜಿಸಿಲ್ಲ.

## ಚಂದ್ರನೇಕೆ ಕೆಂಪು ಕೆಂಪಾಗಲಿದ್ದಾನೆ?; ಗ್ರಹಣ ವೀಕ್ಷಣೆಗೆ ಎಲ್ಲೆಲ್ಲಿ ವ್ಯವಸ್ಥೆ?

• **ಉದಯವಾಹಿನಿ, ಬೆಂಗಳೂರು**

ಸಂಪೂರ್ಣ ರಕ್ತಚಂದ್ರಗ್ರಹಣ ಸಂಭವಿಸಲಿದೆ. ನಭೋಮಂಡಲದ ಈ ವಿಸ್ಮಯದ ಅದ್ಭುತ ಕಣ್ತುಂಬಿಕೊಳ್ಳಲು ಜನರು ಕಾತರರಾಗಿದ್ದಾರೆ. ಬೆಳದಿಂಗಳ ಚಂದಿರ ಅದ್ಯಾಕೆ ಇಂದು ಗ್ರಹಣದ ದಿನ ರಕ್ತ ವರ್ಣದಲ್ಲಿ ಕಾಣಿಸಲಿದ್ದಾನೆ ಇದರ ವೈಜ್ಞಾನಿಕ ಕಾರಣಗಳೇನು

**ಚಂದಿರನೇಕೆ ರಕ್ತವರ್ಣದಲ್ಲಿ ಕಂಗೊಳಿಸಲಿದ್ದಾನೆ:** ಚಂದ್ರಗ್ರಹಣ ಸೂರ್ಯ ಚಂದ್ರರ ನಡುವೆ ಭೂಮಿ ನಿಖರವಾಗಿ ಬಂದಾಗ ಸಂಭವಿಸುತ್ತದೆ. ಭೂಮಿಯ



ನೆರಳು ಕೆಲ ಕಾಲ ಚಂದಿರನ ಮೇಲೆ ಬೀಳುವುದರಿಂದ ಅದು ಮರೆಯಾಗುತ್ತದೆ. ಭೂಮಿಯ ನೆರಳಿನಲ್ಲಿ 2 ಭಾಗ ಇದೆ. ಒಂದು ಗಾಢ ಕತ್ತಲೆಯ ಭಾಗ, ಇದನ್ನು ಅಂಬ್ರಾ ಎನ್ನಲಾಗುತ್ತದೆ. ಹೊರಗಿನ ಮಬ್ಬಾದ ಭಾಗವನ್ನು ಪೆನಾಂಬ್ರಾ ಎನ್ನಲಾಗುತ್ತದೆ.

ಚಂದ್ರನು ಸಂಪೂರ್ಣವಾಗಿ ಅಂಬ್ರಾ ನೆರಳಿನೊಳಗೆ ಪ್ರವೇಶಿಸುವಾಗ ಸಂಪೂರ್ಣವಾಗಿ ಚಂದ್ರ ತಾಮ್ರವರ್ಣದ ಅಥವಾ ಗಾಢ ಕೆಂಪುಬಣ್ಣದಲ್ಲಿ ಕಾಣಿಸುತ್ತಾನೆ.

**ಬಣ್ಣ ಬದಲಾವಣೆ ಪ್ರಕ್ರಿಯೆ ಯಾವಾಗ ಆರಂಭ:** ಸೆಪ್ಟೆಂಬರ್ 7 ರಂದು ರಾತ್ರಿ 9:57ಕ್ಕೆ ಚಂದ್ರ ಭೂಮಿಯ ಗಾಢ ನೆರಳಾದ ಅಂಬ್ರಾ ಒಳಗೆ ಪ್ರವೇಶಿಸಲು ಆರಂಭಿಸುತ್ತಾನೆ. ನಂತರ ಚಂದ್ರ ಹೆಚ್ಚಿನ ಭಾಗ ಭೂಮಿಯ ನೆರಳಿನಿಂದ ಅವರಿಸಲ್ಪಡಿಸುತ್ತ 11:01ಕ್ಕೆ ಸಂಪೂರ್ಣವಾಗಿ ಅಂಬ್ರಾದೊಳಗೆ ಸೇರುತ್ತದೆ.

## ಖರ್ಗೆ ಕುಟುಂಬಕ್ಕೆ ನಾಯಿಮರಿ ಗಿಫ್ಟ್ ಕೊಟ್ಟ ರಾಹುಲ್ ಗಾಂಧಿ

• **ಉದಯವಾಹಿನಿ, ಬೆಂಗಳೂರು**

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕುಟುಂಬಕ್ಕೆ ಲೋಕಸಭಾ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ನಾಯಿಮರಿ ಗಿಫ್ಟ್ ಕೊಟ್ಟಿದ್ದಾರೆ. ವೋಟ್ ಚೋರಿ (ಮತಗಳ್ಳತನ) ವಿರೋಧಿ ಅಭಿಯಾನದ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ರಾಹುಲ್ ಗಾಂಧಿ ಪ್ರತಿಭಟನೆ ನಡೆಸಿದ್ದರು. ಈ ವೇಳೆ, ಖರ್ಗೆಯವರ ಸದಾಶಿವನಗರ ನಿವಾಸಕ್ಕೆ ಭೇಟಿ ನೀಡಿದ್ದರು.

ಭೇಟಿ ಸಂದರ್ಭದಲ್ಲಿ ಖರ್ಗೆ ಕುಟುಂಬಕ್ಕೆ ಮುದ್ದಾದ ನಾಯಿಮರಿಯನ್ನು ಗಿಫ್ಟ್ ಆಗಿ ರಾಹುಲ್ ಗಾಂಧಿ ನೀಡಿದ್ದಾರೆ. ಖರ್ಗೆ ಕುಟುಂಬದ ಮಕ್ಕಳು ನಾಯಿಮರಿ ಜೊತೆ ಆಟವಾಡಿದರು. ಆಗಸ್ಟ್ 8 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆದಿತ್ತು. ಪ್ರತಿಭಟನೆಯಲ್ಲಿ ರಾಹುಲ್ ಗಾಂಧಿ ಪಾಲ್ಗೊಂಡಿದ್ದರು.

## ಭಾನು ಮುಷ್ತಾಕ್‌ಗೆ ಆಹ್ವಾನ: ಬಿಜೆಪಿ ರಾಜಕೀಯ

• **ಉದಯವಾಹಿನಿ, ಬೆಂಗಳೂರು**

ನಾಡಹಬ್ಬ ಮೈಸೂರು ದಸರಾ ಉದ್ಘಾಟನೆಗೆ ಸಾಹಿತಿ ಭಾನುಮುಸ್ತಾಕ್ ಅವರನ್ನು ಆಹ್ವಾನಿಸಿರುವ ವಿಚಾರದಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿದೆ. ಮಹಿಳೆ ವಿಚಾರದಲ್ಲಿ ರಾಜಕೀಯ ಮಾಡುತ್ತಿರುವುದು ನಾಚಿಕೆಗೇಡಿನ ಸಂಗತಿ ಎಂದು ಸಮಾಜ ಕಲ್ಯಾಣ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ ಮಹದೇವಪ್ಪ ಆರೋಪಿಸಿದ್ದಾರೆ. ಸಾಹಿತಿ ಭಾನುಮುಸ್ತಾಕ್ ಅವರಿಗೆ ಇತ್ತೀಚೆಗೆ ಬೂಕರ್ ಪ್ರಶಸ್ತಿ ಬಂದಿದೆ. ಜತೆಗೆ ಅವರು ಸಾಮಾಜಿಕ ಪಿಡುಗುಗಳ ವಿರುದ್ಧ. ಅವರೊಳಗಿನ ಧಾರ್ಮಿಕ ಸಂಕೋಲೆಗಳ ವಿರುದ್ಧ ಗಟ್ಟಿಯಾಗಿ ದನಿ ಎತ್ತಿದವರು. ಹೀಗಾಗಿ ಅವರನ್ನು ದಸರಾ ಉದ್ಘಾಟನೆಗೆ ಕರೆಯಲಾಗಿದೆ. ಇವರ ಆಯ್ಕೆಯನ್ನು ವಿರೋಧಿಸುವುದು ಸರಿಯಲ್ಲ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಬಿಜೆಪಿಗರಿಂದಲೇ ಛೀಮಾರಿ ಹಾಕಿಸಿಕೊಂಡು ಲೋಕಸಭಾ ಕ್ಷೇತ್ರದ ಟಿಕೆಟ್ ತಪ್ಪಿದ ಕ್ಷಣದಿಂದ ವಿಚಲಿತರಾಗಿರುವ ಮಾಜಿ ಸಂಸದ ಪ್ರತಾಪ್‌ಸಿಂಹ ಅವರು ಸಾಹಿತಿ ಭಾನುಮುಸ್ತಾಕ್ ಆಯ್ಕೆಯ ವಿರುದ್ಧ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿರುವುದರ ಹಿಂದೆ ದೇಶದ ಹಿತಾಸಕ್ತಿ ಬಿಟ್ಟರೆ, ಸಾರ್ವಜನಿಕ ಹಿತಾಸಕ್ತಿ ಏನೂ ಇಲ್ಲ ಎಂದು ಅವರು ಹೇಳಿದ್ದಾರೆ. ನಾಡು. ನುಡಿ, ಸಂಸ್ಕರತಿ ಮತ್ತು ಸಾಹಿತ್ಯದ ಗಂಧ ಗಾಳಿ ಇಲ್ಲದೆ ಬರೀ ದ್ವೇಷವನ್ನೇ ಉಸಿರಾಡುತ್ತಿರುವ ಬಿಜೆಪಿಗರು ಮಹಿಳೆಯ ವಿಚಾರದಲ್ಲಿ ರಾಜಕೀಯ ಮಾಡುತ್ತಿರುವುದ ನಾಚಿಕೆಗೇಡು ಎಂದೂ ಅವರು ಹೇಳಿದ್ದಾರೆ.

ಸಾಹಿತ್ಯದ ಮೂಲಕ ನಾಡಿಗೆ ಹೆಸರು ತಂದವರನ್ನು ಜಾತಿ, ಧರ್ಮದ ಮೇಲೆ ಅಳೆಯುವುದು ಹಾಗೂ ಅವರ ಅರ್ಹತೆಯನ್ನು ಪ್ರಶ್ನಿಸುವುದು ಮನುವಾದದ ಮೂಲಗುಣ, ನಾಡಹಬ್ಬ ಬಿಜೆಪಿ, ಆರ್‌ಎಸ್‌ಎಸ್‌ಗೆ ಸಂಬಂಧಿಸಿದ ಉತ್ಸವವಲ್ಲ ಎಂದು ಬಿಜೆಪಿಗರು ಅರಿಯಲಿ ಎಂದು ಡಾ. ಎಚ್.ಸಿ ಮಹದೇವಪ್ಪ ತಿಳಿಸಿದ್ದಾರೆ.

# ದೇವನಹಳ್ಳಿಯಲ್ಲಿ ಕೆಎಚ್‌ಬಿ ವಸತಿ ಯೋಜನೆ

### ಬಡ-ಮಧ್ಯಮ ವರ್ಗದವರ ಕನಸು ನನಸು ಮಾಡುವ ನಿಟ್ಟಿನಲ್ಲಿ ಕೆಎಚ್‌ಬಿ ಹಲವು ಯೋಜನೆ ಜಾರಿ

• **ಉದಯವಾಹಿನಿ, ಬೆಂಗಳೂರು**

ತೀವ್ರಗತಿಯ ನಗರದ ಅಭಿವೃದ್ಧಿ, ಕೈಗಾರಿಕಾ ಬೆಳವಣಿಗೆಯಿಂದ ರಾಜಧಾನಿಯಲ್ಲಿ ವಸತಿ ಬೇಡಿಕೆಯನ್ನು ಹೆಚ್ಚಿದೆ. ಇದಕ್ಕೆ ಪೂರಕವಾಗಿ ದೇವನಹಳ್ಳಿಯ ಮಾಹಿತಿ ತಂತ್ರಜ್ಞಾನ ಹೂಡಿಕೆ ಪ್ರದೇಶ (ಐಟಿಐಆರ್) ಸಮೀಪದ 772 ಎಕರೆ ಜಾಗದಲ್ಲಿ ವಸತಿ ಯೋಜನೆ ರೂಪಿಸಲು ಕರ್ನಾಟಕ ಗೃಹ ಮಂಡಳಿ (ಕೆಎಚ್‌ಬಿ) ನಿರ್ಧರಿಸಿದೆ.



ಉದಯವಾಹಿನಿ ಚಿತ್ರ

**ಆಯುಕ್ತ ಕೆ.ಎ.ದಯಾನಂದ ಹೇಳಿಕೆ**

ರಾಜಧಾನಿಯಲ್ಲಿ ಸೂರು ಹೊಂದಬೇಕೆನ್ನುವ ಬಡ-ಮಧ್ಯಮ ವರ್ಗದವರ ಕನಸು ನನಸು ಮಾಡುವ ನಿಟ್ಟಿನಲ್ಲಿ ಕೆಎಚ್‌ಬಿ ಹಲವು ಯೋಜನೆ ಜಾರಿಗೊಳಿಸುತ್ತಿದೆ. ಯಲಹಂಕ, ಆನೇಕಲ್ ತಾಲ್ಲೂಕಿನ ಸೂರ್ಯನಗರ ಮತ್ತು ಕೆಂಗೇರಿಯಲ್ಲಿ ಸುಮಾರು 4 ರಿಂದ 5 ಸಾವಿರ ಫ್ಲ್ಯಾಟ್‌ಗಳನ್ನು ನಿರ್ಮಿಸುವ ಗುರಿ ಹೊಂದಿದೆ.

ಇದಕ್ಕೆ ಪೂರಕವಾಗಿ ಸೂರ್ಯನಗರ, ಕೆಂಗೇರಿಯಲ್ಲಿ ಈಗಾಗಲೇ ಕೆಲವು ಪ್ರಕ್ರಿಯೆಗಳನ್ನು ಆರಂಭಿಸಿದೆ.

ಸೂರ್ಯನಗರದ ವಿವಿಧ ಹಂತಗಳಲ್ಲಿ ನಾನಾ ಮಾದರಿಯ ಯೋಜನೆಗಳ ಕಾಮಗಾರಿಗಳನ್ನು ಆರಂಭಿಸಲು ಮುಂದಾಗಿದೆ. ಅಲ್ಲದೆ, ಕೆಂಗೇರಿ ಹೋಬಳಿಯ ಬಿಎಂ ಕಾವಲ್‌ನಲ್ಲಿ 50:50 ಮಾದರಿಯಲ್ಲಿ ಹೊಸ ಯೋಜನೆ ರೂಪಿಸಲು 315 ಎಕರೆ ಭೂಸ್ವಾಧೀನಕ್ಕೆ ಪ್ರಕ್ರಿಯೆಯನ್ನೂ ಆರಂಭಿಸಿದೆ. ಬೆಂಗಳೂರು ದಕ್ಷಿಣ ಜಿಲ್ಲೆ(ರಾಮನಗರ) ಕನಕಪುರ ತಾಲ್ಲೂಕು ವ್ಯಾಪ್ತಿಯ ಹಾರೋಹಳ್ಳಿ ಕೈಗಾರಿಕಾ ಪ್ರದೇಶದ ರಾಯಸಂದ್ರದಲ್ಲಿ 3 ಬಿಎಚ್‌ಕೆ ಡೂಪ್ಲೆಕ್ಸ್ ಮನೆಗಳ ನಿರ್ಮಾಣ ಯೋಜನೆಗೆ ಬೇಡಿಕೆ ಸಮೀಕ್ಷೆ ಕೂಡ ನಡೆಸಿದ್ದು, ಈ ಪ್ರದೇಶ ರಾಜಧಾನಿಗೆ ಸಮೀಪ ಕೂಡ ಇದೆ. ಇದೇ ಹಾದಿಯಲ್ಲಿ ಮತ್ತೊಂದು ಹೆಜ್ಜೆ ಇಡಲು ಸನ್ನದ್ಧವಾಗಿರುವ ಮಂಡಳಿಯು ಆರ್ಥಿಕ ದುರ್ಬಲ ವರ್ಗಗಳಿಗೆ ಮೂಲಸೌಕರ್ಯ ಆಧಾರಿತ ಫ್ಲ್ಯಾಟ್‌ಗಳನ್ನು ಕೈಗೆಟುಕುವ ದರದಲ್ಲಿನೀಡುವ ಗುರಿಯೊಂದಿಗೆ ಉದ್ದೇಶಿತ ವಸತಿ ಯೋಜನೆಗೆ ದೇವನಹಳ್ಳಿಯ ಕುಂದಾಣ ಹೋಬಳಿಯ 5 ಗ್ರಾಮಗಳನ್ನು ಒಳಗೊಂಡಂತೆ 772 ಎಕರೆ ಭೂಮಿ ಗುರುತಿಸಿದೆ. 50:50ರ ಸೂತ್ರದ ಮಾದರಿಯಲ್ಲಿ ಯೋಜನೆ ರೂಪಿಸಲು ನಿರ್ಧರಿಸಿದ್ದು ರೈತರು ಅನುಮತಿ ನೀಡಿದ ಬಳಿಕವೇ ಮಂಡಳಿ ಮುಂದುವರಿಯಲಿದೆ. ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣ ಹೋಬಳಿಯಲ್ಲಿ ಭೂಸ್ವಾಧೀನಕ್ಕೆ ಭಾರಿ ವಿರೋಧ ವ್ಯಕ್ತವಾಗಿತ್ತು.

**50:50 ಸೂತ್ರ**

**50:50 ಸೂತ್ರದ ಮಾದರಿಯಲ್ಲಿ ದೇವನಹಳ್ಳಿ ವಸತಿ ಯೋಜನೆ ಹಮ್ಮಿಕೊಳ್ಳುವ ಉದ್ದೇಶವನ್ನು ಮಂಡಳಿ ಹೊಂದಿದೆ. ಆದರೆ, ಇದರಲ್ಲಿ ಯಾವುದೇ ಒತ್ತಾಯವಿಲ್ಲ. ಅಲ್ಲಿನ ಸಾರ್ವಜನಿಕರು, ಭೂಮಾಲೀಕರು ಒಪ್ಪಿಗೆ ನೀಡಿದರೆ ಯೋಜನೆಗೆ ಸಂಬಂಧಿಸಿದಂತೆ ಮುಂದುವರಿಯುತ್ತೇವೆ ಎಂದು ಮಂಡಳಿಯ ಆಯುಕ್ತ ಕೆ.ಎ.ದಯಾನಂದ ತಿಳಿಸಿದ್ದಾರೆ.**

ಈ ಹಿನ್ನೆಲೆಯಲ್ಲಿ 1777 ಎಕರೆ ಭೂಮಿ ಸ್ವಾಧೀನದಿಂದ ಕೆಐಎಡಿಬಿ ಹಿಂದೆ ಸರಿದಿತ್ತು. ಗೃಹ ಮಂಡಳಿಯ ಉದ್ದೇಶಿತ ವಸತಿ ಯೋಜನೆಗೆ ಭೂಮಾಲೀಕರು ಹೇಗೆ ಪ್ರತಿಕ್ರಿಯಿಸುತ್ತಾರೆ ಎಂಬುಧಿದಧಿನ್ನು ಕಾದು ನೋಡಬೇಕಿದೆ.

**ಎಲ್ಲಿ-ಎಷ್ಟು:** ವಿಶ್ವನಾಥಪುರದಲ್ಲಿ 410 ಎಕರೆ 13 ಗುಂಟೆ, ವಾಜರಹಳ್ಳಿಯಲ್ಲಿ 42 ಎಕರೆ 20 ಗುಂಟೆ, ಬೀರಸಂದ್ರದಲ್ಲಿ 59 ಎಕರೆ 22 ಗುಂಟೆ, ಶಾಣಪ್ಪನಹಳ್ಳಿಯಲ್ಲಿ 83 ಎಕರೆ 23 ಗುಂಟೆ ಮನಗೊಂಡನಹಳ್ಳಿಯಲ್ಲಿ 177 ಎಕರೆ 12 ಗುಂಟೆ ಭೂಮಿ ಸ್ವಾಧೀನಕ್ಕೆ ಉದ್ದೇಶಿಸಲಾಗಿದೆ ಎನ್ನುತ್ತವೆ ಮಂಡಳಿಯ ಮೂಲಗಳು. 5 ಗ್ರಾಮಗಳೂ ದೇವನಹಳ್ಳಿ, ದೊಡ್ಡಬಳ್ಳಾಪುರ ಸಂಪರ್ಕಿಸುವ ಸ್ಯಾಟಲೈಟ್ ಟೌನ್ ರಿಂಗ್ ರಸ್ತೆಯ ಉದ್ದಕ್ಕೂ ನೆಲೆಗೊಂಡಿವೆ. ಐಟಿಐಆರ್ ಪಕ್ಕದಲ್ಲಿ ಫಾಕ್ಸ್‌ಕಾನ್ 300 ಎಕರೆ ಐಫೋನ್ ಘಟಕವನ್ನು ಘೋಷಿಸಿದೆ.

ಕೆಐಎಡಿಬಿ ಈಗಾಗಲೇ ಐಟಿಐಆರ್‌ಗಾಗಿ 2,000 ಎಕರೆಗೂ ಅಧಿಕ ಭೂಮಿ ಅಭಿವೃದ್ಧಿಪಡಿಸಿದೆ ಮತ್ತು ಹತ್ತಿರದ ಓಬದೇನಹಳ್ಳಿ ಕೈಗಾರಿಕಾ ಪ್ರದೇಶವನ್ನು ವಿಸ್ತರಿಸುತ್ತಿದೆ. ಅಲ್ಲದೆ, ಖಾಸಗಿ ವಿಶ್ವವಿದ್ಯಾಲಯಗಳು, ಹಲವು ಶೈಕ್ಷಣಿಕ ಸಂಸ್ಥೆಗಳು ದೇವನಹಳ್ಳಿ ಸುತ್ತಮುತ್ತ ಕಾಧಿರ್ಯಚಟುವಟಿಕೆ ನಡೆಸುತ್ತಿವೆ.

## ಗಾಂಧಿ ಭಾರತ ಶತಮಾನೋತ್ಸವ ಸಮಾರೋಪ

• **ಉದಯವಾಹಿನಿ, ಬೆಂಗಳೂರು**

ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಗಾಂಧಿ ಭಾರತ ಶತಮಾನೋತ್ಸವದ ಅಂಗವಾಗಿ 2025ರ ಡಿಸೆಂಬರ್ 26ರಂದು ಗಾಂಧಿ ಭಾರತ ಶತಮಾನೋತ್ಸವ ಸಮಾರೋಪ ಸಮಾರಂಭವನ್ನು ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಶನಿವಾರ ಸೂಚನೆ ನೀಡಿದರು.

ಸಿಎಂ ಅಧಿಕೃತ ನಿವಾಸ ಕಾವೇರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ 'ಗಾಂಧಿ ಭಾರತ ಶತಮಾನೋತ್ಸವ' ಸಮಿತಿ ಸಭೆ ನಡೆಯಿತು.

ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು, ಗಾಂಧಿ ಭಾರತ ಶತಮಾನೋತ್ಸವ ಅಂಗವಾಗಿ ಕಳೆದ ಡಿಸೆಂಬರ್ 26 ರಂದು ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗಿದ್ದು, ಡಿಸೆಂಬರ್ 26, 2025 ರಂದು ಗಾಂಧಿ ಭಾರತ ಶತಮಾನೋತ್ಸವ ಕಾರ್ಯಕ್ರಮ ಸಮಾಪನೆಗೊಳ್ಳಲಿದೆ. ಈ ಅವಧಿಯಲ್ಲಿ ನಿರಂತರ ಅರ್ಥಪೂರ್ಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಸೂಚನೆ ನೀಡಿದರು.



ಉದಯವಾಹಿನಿ ಚಿತ್ರ

ಮಹಾತ್ಮ ಗಾಂಧೀಜಿ ಅವರ ಗ್ರಾಮ ಸ್ವರಾಜ್ ಪರಿಕಲ್ಪನೆಯಡಿ ಮಹಾ ಪಂಚಾಯತ್ ಸಮ್ಮೇಳನವನ್ನು ನ.14ರಂದು ಆಯೋಜಿಸಲಾಗುವುದು. ಈ ಬೃಹತ್ ಸಮ್ಮೇಳನದಲ್ಲಿ ಭಾಗವಹಿಸಲು ಗ್ರಾಮ ಪಂಚಾಯತ್‌ಗಳ ಮಾಜಿ ಹಾಗೂ ಹಾಲಿ ಸದಸ್ಯರನ್ನು ಆಹ್ವಾನಿಸಬೇಕು. ಡಿಸೆಂಬರ್ ತಿಂಗಳಲ್ಲಿ ಪಂಚಾಯತ್ ರಾಜ್ ಕಾಯ್ದೆ ಮತ್ತು ಗ್ರಾಮ ಸ್ವರಾಜ್ ಕುರಿತಾಗಿ ಎರಡು ದಿನಗಳ ರಾಷ್ಟ್ರೀಯ ಮಟ್ಟದ ವಿಚಾರ ಸಂಕಿರಣವನ್ನು ಆಯೋಜಿಸಲಾಗುವುದು. ಗಾಂಧೀಜಿ ಅವರು ಭೇಟಿ ನೀಡಿರುವ ಸ್ಮರಣಾರ್ಥ ರಾಜ್ಯದ 120 ಸ್ಥಳಗಳಲ್ಲಿ ಸ್ತಂಭಗಳನ್ನು ನವೆಂಬರ್ ಕೊನೆಯ ಒಳಗಾಗಿ ನಿರ್ಮಿಸಲಾಗುವುದು. ಗಾಂಧಿ ಭಾರತ ಅಂಗವಾಗಿ ರಾಜ್ಯಾದ್ಯಂತ ಜ್ಯೋತಿ ಯಾತ್ರೆಗಳನ್ನು ಆಯೋಜಿಸಲಾಗುವುದು. ಮಹಾತ್ಮ ಗಾಂಧೀಜಿ ಅವರ ಧ್ಯಾನಸ್ಥ ಭಂಗಿಯ ಭಾವಚಿತ್ರ ಅವರು ಬೋಧಿಸಿದ ಸಪ್ತ ಸಾಮಾಜಿಕ ಪಾತಕಗಳನ್ನು ಎಲ್ಲಾ ಶಾಲೆಗಳಲ್ಲಿ ಬರೆದು ಅಳವಡಿಸುವ ಕಾರ್ಯವನ್ನು ಪೂರ್ಣಗೊಳಿಸಬೇಕು.


**ರಂಗಾಯಣದ ವತಿಯಿಂದ ಗಾಂಧಿ ವರ್ಸಸ್ ಗಾಂಧಿ, ಪಾಪು-ಬಾಪು ಹಾಗೂ ಮಹಾತ್ಮರ ಬರುವಿಗಾಗಿ ಎಂಬ ಮೂರು ನಾಟಕಗಳನ್ನು ನಿರ್ಮಿಸಿ ರಾಜ್ಯಾದ್ಯಂತ ಪ್ರದರ್ಶಿಸಲು ಕ್ರಮ ಕೈಗೊಳ್ಳಲಾಗಿದೆ. ರಾಜ್ಯದ 16 ಜಿಲ್ಲೆಗಳಲ್ಲಿ ಈಗಾಗಲೇ ಗಾಂಧಿ ಭವನ ನಿರ್ಮಾಣ ಕಾರ್ಯ ಪೂರ್ಣಗೊಂಡಿದೆ. ನಿವೇಶನ ಇನ್ನೂ ಸಿಗದ ಜಿಲ್ಲೆಗಳಲ್ಲಿ ಆಯಾ ಜಿಲ್ಲಾಧಿಕಾರಿಗಳು ಮುತುವರ್ಜಿ ವಹಿಸಿ ಸ್ಥಳ ಗುರುತಿಸಿ ಕಾಮಗಾರಿ ಆರಂಭಿಸಬೇಕು. ಎಲ್ಲಾ ಜಿಲ್ಲೆಗಳಲ್ಲಿ ನಿರ್ಮಾಣ ಕಾರ್ಯ ಪೂರ್ಣಗೊಳಿಸಿ ನಿರಂತರವಾಗಿ ಅರ್ಥಪೂರ್ಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.**

## ಮಗುವನ್ನು ಎದೆಗೆ ಕಟ್ಟಿಕೊಂಡು ದುಡಿಯುವ ಆಟೋ ಚಾಲಕ!

• **ಉದಯವಾಹಿನಿ, ಬೆಂಗಳೂರು**

ಮಾಯಾನಗರಿ ಬೆಂಗಳೂರು ಜೀವನ ಅಂದು ಕೊಂಡಷ್ಟು ಸುಲಭವಲ್ಲಾ. ಇಲ್ಲಿ ಕೋಟ್ಯಾಧೀಶರಿಂದ ಹಿಡಿದು ತುತ್ತು ಅನ್ನಕ್ಕಾಗಿ ಪರದಾಡುವ ಜನರಿದ್ದಾರೆ.

ಇದೇ ರೀತಿಯಲ್ಲಿ ಆಟೋ ಚಾಲಕರೊಬ್ಬರು ತನ್ನ ಮಗುವನ್ನು ಎದೆಗೆ



ಕಟ್ಟಿಕೊಂಡು ನಗರದ ಜನನಿಬಿಡ ರಸ್ತೆಗಳಲ್ಲಿ ಆಟೋ ಚಾಲನೆ ಮಾಡುವ ವೀಡಿಯೋವೊಂದು ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ವೈರಲ್ ಆಗುತ್ತಿದೆ. ಮನತುಂಬುವ ಈ ವಿಡಿಯೋಗೆ ಅನೇಕ ನೆಟ್ಟಿಗರು ಫಿದಾ ಆಗಿದ್ದಾರೆ. ಈ ಕ್ಲಿಪ್ ಅನ್ ಬೆಂಗಳೂರು ಮೂಲದ ಮಹಿಳೆ ರಿತು ಅವರು Instagram ನಲ್ಲಿ ಹಂಚಿಕೊಂಡಿದ್ದಾರೆ. ಆತ ಆಟೋ ಓಡಿಸಿ ಹಣಗಳಿಸುತ್ತಾರೆ ಆದರೆ, ತಾನು ಯಾರಿಗಾಗಿ ಜೀವಿಸುತ್ತಿದ್ದರೋ ಅವರನ್ನು ಇಟ್ಟುಕೊಂಡು ಎಂದು ಬರೆದುಕೊಂಡಿದ್ದಾರೆ.

ಈ ವೀಡಿಯೋ ಹಂಚಿಕೊಂಡ ಕೆಲವೇ ಕ್ಷಣಗಳಲ್ಲಿ ಸಾಕಷ್ಟು ಲೈಕ್, ವೀವ್ಸ್ ಬಂದಿದ್ದು, ನೂರಾರು ಮಂದಿ ಶೇರ್ ಮಾಡುತ್ತಿದ್ದಾರೆ. ವೀಡಿಯೋದಲ್ಲಿ ಆಟೋ ಡ್ರೈವರ್ ತನ್ನ ಮಗುವನ್ನು ಒಂದು ತೋಳಿನಲ್ಲಿ ಎದೆಗೆ ಕಟ್ಟಿಕೊಂಡು ಜನನಿಬಿಡ ರಸ್ತೆಗಳಲ್ಲಿ ತನ್ನ ಆಟೋವನ್ನು ಓಡಿಸುತ್ತಿರುವುದನ್ನು ಕಾಣಬಹುದು. ಈ ಮನಕರಗುವ ವಿಡಿಯೋಗೆ ನೆಟ್ಟಿಗರು ಮನಸೋತಿದ್ದು, ತಂದೆಯ ಸಮರ್ಪಣೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಪಕ್ಷಮಾಸದ ಪ್ರಯುಕ್ತ ವಿವಿಧೆಡೆ ಗರುಡ ಪುರಾಣ ಧಾರ್ಮಿಕ ಪ್ರವಚನ

• **ಉದಯವಾಹಿನಿ, ಬೆಂಗಳೂರು**

ಪಕ್ಷಮಾಸದ ಪ್ರಯುಕ್ತ ನಗರದ ವಿವಿಧ ಮಠ-ಮಂದಿರಗಳಲ್ಲಿ ಗರುಡ ಪುರಾಣ ಧಾರ್ಮಿಕ ಪ್ರವಚನವನ್ನು ಹಮ್ಮಿಕೊಂಡಿದ್ದು ವಿವರಗಳು ಈ ರೀತಿ ಇವೆ :

**ಸುಧೀಂದ್ರನಗರ:** ಶ್ರೀ ರಾಮವಿಠಲಾಚಾರ್ಯರಿಂದ ಸೆಪ್ಟೆಂಬರ್ 8 ರಿಂದ 21ರ ವರೆಗೆ ಪ್ರತಿದಿನ ಸಂಜೆ 7-00ಕ್ಕೆ ಗರುಡ ಪುರಾಣ ಧಾರ್ಮಿಕ ಪ್ರವಚನ. ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಮಲ್ಲೇಶ್ವರಂ, ಬೆಂಗಳೂರು-560003



ಉದಯವಾಹಿನಿ ಚಿತ್ರ

**ದೊಡ್ಡಬೊಮ್ಮಸಂದ್ರ:** ಶ್ರೀ ಚಂದ್ರಶೇಖರ ಆಚಾರ್ಯರಿಂದ ಸೆಪ್ಟೆಂಬರ್ 8 ರಿಂದ 21ರ ವರೆಗೆ ಪ್ರತಿದಿನ ಸಂಜೆ 6-15ಕ್ಕೆ ಗರುಡ ಪುರಾಣ ಧಾರ್ಮಿಕ ಪ್ರವಚನ. ಆಯೋಜನೆ : ಭೀಮನಕಟ್ಟೆ ಪ್ರವಚನ ಬಳಗ. ಸ್ಥಳ: ಶ್ರೀ ರಾಘವೇಂದ್ರ, ಸ್ವಾಮಿಗಳ ಮಠ, ದೊಡ್ಡಬೊಮ್ಮಸಂದ್ರ, ವಿದ್ಯಾರಣ್ಯಪುರ, ಬೆಂಗಳೂರು-560097

ವಿಜಯನಗರ : ಶ್ರೀ ಫಣಿಕುಮಾರ್ ಆಚಾರ್ಯರಿಂದ ಸೆಪ್ಟೆಂಬರ್ 8 ರಿಂದ 14ರ ವರೆಗೆ ಪ್ರತಿದಿನ ಸಂಜೆ 6-30ಕ್ಕೆ ಗರುಡ ಪುರಾಣ ಧಾರ್ಮಿಕ ಪ್ರವಚನ. ಸ್ಥಳ : ವಿಜಯ ಮಧ್ವ ಸಂಘ, 37/2, 2ನೇ ಮುಖ್ಯರಸ್ತೆ, ಗಂಗಾಧರ ಬಡಾವಣೆ, ವಿಜಯನಗರ, ಬೆಂಗಳೂರು-560040 **ರಾಜಾಜಿನಗರ:** ಶ್ರೀ ವಾದಿರಾಜಾಚಾರ್ ಮಣೂರ್ ಇವರಿಂದ ಸೆಪ್ಟೆಂಬರ್ 8 ರಿಂದ 16ರ ವರೆಗೆ ಪ್ರತಿದಿನ ಸಂಜೆ 6-30ಕ್ಕೆ ಗರುಡ ಪುರಾಣ ಧಾರ್ಮಿಕ ಪ್ರವಚನ. ಸ್ಥಳ : ಸೋಸಲೆ ಶ್ರೀ ವ್ಯಾಸರಾಜ ಮಠ, 5ನೇ ಮುಖ್ಯರಸ್ತೆ, ಸುಬ್ರಹ್ಮಣ್ಯನಗರ, ಬೆಂಗಳೂರು-560010

**ರಾಜರಾಜೇಶ್ವರಿನಗರ:** ಶ್ರೀ ಬ್ರಹ್ಮಣ್ಯಾಚಾರ್ಯರಿಂದ ಸೆಪ್ಟೆಂಬರ್ 8 ರಿಂದ 18ರ ವರೆಗೆ ಪ್ರತಿದಿನ ಸಂಜೆ 6-30ಕ್ಕೆ. ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಬೆಮೆಲ್ ಲೇಔಟ್ ರಾಜರಾಜೇಶ್ವರಿನಗರ ಬೆಂಗಳೂರು-560098 ಪ್ರಕಾಶನಗರ: ಶ್ರೀ ಬಳ್ಳಾರಿ ಗುರುರಾಜಾಚಾರ್ಯರಿಂದ ಸೆಪ್ಟೆಂಬರ್ 8 ರಿಂದ 17ರವರೆಗೆ ಪ್ರತಿದಿನ ಸಂಜೆ 7-00ಕ್ಕೆ ಗರುಡ ಪುರಾಣ ಧಾರ್ಮಿಕ ಪ್ರವಚನ. ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, ಪ್ರಕಾಶನಗರ, ಬೆಂಗಳೂರು-560021

## ಬ್ಯಾಲೆಟ್ ಪೇಪರ್ ಜಾರಿಗೆ ತರ್ತಿರೋದು ಮೂರ್ಖತನದ ಪರಮಾವಧಿ


• **ಉದಯವಾಹಿನಿ, ಬೆಂಗಳೂರು**

ಬ್ಯಾಲೆಟ್ ಪೇಪರ್ ಜಾರಿಗೆ ತರುತ್ತಿರೋದು ಮೂರ್ಖತನದ ಪರಮಾವಧಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಕಿಡಿಕಾರಿದ್ದಾರೆ.

ಬ್ಯಾಲೆಟ್ ಪೇಪರ್ ಜಾರಿ ಕುರಿತು ಬೆಂಗಳೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ಗೆ ಬ್ಯಾಲೆಟ್ ಪೇಪರ್ ನೆನಪಾಗಿದೆ.

ಇವಿಎಂ ಮೇಲೆ ವಿಶ್ವಾಸ ಕಡಿಮೆಯಾಗಿದೆ. ಯಾಕೆ ಅಂತ ಸಿಎಂ, ಡಿಸಿಎಂ ಹೇಳಬೇಕು. ಮೂರು ಚುನಾವಣೆಗಳಲ್ಲಿ ಕಾಂಗ್ರೆಸ್ ಸೋತಿದೆ. ಜನನ ಅವರನ್ನು ತಿರಸ್ಕರಿಸಿದ್ದಾರೆ. ಇದನ್ನು ಮುಚ್ಚಿಕೊಳ್ಳಲು ಇವಿಎಂ ಸರಿ ಇಲ್ಲ ಎನ್ನುತ್ತಿದ್ದಾರೆ. ನಾವು ಬ್ಯಾಲೆಟ್ ಪೇಪರ್‌ಗೆ ಹೆದರುತ್ತಿಲ್ಲ, ಅದರ ಅವಶ್ಯಕತೆ ಇಲ್ಲ ಎಂದರು.

ಬಾನು ಮುಷ್ತಾಕ್ ಆಯ್ಕೆ ವಿರುದ್ಧ ಪ್ರತಾಪ್ ಸಿಂಹ ಹೈಕೋರ್ಟ್ ಮೊರೆ ವಿಚಾರವಾಗಿ ಪ್ರತಿಕ್ರಿಯಿಸಿ, ಪ್ರತಾಪ್ ಸಿಂಹ ಹೈಕೋರ್ಟ್‌ಗೆ ಹೋಗಿರುವ ಬಗ್ಗೆ ಮಾಹಿತಿ ಇಲ್ಲ. ನಾನೂ ಮಾಧ್ಯಮಗಳಲ್ಲಿ ನೋಡಿದ್ದು. ಬಾನು ಮುಷ್ತಾಕ್ ಅವರನ್ನು ಕರೆದಿದ್ದಾರೆ, ಹಿಂದೂ ಮಹಿಳೆ ದೀಪಾ ಬಸ್ತಿ ಅವರನ್ನು ಯಾಕೆ ಕರೆಯಲಿಲ್ಲ ಇದಕ್ಕೆ ಸಿಎಂ ಅವರು ಇನ್ನೂ ಉತ್ತರ ಕೊಟ್ಟಿಲ್ಲ. ಮೊದಲು ಇದಕ್ಕೆ ಸಿಎಂ ಸ್ಪಷ್ಟನೆ ಕೊಡಲಿ ಎಂದು ಆಗ್ರಹಿಸಿದರು.



**ಇವಿಎಂಗಳಲ್ಲಿ ದೋಷ ಇದ್ದಿದ್ದರೆ ಹಿಮಾಚಲಪ್ರದೇಶ, ತೆಲಂಗಾಣ, ಕರ್ನಾಟಕಗಳಲ್ಲಿ ಕಾಂಗ್ರೆಸ್ ಹೇಗೆ ಅಧಿಕಾರಕ್ಕೆ ಬಂತು ಮಹಾರಾಷ್ಟ್ರ, ಹರಿಯಾಣಗಳಲ್ಲಿ ಸೋತಿರುವ ಕಾಂಗ್ರೆಸ್ ಹತಾಶೆಯಿಂದ ಬ್ಯಾಲೆಟ್ ಪೇಪರ್ ಜಾರಿಗೆ ತರುತ್ತಿದ್ದಾರೆ. ಕಾಂಗ್ರೆಸ್ ಎಲ್ಲವನ್ನೂ ವಿರೋಧ ಮಾಡುತ್ತಿದೆ. ಬ್ಯಾಲೆಟ್ ಪೇಪರ್ ವಿರುದ್ಧ ಬಿಜೆಪಿಯಿಂದ ಹೋರಾಟ ಕೈಗೆತ್ತಿಕೊಳ್ಳುತ್ತೇವೆ ಎಂದು ತಿಳಿಸಿದರು.**

## ಮೊಬೈಲೇ ಮೊದಲ ಶಾಲೆ: ಕೆವಿಪ್ರ ಕಳವಳ

• **ಉದಯವಾಹಿನಿ, ಬೆಂಗಳೂರು**

ಮನೆಯೇ ಮೊದಲ ಶಾಲೆ ಎನ್ನುವುದು ಹೋಗಿ ಮೊಬೈಲೇ ಮೊದಲ ಶಾಲೆಯಂತಾಗಿದೆ ಎಂದು ಸಿಎಂಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ನುಡಿದರು.

ಪ್ರೆಸ್ ಕ್ಲಬ್ ಮತ್ತು ಬಾಲ ಭವನ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ''ಮಕ್ಕಳ ಜಾತ್ರೆ ಸಾಂಸ್ಕೃತಿಕ ಹಬ್ಬಕ್ಕೆ ಚಾಲನೆ ನೀಡಿ ಮಾತನಾಡಿದರು. ನಗರಗಳಲ್ಲಿ ಇರುವ ಮಕ್ಕಳು ಮಣ್ಣಿನಿಂದ ಬೇರ್ಪಟ್ಟು, ನೆಲದ ಆಟ ಪಾಠಗಳಿಂದ ದೂರ ಆಗಿದ್ದಾರೆ. ವೃದ್ಧಾಶ್ರಮಗಳು ಹೆಚ್ಚಾಗುತ್ತಾ ಅಜ್ಜ-ಅಜ್ಜಿ ಕತೆಗಳಿಂದ ಮಕ್ಕಳು ವಂಚಿತರಾಗುತ್ತಿದ್ದಾರೆ. ಜೊತೆಗೆ ತಮ್ಮ ಆಟದ ಸಾಮಾನುಗಳನ್ನು ತಾವೇ ಸೃಷ್ಟಿಸಿಕೊಳ್ಳುವ ಕ್ರಿಯಾಶೀಲತೆಯೂ ಕಾಣೆಯಾಗಿ, ಪ್ಲಾಸ್ಟಿಕ್ ಆಟದ ಸಾಮಾನುಗಳು, ಬ್ಯಾಟರಿ ಚಾಲಿತ ಆಟದ ಸಾಮಾನುಗಳ ಸಹವಾಸದಲ್ಲಿ ಮಕ್ಕಳ ಮನೋಲೋಕ ಹಿಗ್ಗುವ ಬದಲಿಗೆ ಕುರುಡಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು. ಮಕ್ಕಳ ತಲೆಗಳೊಳಗೆ ರಾಗಿರೊಟ್ಟಿ ಬದಲಿಗೆ ಬರ್ಗರ್, ಜೋಳದ ರೊಟ್ಟಿ ಬದಲಿಗೆ ಪಿಜ್ಜಾ, ಮುದ್ದೆ ಬದಲಿಗೆ ಪಾಸ್ತಾ, ಡೋನಟ್ ತುಂಬಿದ್ದು ಕೂಡ ಕೆಟ್ಟ ಸಾಂಸ್ಕೃತಿಕ ರಾಜಕಾರಣ. ಇದನ್ನು ಬಹಳ ಆಳವಾಗಿ ಮತ್ತು ಗಂಭೀರವಾಗಿ ಯೋಚಿಸುವ ಅಗತ್ಯವಿದೆ. ಇದನ್ನು



ಜವಾಹರಲಾಲ್ ನೆಹರೂ ಅವರು ಮನಗಂಡಿದ್ದರು. ಮಕ್ಕಳ ದೃಷ್ಟಿಕೋನದಲ್ಲಿ ದೇಶದ ಅಭಿವೃದ್ಧಿ, ಪ್ರಗತಿಯ ನೀಲನಕ್ಷೆ ನೆಹರೂ ಅವರು ಸಿದ್ದಪಡಿಸಿದ್ದರು. ಈ ನೀಲನಕ್ಷೆಯ ಭಾಗವೇ ಜವಾಹರ ಬಾಲ ಭವನ.ಕುಟುಂಬ, ಸಮಾಜ, ಸ್ನೇಹಿತರಿಂದ ಬೇರ್ಪಡಿಸುವ ವಿಡಿಯೋಗೇಮ್‌ಗಳು ಹಿಂಸಾತ್ಮಕ ಮನೋಭಾವ, ಕೋಪ, ಅಸಹನೆ, ಆಕ್ರಮಣಶೀಲತೆಯನ್ನು ತುರುಕುತ್ತವೆ. ಇಂಥಾ ಮನಸ್ಥಿತಿಯ ಮಕ್ಕಳು ಭವಿಷ್ಯದಲ್ಲಿ ಹೇಗೆ ರೂಪುಗೊಳ್ಳಲು ಸಾಧ್ಯ, ಹೈಸ್ಕೂಲು ಮಟ್ಟದಲ್ಲೇ ರ್‍ಯಾಗಿಂಗ್ ಪಿಡುಗು ಹೆಚ್ಚಾಗುತ್ತಿರುವುದಕ್ಕೆ ಏನು ಕಾರಣ ಎನ್ನುವುದನ್ನು ನಾವು ಆಲೋಚಿಸಬೇಕಿದೆ ಎಂದರು.

# ಲಿಂಗಾಯತ ಎಂದೇ ಬರೆಸಲು ಮಹಾಸಭಾ ಮನವಿ

### ಸರ್ಕಾರಕ್ಕೆ ನಾಡಿನ ಜನರ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಸ್ಥಿತಿಯ ನಿಖರ ಮಾಹಿತಿ ದೊರೆತರೆ, ನಾಡಿನ ಜನರೆಲ್ಲರ ಕಲ್ಯಾಣಕ್ಕೆ ಕಾರ್ಯಕ್ರಮ


• **ಉದಯವಾಹಿನಿ, ಬೆಂಗಳೂರು**

ರಾಜ್ಯಾದ್ಯಂತ ಬರುವ 22ರಿಂದ ಆರಂಭವಾಗಲಿರುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯ ಧರ್ಮದ ಕಾಲಂನಲ್ಲಿರುವ ಇತರೆ ಕಾಲಂನಲ್ಲಿ ವೀರಶೈವ-ಲಿಂಗಾಯತ ಎಂದು ಬರೆಸುವಂತೆ, ಸಮಾಜದ ಬಾಂಧವರಿಗೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಮನವಿ ಮಾಡಿದೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಭಾದ ರಾಷ್ಟ್ರೀಯ ಹಿರಿಯ ಉಪಾಧ್ಯಕ್ಷ ಹಾಗೂ ಅರಣ್ಯ ಸಚಿವ ಈಶ್ವರ ಬಿ ಖಂಡ್ರೆ, ಹಿಂದಿನಿಂದಲೂ ಮಹಾಸಭಾ ವೀರಶೈವ ಲಿಂಗಾಯತ ಧರ್ಮದ ಪ್ರತಿಪಾದನೆ ಮಾಡುತ್ತಾ ಬಂದಿದೆ. ಹೀಗಾಗಿ ಧರ್ಮದ ಕಾಲಂನ ಇತರೆ ಕಾಲಂನಲ್ಲಿ ವೀರಶೈವ ಲಿಂಗಾಯತ ಎಂದು ಬರೆಸಬೇಕು ಎಂಬುದು ಸಾರ್ವತ್ರಿಕ ಅಭಿಪ್ರಾಯವಾಗಿದೆ ಎಂದರು.

**ಶೈಕ್ಷಣಿಕ ಸಾಮಾಜಿಕ ಸ್ಥಿತಿ ಗತಿಯ ಸಮೀಕ್ಷೆ**

ಉಳಿದಂತೆ ಜಾತಿಯ ಕಾಲಂನಲ್ಲಿ ವೀರಶೈವ ಅಥವಾ ಲಿಂಗಾಯತ ಎಂದು ಬರೆಸುವಂತೆ ಹಾಗೂ ಉಪ ಜಾತಿಯ ಕಾಲಂನಲ್ಲಿರುವ ತಮ್ಮ ತಮ್ಮ ಉಪಜಾತಿ ಹೆಸರು ಬರೆಸುವಂತೆ



ಉದಯವಾಹಿನಿ ಚಿತ್ರ

ಮನವಿ ಮಾಡಿದರು. ಸರ್ಕಾರಕ್ಕೆ ನಾಡಿನ ಜನರ ಶೈಕ್ಷಣಿಕ, ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಯ ನಿಖರ ಮಾಹಿತಿ ದೊರೆತರೆ, ನಾಡಿನ ಜನರೆಲ್ಲರ ಕಲ್ಯಾಣಕ್ಕೆ ಕಾರ್ಯಕ್ರಮ ರೂಪಿಸಲು ಅನುವಾಗುತ್ತದೆ. ಹೀಗಾಗಿ ಪ್ರತಿಯೊಬ್ಬರೂ ಈ ಸಮೀಕ್ಷೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

ಮೀಸಲಾತಿಗಾಗಿ ನೀಡುವ ಜಾತಿ ಪ್ರಮಾಣ ಪತ್ರಕ್ಕೂ, ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಗೂ ಸಂಬಂಧವಿಲ್ಲ.

ನೈಜ ಜಾತಿ, ಶಾಲಾ ದಾಖಲಾತಿ ಇತ್ಯಾದಿ ಪರಾಮರ್ಶಿಸಿದ ಬಳಿಕವಷ್ಟೇ ಜಾತಿ ಪ್ರಮಾಣ ಪತ್ರ ನೀಡಲಾಗುತ್ತದೆ. ಹೀಗಾಗಿ ಪ್ರತಿಯೊಬ್ಬರೂ ತಮ್ಮ ನೈಜ ಜಾತಿಯನ್ನೇ ಸಮೀಕ್ಷೆಯಲ್ಲಿ ಬರೆಸಬೇಕು, ನಮ್ಮ ಸಮುದಾಯದ ನೈಜ ಸಂಖ್ಯೆ ಹೊರಹೊಮ್ಮಲು ಸಹಕರಿಸಬೇಕು ಎಂದು ಸಮಸ್ತ ವೀರಶೈವ ಲಿಂಗಾಯತ ಸಮಾಜದ ಬಾಂಧವರಿಗೆ ಸಭಾ ಪರಿವಾಗಿ ಮನವಿ ಮಾಡಿದರು.

ನಮ್ಮ ಸಮಾಜದಲ್ಲಿ ಹಿಂದುಳಿದವರು, ಅತಿ ಹಿಂದುಳಿದವರು ಮತ್ತು ಅತ್ಯಂತ ಹಿಂದುಳಿದವರಿದ್ದಾರೆ.

ಹೀಗಾಗಿ ಪಾರದರ್ಶಕವಾಗಿ ವಿವಿಧ ವೃತ್ತಿಯನ್ನು ಮಾಡುವ ಬಡವ ಮತ್ತು ಕಡು ಬಡವರಿಗೆ ಪ್ರಾಮಾಣಿಕವಾಗಿ ಅಂಕ ನೀಡಿ, ಸೂಕ್ತ ಪ್ರವರ್ಗಕ್ಕೆ ಸೇರಿಸುವಂತೆ ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಮಹಾಸಭಾದ ಕಾರ್ಯದರ್ಶಿ ರೇಣುಕ ಪ್ರಸನ್ನ ಮತ್ತು ವೀಣಾ ಕಾಶೆಪ್ಪನವರ್ ಪಾಲ್ಗೊಂಡಿದ್ದರು.

**ಎಲ್ಲಾ ಜಾತಿ, ಸಮುದಾಯಕ್ಕೂ ನ್ಯಾಯ ದೊರಕುವ ರೀತಿಯಲ್ಲಿ ಸಮೀಕ್ಷೆಯನ್ನು ನಡೆಸುವಂತೆ ಸಭಾ ಸರ್ಕಾರಕ್ಕೆ ಮನವಿ ಮಾಡಿದೆ, ಅದೇ ರೀತಿ ಎಲ್ಲಾ ಪರಮಪೂಜ್ಯ ಸ್ವಾಮೀಜಿಗಳಿಗೂ ಈ ಸಂಬಂಧ ಏಕಮತ್ಯದಿಂದ ಮತ್ತು ಒಕ್ಕೊರಲಿನಿಂದ ಸಮೀಕ್ಷೆಯಲ್ಲಿ ನೈಜವಾದ ಜಾತಿ ಹೆಸರು ಬರೆಸುವಂತೆ ಸಭಾ ಮನವಿ ಮಾಡಿದೆ ಎಂದು ತಿಳಿಸಿದರು.**

**ಮಹಾಸಭಾದ ರಾಜ್ಯ ಘಟಕದ ಅಧ್ಯಕ್ಷ ಶಂಕರ ಮಹದೇವ್ ಬಿದರಿ ಮಾತನಾಡಿ, ಶೈಕ್ಷಣಿಕ ಮತ್ತು ಸಾಮಾಜಿಕ ಸ್ಥಿತಿಗತಿಯ ಸಮೀಕ್ಷೆ ಆಧಾರದಲ್ಲಿ ಸಮುದಾಯದ ಹಿಂದುಳಿದಿರುವಿಕೆ ಗುರುತಿಸಿ ಅವರಿಗೆ ಸೌಲಭ್ಯ ಕಲ್ಪಿಸುತ್ತದೆ. ಈ ಹಿಂದಿನ ಸಮೀಕ್ಷೆಗಳಲ್ಲಿ ವೀರಶೈವ ಮತ್ತು ಲಿಂಗಾಯತರನ್ನು ಒಂದು ಜಾತಿ ಎಂದು ಪರಿಗಣಿಸಲಾಗಿದೆ. ಪ್ರತ್ಯೇಕ ಧರ್ಮದ ಮಾನ್ಯತೆಯನ್ನು ಅಧಿಕೃತವಾಗಿ ನೀಡಿಲ್ಲ. ಅದನ್ನು ಪರಿಗಣಿಸುವ ಅಗತ್ಯವಿದೆ ಎಂದರು.**

ಅಂತರಾಳದಿಂದ... EDITORIAL

# ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಮತ ಪತ್ರಗಳ ಬಳಕೆ ಯಾಕೆ ಸರಿ?

ಇತ್ತೀಚೆಗಷ್ಟೇ ರಾಹುಲ್ ಗಾಂಧಿಯವರು 'ಮತಗಳ್ಳತನ'ದ ಬಗ್ಗೆ ರಾಷ್ಟ್ರೀಯ ಮಟ್ಟದಲ್ಲಿ ಆಂದೋಲನ ಆರಂಭಿಸಿದ್ದಾರೆ ಮಾತ್ರವಲ್ಲದೆ, ಕರ್ನಾಟಕದ ಲೋಕಸಭಾ ಕ್ಷೇತ್ರವೊಂದರಲ್ಲಿ ನಡೆದ ಮತಗಳ್ಳತನದ ಬಗ್ಗೆ ದಾಖಲೆಗಳನ್ನೂ ಬಹಿರಂಗಪಡಿಸಿದ್ದರು. ಇಂಡಿಯಾ ಒಕ್ಕೂಟದ ಈ ಆರೋಪಗಳಿಗೆ ಚುನಾವಣಾ ಆಯೋಗ ಕಿವಿಯನ್ನು ಕಿವುಡು ಮಾಡಿ ಕುಳಿತಿರುವ ಹೊತ್ತಿಗೆ, ಆಯೋಗಕ್ಕೆ ಸವಾಲು ಹಾಕುವಂತೆ ರಾಜ್ಯ ಸರಕಾರ ಸ್ಥಳೀಯ ಸಂಸ್ಥೆಗಳಲ್ಲಿ ಬ್ಯಾಲೆಟ್ ಪೇಪರ್‌ಗಳ ಮೂಲಕ ಚುನಾವಣೆ ನಡೆಸಲು ಹೊರಟಿದೆ. ಇವಿಎಂ ಬಗ್ಗೆ ಕೇಳಿ ಬರುತ್ತಿರುವ ಆರೋಪಗಳನ್ನು ಗಂಭೀರವಾಗಿ ತೆಗೆದುಕೊಳ್ಳದ ಚುನಾವಣಾ ಆಯೋಗದ ವಿರುದ್ಧ ಪ್ರತಿಭಟನಾ ರೂಪದಲ್ಲಿ ಸರಕಾರ ಈ ನಿರ್ಣಯವನ್ನು ತೆಗೆದುಕೊಂಡಿದೆ. ಸ್ಥಳೀಯ ಸಂಸ್ಥೆಗಳಲ್ಲಿ ನಡೆಯುವ ಚುನಾವಣೆಯ ಬಗ್ಗೆ ತೀರ್ಮಾನ ತೆಗೆದುಕೊಳ್ಳುವ ಅಧಿಕಾರ ಆಯಾ ರಾಜ್ಯ ಸರಕಾರಗಳಿಗಿರುವುದರಿಂದ, ಸಂಪುಟದ ಈ ತೀರ್ಮಾನಕ್ಕೆ ಚುನಾವಣಾ ಆಯೋಗ ಹೇಗೆ ಸ್ಪಂದಿಸುತ್ತದೆ ಎನ್ನುವುದನ್ನು ಕಾದು ನೋಡಬೇಕಾಗಿದೆ. ಆದರೆ, ಈಗಾಗಲೇ ಬಿಜೆಪಿಯು ರಾಜ್ಯ ಸರಕಾರದ ತೀರ್ಮಾನದ ವಿರುದ್ಧ ತಕರಾರುಗಳನ್ನು ಎತ್ತಿದೆ. ಇವಿಎಂ ಬದಲಿಗೆ ಮತಪತ್ರದ ಮೂಲಕ ಚುನಾವಣೆಯನ್ನು ಎದುರಿಸಲು ರಾಜ್ಯ ಸರಕಾರ ಮುಂದಾಗಿರುವುದು ಖಂಡನೀಯ. ಇದು ಮತ್ತೆ ಪುರಾತನ ಯುಗಕ್ಕೆ ಹೋಗುತ್ತಿರುವ ಸೂಚನೆಯಾಗಿದೆ ಎಂದು ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್ ಅವರು ಆಕ್ಷೇಪಿಸಿದ್ದಾರೆ.

ಮತ ಪತ್ರವನ್ನು ಬಳಸಿದರೆ ಫಲಿತಾಂಶ ಘೋಷಣೆ ತಡವಾಗುತ್ತದೆ. ಸುಮಾರು ನಾಲ್ಕು ದಿನಗಳನ್ನು ಮತ ಎಣಿಕೆಗೆ ಮೀಸಲಿಡಬೇಕಾಗುತ್ತದೆ ಎಂದೂ ಅವರು ಕಳವಳ ವ್ಯಕ್ತಪಡಿಸಿದ್ದಾರೆ. ಅವರ ಈ ಕಳವಳ ಅರ್ಥಹೀನವಾಗಿದೆ. ತಂತ್ರಜ್ಞಾನದಲ್ಲಿ ಭಾರತಕ್ಕಿಂತ ಹಲವು ಪಟ್ಟು ಸಾಧನೆಗಳನ್ನು ಮಾಡಿರುವ ದೇಶಗಳು ಈಗಲೂ ಚುನಾವಣೆಗಳಿಗೆ ಮತಪತ್ರವನ್ನೇ ಅವಲಂಬಿಸಿವೆ. ಅದರ ಅರ್ಥ ಅದು ತಂತ್ರಜ್ಞಾನದ ಬಳಕೆಗೆ ಹಿಂದೇಟು ಹೊಡೆಯುತ್ತಿದೆ ಎಂದಲ್ಲ.

> **ಮುಂಬರುವ ಎಲ್ಲಾ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಇಲೆಕ್ಟ್ರಾನಿಕ್ ಮತ ಯಂತ್ರದ ಬದಲಾಗಿ ಬ್ಯಾಲೆಟ್ ಪೇಪರ್‌ಗಳನ್ನು ಬಳಸಿ ನಡೆಸುವಂತೆ ರಾಜ್ಯ ಚುನಾವಣಾ ಆಯೋಗಕ್ಕೆ ಶಿಫಾರಸು ಮಾಡಲು ರಾಜ್ಯ ಸಚಿವ ಸಂಪುಟ ನಿರ್ಧರಿಸಿದೆ. ಮತಗಳ್ಳತನದ ಪ್ರಕರಣಗಳು ಬಯಲಾದ ಬಳಿಕ ಜನಸಾಮಾನ್ಯರಲ್ಲಿ ಇವಿಎಂ ಮೇಲಿನ ವಿಶ್ವಾಸಾರ್ಹತೆ ಕಡಿಮೆಯಾಗಿದೆ. ಆದುದರಿಂದ ಸಚಿವ ಸಂಪುಟವು ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಇವಿಎಂ ಬದಲು ಬ್ಯಾಲೆಟ್ ಪೇಪರ್ ಬಳಸಿ ನಡೆಸುವಂತೆ ಆಯೋಗಕ್ಕೆ ಶಿಫಾರಸು ಮಾಡಲು ನಿರ್ಧರಿಸಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್. ಕೆ. ಪಾಟೀಲ್ ಮಾಧ್ಯಮಗಳಿಗೆ ತಿಳಿಸಿದ್ದಾರೆ.**

ಕೆಲವೊಮ್ಮೆ ಇಂತಹ ತಂತ್ರಜ್ಞಾನಗಳು ದುರ್ಬಳಕೆಯಾದರೆ ಅದು ಪ್ರಜಾಸತ್ತೆಯ ಮೇಲೆ ಭಾರೀ ಪರಿಣಾಮ ಬೀರಬಹುದು. ಪ್ರಜಾಪ್ರಭುತ್ವದ ಉದ್ದೇಶವೇ ನೀರುಪಾಲಾಗಬಹುದು ಎನ್ನುವ ಎಚ್ಚರಿಕೆಯ ಹಿನ್ನೆಲೆಯಲ್ಲಿ ಅವರು ಇವಿಎಂ ಬಗ್ಗೆ ಆಸಕ್ತಿ ತೋರಿಸಿಲ್ಲ.

ಪ್ರಜಾಪ್ರಭುತ್ವದ ಅಳಿವು ಉಳಿವಿನ ಮುಂದೆ ತಂತ್ರಜ್ಞಾನದ ಹಿರಿಮೆ ಏನೇನೂ ಅಲ್ಲ ಎನ್ನುವುದನ್ನು ಇದು ಹೇಳುತ್ತದೆ. ಇನ್ನೊಂದುವಾದ, ಮತ ಪತ್ರ ಬಳಸಿದರೆ ಫಲಿತಾಂಶ ಘೋಷಣೆ ತಡವಾಗುತ್ತದೆ ಎನ್ನುವುದು. ಪ್ರಜಾಪ್ರಭುತ್ವದ ಯಶಸ್ಸಿರುವುದು ಎಷ್ಟು ಬೇಗ ಫಲಿತಾಂಶ ಘೋಷಣೆಯಾಗುತ್ತದೆ ಎನ್ನುವುದರಲ್ಲ ಚುನಾವಣೆಯು ಎಷ್ಟರಮಟ್ಟಿಗೆ ಅಕ್ರಮಗಳಿಲ್ಲದೆ ನಡೆಯುವುದು ಎನ್ನುವುದರ ಆಧಾರದ ಮೇಲೆ. ಅಕ್ರಮಗಳ ಜೊತೆಗೆ ಚುನಾವಣೆ ನಡೆದು ಅದೆಷ್ಟು ಬೇಗ ಫಲಿತಾಂಶ ಪ್ರಕಟವಾದರೂ ಚುನಾವಣೆಯ ಉದ್ದೇಶ ನೆರವೇರುವುದಿಲ್ಲ.

ಈ ಹಿಂದೆಲ್ಲ ಫಲಿತಾಂಶ ಒಂದೆರಡು ದಿನ ತಡವಾದುದರಿಂದ ಪ್ರಜಾಸತ್ತೆಗೆ ಯಾವುದೇ ಸಮಸ್ಯೆ ಉಂಟಾಗಿಲ್ಲ.ಇಷ್ಟಕ್ಕೂ ಚುನಾವಣೆಗಳು ನಡೆದ ಬಳಿಕ ರಚನೆಯಾದ ಸರಕಾರವನ್ನು ಆಪರೇಷನ್ ಕಮಲದ ಮೂಲಕ ಉರುಳಿಸಿ ಜನರ ಮೇಲೆ ಪದೇ ಪದೇ ಹೊಸದಾಗಿ ಉಪಚುನಾವಣೆಗಳನ್ನು ಹೇರಿದ ಆರೋಪಗಳನ್ನು ಎದುರಿಸುತ್ತಿರುವ ಬಿಜೆಪಿಗೆ ಫಲಿತಾಂಶ ಘೋಷಣೆ ಒಂದೆರಡು ದಿನ ತಡವಾಗುವುದರ ಬಗ್ಗೆ ಕಳವಳ ವ್ಯಕ್ತಪಡಿಸುವ ನೈತಿಕತೆಯಾದರೂ ಇದೆಯೆ? ಪ್ರಜಾಸತ್ತಾತ್ಮಕವಾಗಿ ಆಯ್ಕೆಯಾದ ಶಾಸಕನನ್ನು ಹಣಕೊಟ್ಟು ಕೊಂಡು ಆತನಿಂದ ರಾಜೀನಾಮೆ ನೀಡಿಸಿ ಚುನಾವಣೆಯ ಉದ್ದೇಶವನ್ನೇ ಬುಡಮೇಲು ಗೊಳಿಸುವ ಕುಕೃತ್ಯಗಳನ್ನು ಅಪರೇಷನ್ ಕಮಲವೆಂದು ಕೊಚ್ಚಿಕೊಳ್ಳುವ ನಾಯಕರು, ಇವಿಎಂನಿಂದಲೇ ಚುನಾವಣೆ ನಡೆಯಬೇಕು ಎಂದು ಒತ್ತಾಯಿಸುವ ಉದ್ದೇಶವಾದರೂ ಏನು? ಹಾಗೆ ನೋಡಿದರೆ, ಇವಿಎಂ ಮೂಲಕ ಅಕ್ರಮ ನಡೆಯುತ್ತಿದೆ ಎಂದು ಮೊತ್ತ ಮೊದಲಾಗಿ ಆರೋಪ ಮಾಡಿರುವುದು ಬಿಜೆಪಿಯ ಹಿರಿಯ ನಾಯಕ ಎಲ್. ಕೆ. ಅಡ್ವಾಣಿಯವರು. ಇವಿಎಂ ಮೂಲಕ ಮೊತ್ತ ಮೊದಲ ಬಾರಿಗೆ ಲೋಕಸಭಾ ಚುನಾವಣೆ ನಡೆದು ಯುಪಿಎ ಸರಕಾರ ಅಧಿಕಾರ ಹಿಡಿದಾಗ, ಇದರ ವಿರುದ್ಧ ಪತ್ರಿಕಾಗೋಷ್ಠಿ ನಡೆಸಿದ ಅಂದಿನ ಬಿಜೆಪಿಯ ಹಿರಿಯ ನಾಯಕ ಎಲ್. ಕೆ. ಅಡ್ವಾಣಿ ಮತಯಂತ್ರವನ್ನು ದುರುಪಯೋಗ ಪಡಿಸಲಾಗಿದೆ ಎಂದು ದೂರಿದ್ದರು. 2009ರಲ್ಲಿ ಇವಿಎಂ ವಿರುದ್ಧ ಆಕ್ಷೇಪ ವ್ಯಕ್ತಪಡಿಸಿ ಮತ್ತೆ ಮತ ಪತ್ರವನ್ನು ಜಾರಿಗೊಳಿಸಬೇಕು ಎಂದು ಅವರು ಒತ್ತಾಯಿಸಿದಾಗ ಬಿಜೆಪಿಯ ಹಲವು ನಾಯಕರು ಅದಕ್ಕೆ ಧ್ವನಿಗೂಡಿಸಿದ್ದರು. ಇದೀಗ ಎಲ್ಲವೂ ತಿರುವುಮುರುವಾಗಿದೆ. ಪ್ರಧಾನಿ ಮೋದಿ ಇವಿಎಂ ಮೂಲಕವೇ ಆಯ್ಕೆಯಾಗಿದ್ದಾರೆ ಎಂದು ವಿರೋಧ ಪಕ್ಷಗಳು ಆರೋಪಿಸುತ್ತಿವೆ. ಇವಿಎಂನ ವಿರುದ್ಧ ವ್ಯಾಪಕ ಆರೋಪಗಳು ಕೇಳಿ ಬಂದರೂ, ಅದಕ್ಕೆ ಯಾವುದೇ ರೀತಿಯಲ್ಲಿ ಸ್ಪಂದಿಸದೇ, ಶತಾಯಗತಾಯ ಇವಿಎಂನ್ನು ಚುನಾವಣಾ ಆಯೋಗ ಸಮರ್ಥಿಸುತ್ತಿದೆ. ಇದರ ಬೆನ್ನಿಗೇ ಮತಗಳ್ಳತನದ ಬಗ್ಗೆ ವ್ಯಾಪಕ ಆರೋಪಗಳು ಕೇಳಿ ಬರುತ್ತಿದ್ದು ಚುನಾವಣಾ ಆಯೋಗವೂ ಇದರಲ್ಲಿ ಶಾಮೀಲಾಗಿರುವ ಬಗ್ಗೆ ಸಂಶಯಗಳು ವ್ಯಕ್ತವಾಗುತ್ತಿವೆ.




• ಹಿಂದಿನ ಸಂಚಿಕೆಯಿಂದ

## 119 ನೆಯ ಅಧ್ಯಾಯ

ಧರ್ಮಮಾರ್ಗಪ್ರವರ್ತಕನಾದ ಶ್ರೀರಾಮನನ್ನು ಕೈಹಿಡಿದು ಕುಳ್ಳಿರಿಸಿ ಆತನನ್ನು ಕುರಿತು ಶ್ರೀರಾಮ,ಲೋಕದಲ್ಲಿ ತಪಸ್ವಿಗಳಾದವರು ತಮ್ಮ ಧರ್ಮಕ್ಕೆ ತಕ್ಕಂತೆ ನಡೆಯದೆ.

ಮತ್ತೊಂದು ಆಚಾರವನ್ನು ಕೈಕೊಂಡರೆ ಕೂಟನಾಕ್ಷಿ ನುಡಿಯುವವರಂತೆ ಶರೀರಾಂತದಲ್ಲಿ ತಮ್ಮ ಮಾಂಸವನ್ನು ತಾನೇ ಭಕ್ಷಿಸುವರು. ಮಹಾರಥಿಕನಾಗಿ ಧರ್ಮಮಾರ್ಗಪ್ರವರ್ತಕನಾದ ಅರಸನು ಮನೆಗೆ ಬಂದರೆ ಮನ್ನಿಸಿ ಸತ್ಕಾರವನ್ನು ಮಾಡಬೇಕು. ಧರ್ಮಿನಾದ ರಾಜನು ಪ್ರಿಯಾತಿಥಿ ಎನಿಸಿಕೊಳ್ಳುವನು ಎಂದು ನುಡಿದು ಕಂದಮೂಲ ಫಲಾಹಾರಾದಿಗಳಿಂದ ಶ್ರೀರಾಮನನ್ನು ಸತ್ಕರಿಸಿದನು. ಪುನಃ ಅಗತ್ಯಮುನಿಯು ಶ್ರೀರಾಮ, ನನ್ನ ವಶದಲ್ಲಿರುವ ರತ್ನ ಖಚಿತವಾದ ಈ ಧನುಸ್ಸು ಪೂರ್ವದಲ್ಲಿ ವಿಶ್ವಕರ್ಮನಿಂದ ಸೃಷ್ಟಿಸಲ್ಪಟ್ಟದ್ದು. ಇದು ವಿಷ್ಣುದೇವತಾಕವಾದದ್ದು. ಈ ಬಿಲ್ಲಿಗೆ ತಕ್ಕ ಈ ಶರಗಳನ್ನು ನನಗೆ ಬ್ರಹ್ಮದೇವನು ಕೊಟ್ಟನು. ಈ ಎರಡು ಬತ್ತಳಿಕೆಗಳು ಯಜ್ಞ ಪುರುಷನ ರೀತಿಯಲ್ಲಿ ತೀಕ್ಷ್ಣವಾದ ಅಂಬುಗಳಿಂದ ಪರಿಪೂರ್ಣವಾಗಿರುವುವು. ಈ ಬಾಣಗಳು ಅಕ್ಷಯವಾಗಿರುವುವು. ಮಿಂಚಿನಹೊಳೆಯುಳ್ಳ ಈ ಖಡ್ಗವು ಪ್ರಳಯಕಾಲಾಗ್ನಿಗೆ ಸಮಾನವಾದದ್ದು. ವಿಷ್ಣು ದೇವತಾಕವಾದ ಈ ಬಿಲ್ಲನ್ನೂ ಅಕ್ಷಯಬಾಣಗಳುಳ್ಳ ಈ ಬತ್ತಳಿಕೆಗಳನ್ನೂ ಈ ಖಡ್ಗವನ್ನೂ ಮಂತ್ರನ್ಯಾಸಪೂರ್ವಕವಾಗಿ ನಿನಗೆ ಕೊಡುವೆನು. ಇವನ್ನು ತೆಗೆದುಕೋ, ಪೂರ್ವದಲ್ಲಿ ನಾರಾಯಣನು ರಾಕ್ಷಸರೊಡನೆ ಯುದ್ಧ ಮಾಡುವಾಗ ಈ ಬಿಲ್ಲಿನಿಂದಲೇ ಸಮಸ್ತ ರಾಕ್ಷಸರನ್ನೂ ಗೆದ್ದು ಜಯಲಕ್ಷ್ಮಿಯನ್ನು ಪಡೆದನು ಎಂದು ನುಡಿದು ಆ ಆಯುಧಗಳನ್ನು ಕೊಟ್ಟನು.

**ಶ್ರೀ ರಾಮನು ಪಂಚವಟೀ ಕ್ಷೇತ್ರಕ್ಕೆ ಹೊರಟಿದ್ದು:**

ಅಗಸ್ತ್ಯಮುನೀಶ್ವರನು ಪುನಃ ಶ್ರೀರಾಮನನ್ನು ಕುರಿತು ಶ್ರೀರಾಮ ನೀನೂ ಲಕ್ಷ್ಮಣನೂ ನನ್ನನ್ನು ನೋಡಬೇಕೆಂದು ನನ್ನ ಸಮೀಪಕ್ಕೆ ಬಂದದ್ದರಿಂದ ನಾನು ಸಂತುಷ್ಟನಾದೆನು. ನಿಮಗೆ ದಾರಿನಡೆದ ಬಳಲಿಕೆಯು ಬಹಳವಾಗಿರುವುದು. ಸೀತಾದೇವಿಯಲ್ಲಿ ಬಳಲಿಕೆಯು ವ್ಯಕ್ತವಾಗಿ ಕಾಣುತ್ತಿದೆ. ಈ ದೇವಿಯು ಅತ್ಯಂತ ಸುಕುಮಾರಾಂಗಿಯಾದವಳು: ಒಂದು ದಿನವಾದರೂ ದುಃಖವನ್ನನುಭವಿಸಿದವಳಲ್ಲ ಬಹು ದುರ್ಘಟವಾದ ವನಕ್ಕೆ ನಿನ್ನ ಮೇಲಣ ವಿಶ್ವಾಸದಿಂದ ಬಂದವಳು. ಹೇಗಿದ್ದರೆ ಇವಳಿಗೆ ಸಂತೋಷವಾಗುವುದೋ ಆ ಪ್ರಕಾರದಲ್ಲಿ ನಡೆಯಿರಿ. ಸೀತಾದೇವಿಯು ಈ ವನಕ್ಕೆ ಬಂದದ್ದು ಅತ್ಯಂತ ಸಾಹಸಕೃತ್ಯ. ಲೋಕದಲ್ಲಿ ಸ್ತ್ರೀಯರು ಸ್ವಾಭಾವಿಕವಾಗಿ ಪುರುಷನು ಕ್ಷೇಮದಲ್ಲಿದ್ದರೆ ಆತನೊಡನೆ ವಿನೋದಸಂಲಾಪಗಳನ್ನು ಮಾಡಿಕೊಂಡಿರುವರು, ವಿಷಮಕಾಲ ಬಂದರೆ ಆತನನ್ನು ಬಿಟ್ಟು ಬಿಡುವರು.

ಮಿಂಚಿನಂತೆ ಚಂಚಲತೆ, ಶಸ್ತ್ರದಂತೆ ಕ್ರೂರಬುದ್ಧಿ, ಗರುಡಮಾರುತರಂತೆ ಶೀಘ್ರತೆ- ಎಂಬ ಮೂರು ಗುಣಗಳು ಸ್ತ್ರೀಯರಿಗೆ ಸಹಜವಾದವು. ಆದರೆ ಸೀತಾದೇವಿಯಲ್ಲಿ ಈ ದೋಷಗಳೊಂದೂ ಇಲ್ಲ. ಈ ದೇವಿಯು ಉತ್ತಮಳು, ಪೂಜ್ಯಳು ಪತಿವ್ರತೆಯರಲ್ಲಿ ಅರುಂಧತಿಯಂತೆ ಕೊಂಡಾಡಲು ಯೋಗ್ಯಳು.

ಮುಂದುವರಿಯುವುದು...

# ಹಿಂದೂ ಧರ್ಮದ ಮೇಲೆ ನಡೆಯುತ್ತಿರುವ ವೈಚಾರಿಕ ಆಕ್ರಮಣ ಬಯಲಿಗೆ ಮುಂದಡಿ!

• ಉದಯವಾಹಿನಿ, ಬೆಂಗಳೂರು

ಹಿಂದೂ ಜನಜಾಗೃತಿ ಸಮಿತಿಯು ಹಿಂದೂ ಧರ್ಮ, ಹಿಂದೂ ಧಾರ್ಮಿಕ ಶ್ರದ್ಧಾ ಕೇಂದ್ರಗಳು, ಹಿಂದೂ ಸಂತರು, ಆಧ್ಯಾತ್ಮಿಕ ಸಂಸ್ಥೆಗಳು, ಹಿಂದೂ ಮುಖಂಡರು ಮತ್ತು ಹಿಂದೂ ಸಂಘಟನೆಗಳ ವಿರುದ್ಧ ಸುಳ್ಳು ಆರೋಪಗಳು, ಅಪಮಾನ ಹಾಗೂ ತೇಜೋವಧೆ ಮಾಡುವಂತಹ ವ್ಯವಸ್ಥಿತ ಷಡ್ಯಂತ್ರ ನಡೆಯುತ್ತಿದೆ. ಈ ಪಿತೂರಿಯನ್ನು ಅರ್ಬನ್ ನಕ್ಸಲರು ಹಾಗೂ ಕೆಲವು ಅಂತರಾಷ್ಟ್ರೀಯ ಶಕ್ತಿಗಳು ಸಹ ಬೆಂಬಲಿಸುತ್ತಿವೆ. ಈ ಗಂಭೀರ ವಿಷಯವನ್ನು ಸಮಾಜದ ಮುಂದಿಡಲು ಮತ್ತು ನಿಜಾಂಶವನ್ನು ಬಯಲು ಮಾಡಲು, ವೈಚಾರಿಕ ಆಕ್ರಮಣ ಭಾರತದ ಆಂತರಿಕ ಶತ್ರು ಎಂಬ ಶೀರ್ಷಿಕೆಯಡಿ ವಿಶೇಷ ಸಂವಾದವನ್ನು ಆಯೋಜಿಸಲಾಗಿದೆ.




**ಕಾರ್ಯಕ್ರಮದ ವಿವರಗಳು:** ದಿನಾಂಕ: ಮಂಗಳವಾರ, 9 ಸೆಪ್ಟೆಂಬರ್ 2025 ಸಮಯ : ಸಂಜೆ 5:30 ಗಂಟೆಗೆ ಸ್ಥಳ: ನ್ಯಾಷನಲ್ ಕಾಲೇಜ್ ಅಡಿಟೋರಿಯಂ, ಬಸವನಗುಡಿ, ಬೆಂಗಳೂರು

**ಪತ್ರಕರ್ತರಿಗೆ ಕರೆ:** ಸಮಾಜದ ಹಿತಕ್ಕಾಗಿ ಹಮ್ಮಿಕೊಂಡಿರುವ ಈ ಮಹತ್ವದ ಕಾರ್ಯಕ್ರಮದ ಬಗ್ಗೆ ಸರಿಯಾದ ಮಾಹಿತಿ ಜನಸಾಮಾನ್ಯರಿಗೆ ತಲುಪುವಂತೆ ಮಾಡಲು ಸಂಪಾದಕರಾದಕರು, ಪತ್ರಕರ್ತರು ಕ್ಯಾಮರಾಮನ್‌ಗಳು ಹಾಗೂ ಛಾಯಾಗ್ರಾಹಕರನ್ನು ಕಳುಹಿಸಿಕೊಡಬೇಕೆಂದು ವಿನಂತಿಸುತ್ತೇವೆ. ನಿಮ್ಮ ಸಾನ್ನಿಧ್ಯ, ಮಾಧ್ಯಮ ವರದಿ ಈ ಸಂವಾದದ ಮಹತ್ವವನ್ನು ಸಮಾಜದ ಎಲ್ಲಾ ಕಡೆ ತಲುಪಿಸಲು ಸಹಾಯವಾಗುತ್ತದೆ.

**ಕಾರ್ಯಕ್ರಮದ ಗಣ್ಯರು**

- ಶ್ರೀ. ಪಿ. ಕೃಷ್ಣ ಭಟ್, ನಿವೃತ್ತ ನ್ಯಾಯಮೂರ್ತಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ
- ಶ್ರೀ. ಚಕ್ರವರ್ತಿ ಸೂಲಿಬೆಲೆ, ಸಂಸ್ಥಾಪಕರು, ಯುವ ಬ್ರಿಗೇಡ್
- ಶ್ರೀ. ಸಂದೀಪ್ ಬಾಲಕೃಷ್ಣ, ಸಂಸ್ಥಾಪಕರು ಮತ್ತು ಮುಖ್ಯ ಸಂಪಾದಕರು, The Dharma Dispatch
- ಶ್ರೀ. ವೃಷಾಂಕ ಭಟ್, ಸಂಪಾದಕರು, ಸಂವಾದ ಟಿವಿ, ಬೆಂಗಳೂರು
- ಶ್ರೀ. ಮೋಹನ್ ಗೌಡ, ರಾಜ್ಯ ವಕ್ತಾರರು, ಹಿಂದೂ ಜನಜಾಗೃತಿ ಸಮಿತಿ


# ಬೆಳಗಿನ ಸಮಯದಲ್ಲೇ ಹೃದಯಘಾತ ಸಮಸ್ಯೆ ಹೆಚ್ಚಾಗೋದೇಕೆ ಗೊತ್ತಾ?

ಇತ್ತೀಚಿನ ದಿನಗಳಲ್ಲಿ ಹೃದಯಾಘಾತದ ಪ್ರಕರಣಗಳು ಹೆಚ್ಚುತ್ತಿದ್ದು, ಇದು ಯುವಕರ ಮೇಲೂ ಪರಿಣಾಮ ಬೀರುತ್ತಿದೆ. ಅನಾರೋಗ್ಯಕಾರಿ ಆಹಾರ ಪದ್ಧತಿ ಮತ್ತು ಒತ್ತಡವು ಹೃದಯವನ್ನು ಅಸ್ವಸ್ಥಗೊಳಿಸುತ್ತದೆ. ಹೃದಯಾಘಾತವು ಯಾವುದೇ ಸಮಯದಲ್ಲಿ ಸಂಭವಿಸಬಹುದಾದರೂ, ದಿನದ ಕೆಲವು ಸಮಯಗಳಲ್ಲಿ ಹೃದಯಾಘಾತದ ಅಪಾಯವು ಅತ್ಯಧಿಕವಾಗಿರುತ್ತದೆ.

ಮಾನವ ದೇಹದ ರಕ್ತನಾಳಗಳಲ್ಲಿ ರಕ್ತ ಪೂರೈಕೆ ಸರಿಯಾಗಿಲ್ಲದಿದ್ದಾಗ, ರಕ್ತ ಹೆಪ್ಪುಗಟ್ಟುವಿಕೆಯ ಸಮಸ್ಯೆಯಿಂದಾಗಿ ರಕ್ತ ಹೆಪ್ಪುಗಟ್ಟುವಿಕೆ ಪ್ರಾರಂಭವಾಗುತ್ತದೆ.

ಅಂತಹ ಪರಿಸ್ಥಿತಿಯಲ್ಲಿ, ರಕ್ತವು ಹೃದಯವನ್ನು ತಲುಪಲು ಸಾಧ್ಯವಾಗುವುದಿಲ್ಲ ಹೃದಯಕ್ಕೆ ಆಮ್ಲಜನಕದ ಕೊರತೆಯಿಂದಾಗಿ, ಹೃದಯಾಘಾತ ಸಂಭವಿಸುತ್ತದೆ. ವೈದ್ಯಕೀಯ ಭಾಷೆಯಲ್ಲಿ, ಹೃದಯಾಘಾತವನ್ನು ಮಯೋಕಾರ್ಡಿಯಲ್ ಇನ್ಫಾರ್ಕ್ಷನ್ ಎಂದೂ ಕರೆಯುತ್ತಾರೆ. ಹೃದಯಾಘಾತವು ಯಾವುದೇ ವ್ಯಕ್ತಿಗೆ ಮಾರಕವಾಗಬಹುದು, ಆದರೆ ಅದಕ್ಕೆ ತಕ್ಷಣ ಚಿಕಿತ್ಸೆ ನೀಡಿದರೆ, ಆ ವ್ಯಕ್ತಿಯ ಜೀವವನ್ನು ಉಳಿಸಬಹುದು.

**ಭಾರತೀಯ ಹೃದಯ ಸಂಘದ ಮಾಹಿತಿಯ ಪ್ರಕಾರ:** ಭಾರತೀಯ ಹೃದಯ ಸಂಘದ ಇತ್ತೀಚಿನ ಮಾಹಿತಿಯ ಪ್ರಕಾರ, ಭಾರತದಲ್ಲಿ 25% ಕ್ಕಿಂತ ಹೆಚ್ಚು ಹೃದಯಾಘಾತಗಳು ಬೆಳಿಗ್ಗೆ 4 ರಿಂದ 10 ಗಂಟೆಯ ನಡುವೆ ಸಂಭವಿಸುತ್ತವೆಯಂತೆ! ಭಾರತವು ಪ್ರಸ್ತುತ ಹೃದಯ ಸಂಬಂಧಿ ಕಾಯಿಲೆಗಳ ಹೆಚ್ಚಳವನ್ನು ಎದುರಿಸುತ್ತಿದೆ, ವಿಶೇಷವಾಗಿ 40 ವರ್ಷಕ್ಕಿಂತ ಕಡಿಮೆ ವಯಸ್ಸಿನ ಯುವಜನರಲ್ಲಿ. ಜಡ ಜೀವನಶೈಲಿ, ಅನಾರೋಗ್ಯ ಆಹಾರ ಪದ್ಧತಿ, ಹೆಚ್ಚಿನ ಒತ್ತಡ ಮತ್ತು ಆನುವಂಶಿಕ ಪ್ರವೃತ್ತಿಗಳು ಬೆಳೆಯುತ್ತಿರುವ ಬಿಕ್ಕಟ್ಟಿಗೆ ಕಾರಣವಾಗುತ್ತಿರುವುದರಿಂದ, ಹೃದಯಾಘಾತಗಳು ಯಾವಾಗ ಮತ್ತು ಏಕೆ ಸಂಭವಿಸುತ್ತವೆ ನಾವು ಅವುಗಳನ್ನು ಹೇಗೆ ತಡೆಯಬಹುದು ಎಂಬುದನ್ನು ಅರ್ಥಮಾಡಿಕೊಳ್ಳುವುದು ಬಹಳ ಮುಖ್ಯ ಎನ್ನುತ್ತಾರೆ ಆರೋಗ್ಯ ತಜ್ಞರು. ಪ್ರಸ್ತುತ ಇಂದಿನ ಲೇಖನದಲ್ಲಿ ಬೆಳಗಿನ ಸಮಯದಲ್ಲಿ ಹೃದಯಾ ಘಾತ ಉಂಟಾಗಲು ಕಾರಣಗಳೇನು ಹೃದಯದ ಆರೋಗ್ಯ ಕಾಪಾಡಲು ಏನೆಲ್ಲಾ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳಬೇಕು ಎನ್ನುವುದರ ಬಗ್ಗೆ ನೋಡೋಣ



**ಬೆಳಗ್ಗೆ ಹೃದಯಾಘಾತ ಏಕೆ ಸಂಭವಿಸುತ್ತದೆ?:**

ಹಾರ್ಮೋನುಗಳ ಏರಿಕೆ: ನೀವು ಎಚ್ಚರವಾದಂತೆ, ನಿಮ್ಮ ದೇಹವು ಕಾರ್ಟಿಸೋಲ್ ಅಡ್ರಿನಾಲಿನ್ ನಂತಹ ಹಾರ್ಮೋನುಗಳ ಉಲ್ಬಣವನ್ನು ಬಿಡುಗಡೆ ಮಾಡುತ್ತದೆ. ಹಾರ್ಮೋನುಗಳು ಹೃದಯ ಬಡಿತ ರಕ್ತದೊತ್ತಡವನ್ನು ಹೆಚ್ಚಿಸುತ್ತವೆ, ಇವೆರಡೂ ನಿಮ್ಮ ಹೃದಯವನ್ನು ಒತ್ತಡಕ್ಕೆ ಒಳಪಡಿಸಬಹುದು



# ಅಕ್ಕಿ ಬೇಡವೇ ಬೇಡ! ಕೇವಲ ಹೆಸರು ಬೇಳೆಯಿಂದ ಮಾಡಿ ಸೂಪರ್ ಇಡ್ಲಿ

ಅಕ್ಕಿ ಬೇಡವೇ ಬೇಡ! ಕೇವಲ ಹೆಸರು ಬೇಳೆಯಿಂದ ಮಾಡಿ ಸೂಪರ್ ಇಡ್ಲಿ. ನಿತ್ಯವೂ ಬೆಳಗಿನ ತಿಂಡಿಗೆ ವಿಭಿನ್ನ ಹಾಗೂ ಆರೋಗ್ಯಕರ ಅಡುಗೆ ಬಯಸುವವರಿಗೆ ಹೆಸರು ಬೇಳೆ ಇಡ್ಲಿ ಒಂದು ಅತ್ಯುತ್ತಮ ಆಯ್ಕೆಯಾಗಿದೆ. ದಕ್ಷಿಣ ಭಾರತದಲ್ಲಿ ಇಡ್ಲಿ ಜನಪ್ರಿಯ ತಿನಿಸಾಗಿದ್ದು, ಸಾಮಾನ್ಯವಾಗಿ ಅಕ್ಕಿ ಮತ್ತು ಉದ್ದಿನ ಬೇಳೆಯಿಂದ ತಯಾರಿಸಲಾಗುತ್ತದೆ. ಆದರೆ, ಅಕ್ಕಿ ಬಳಸದೆ ಹೆಸರು ಬೇಳೆಯಿಂದ ಮಾತ್ರ ತಯಾರಿಸುವ ಈ ಇಡ್ಲಿ ತನ್ನದೇ ಆದ ವಿಶಿಷ್ಟ ರುಚಿ ಹೊಂದಿದೆ. ಹೆಸರು ಬೇಳೆ ಇಡ್ಲಿ ತಯಾರಿಸಲು ಬೇಕಾಗುವ ಪದಾರ್ಥಗಳು ಮತ್ತು ಸುಲಭ ವಿಧಾನ ಇಲ್ಲಿದೆ. ಹೆಸರು ಬೇಳೆ ಇಡ್ಲಿ ಕೇವಲ ರುಚಿಕರ ಮಾತ್ರವಲ್ಲದೆ, ಸಾಂಪ್ರದಾಯಿಕ ಇಡ್ಲಿಗಿಂತ ಹೆಚ್ಚು ಪೌಷ್ಟಿಕವಾಗಿದೆ. ಹೆಸರು ಬೇಳೆ ಪ್ರೋಟೀನ್‌ನ ಉತ್ತಮ ಮೂಲವಾಗಿದ್ದು, ಜೀರ್ಣಕ್ರಿಯೆಗೆ ಸುಲಭ. ಇದು ತೂಕ ಇಳಿಸುವವರಿಗೆ ಹಾಗೂ ಕಡಿಮೆ ಕಾರ್ಬೋಹೈಡ್ರೇಟ್ ಸೇವಿಸಲು ಬಯಸುವವರಿಗೆ ಸೂಕ್ತ. ಕ್ಯಾರೆಟ್‌ನಂತಹ ತರಕಾರಿಗಳನ್ನು ಸೇರಿಸುವುದರಿಂದ ಇದರ ಪೌಷ್ಟಿಕಾಂಶದ ಮೌಲ್ಯ ಇನ್ನಷ್ಟು ಹೆಚ್ಚುತ್ತದೆ.

**ಹೆಸರು ಬೇಳೆ ಇಡ್ಲಿ ಏಕೆ ಉತ್ತಮ ಆಯ್ಕೆ:**

ಹೆಸರು ಬೇಳೆ ಇಡ್ಲಿಯು ಸಂಪೂರ್ಣವಾಗಿ ಅಕ್ಕಿ ಇಲ್ಲದೆ ತಯಾರಿಸುವುದರಿಂದ, ಕಡಿಮೆ ಗ್ಲೈಸೆಮಿಕ್ ಸೂಚ್ಯಂಕ ಹೊಂದಿದೆ. ಇದು ಮಧುಮೇಹಿಗಳಿಗೆ ಉತ್ತಮವಾಗಿದೆ. ಹೆಸರು ಬೇಳೆ ಪ್ರೋಟೀನ್‌ಗಳಿಂದ ಸಮೃದ್ಧವಾಗಿದ್ದು, ಸ್ನಾಯುಗಳ ಬೆಳವಣಿಗೆಗೆ ಮತ್ತು ದೇಹದ ಒಟ್ಟಾರೆ ಆರೋಗ್ಯಕ್ಕೆ ನೆರವಾಗುತ್ತದೆ. ಹೆಸರು ಬೇಳೆ ಸುಲಭವಾಗಿ ಜೀರ್ಣವಾಗುವ ಕಾಳುಗಳಲ್ಲಿ ಒಂದಾಗಿರುವುದರಿಂದ, ಇದನ್ನು ಬೆಳಗಿನ ಉಪಾಹಾರ ಅಥವಾ ರಾತ್ರಿ ಊಟಕ್ಕೂ ಸೇವಿಸಬಹುದು. ಒಗ್ಗರಣೆ ಮೊಸರು ಸೇರಿಸುವುದರಿಂದ ಈ ಇಡ್ಲಿಗೆ ಸಾಂಪ್ರದಾಯಿಕ ಇಡ್ಲಿಗಿಂತ ಭಿನ್ನವಾದ, ಸಿಹಿ ಮತ್ತು ಖಾರದ ಸಮ್ಮಿಶ್ರ ರುಚಿ ದೊರೆಯುತ್ತದೆ.

**ಹೆಸರು ಬೇಳೆ ಇಡ್ಲಿ ತಯಾರಿಸುವ ವಿಧಾನ**

ಮೊದಲಿಗೆ, ಒಂದು ಕಪ್ ಹೆಸರು ಬೇಳೆಯನ್ನು ಚೆನ್ನಾಗಿ ತೊಳೆದು ಸುಮಾರು ಎರಡು ಗಂಟೆಗಳ ಕಾಲ ನೀರಿನಲ್ಲಿ ನೆನೆಸಿಡಿ. ನಂತರ, ನೆನೆಸಿದ ಬೇಳೆಯನ್ನು ನೀರು ಬಸಿದು, ಸ್ವಲ್ಪ ನೀರು ಸೇರಿಸಿ ನುಣ್ಣಗೆ ರುಬ್ಬುವ ಬದಲು ತರಿತರಿಯಾಗಿ ರುಬ್ಬಿಕೊಳ್ಳಿ. ಹೀಗೆ ಮಾಡುವುದರಿಂದ ಇಡ್ಲಿಗಳು ಹೆಚ್ಚು ಮೃದುವಾಗಿ ಬರುತ್ತವೆ. ರುಬ್ಬಿದ ಹಿಟ್ಟಿಗೆ ಮೊಸರು, ಶುಂಠಿ, ಹಸಿ ಮೆಣಸಿನಕಾಯಿ, ತುರಿದ ಕ್ಯಾರೆಟ್, ಮತ್ತು ಕತ್ತರಿಸಿದ ಕೊತ್ತಂಬರಿ ಸೊಪ್ಪು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ. ಹೆಚ್ಚು ಮೃದುವಾದ ಇಡ್ಲಿ ಬೇಕಿದ್ದರೆ ಈಗ ಬೇಕಿಂಗ್ ಸೋಡಾ ಸೇರಿಸಬಹುದು. ಒಂದು ಸಣ್ಣ ಬಾಣಲೆಯಲ್ಲಿ ಅಡುಗೆ ಎಣ್ಣೆ ಬಿಸಿ ಮಾಡಿ, ಸಾಸಿವೆ ಮತ್ತು ಇಂಗು ಸೇರಿಸಿ.

ಸಾಸಿವೆ ಚಿಟಪಟ ಅಂದ ನಂತರ ಕರಿಬೇವು ಸೇರಿಸಿ ಒಲೆ ಆಫ್ ಮಾಡಿ. ಈ ಒಗ್ಗರಣೆಯನ್ನು ತಕ್ಷಣವೇ ಇಡ್ಲಿ ಹಿಟ್ಟಿಗೆ ಹಾಕಿ, ಚೆನ್ನಾಗಿ ಬೆರೆಸಿ. ಈಗ ರುಚಿಗೆ ತಕ್ಕಷ್ಟು ಉಪ್ಪು ಹಾಕಿ ಮತ್ತೊಮ್ಮೆ ಮಿಕ್ಸ್ ಮಾಡಿ. ಇಡ್ಲಿ ತಟ್ಟೆಗಳಿಗೆ ಎಣ್ಣೆ ಸವರಿ, ಸಿದ್ಧಪಡಿಸಿದ ಹಿಟ್ಟನ್ನು ಹಾಕಿ. ಇಡ್ಲಿ ಕುಕ್ಕರ್‌ನಲ್ಲಿ ಸುಮಾರು ಹತ್ತು ನಿಮಿಷಗಳ ಕಾಲ ಆವಿಯಲ್ಲಿ ಬೇಯಿಸಿ. ಇಡ್ಲಿ ಬೆಂದಿದೆಯೇ ಎಂದು ಪರೀಕ್ಷಿಸಲು ಟೂತ್‌ಪಿಕ್ ಅಥವಾ ಚಾಕು ಇಡ್ಲಿಯ ಮಧ್ಯದಲ್ಲಿ ಚುಚ್ಚಿ ನೋಡಿ. ಅದು ಸ್ವಚ್ಛವಾಗಿ ಹೊರಬಂದರೆ ಇಡ್ಲಿ ಬೆಂದಿದೆ ಎಂದು ಅರ್ಥ. ಬೆಂದ ನಂತರ, ನಿಮಗೆ ಇಷ್ಟವಾದ ಚಟ್ನಿ ಅಥವಾ ಸಾಂಬಾರ್‌ನೊಂದಿಗೆ ಬಿಸಿಬಿಸಿಯಾಗಿ ಸವಿಯಬಹುದು. ಈ ಸ್ಪೆಷಲ್ ಇಡ್ಲಿಯನ್ನು ಮನೆಯಲ್ಲಿ ತಯಾರಿಸಿ ಸವಿದರೆ, ಅದರ ರುಚಿಯನ್ನು ಎಂದಿಗೂ ಮರೆಯುವುದಿಲ್ಲ.

**ಹೆಸರು ಬೇಳೆ ಇಡ್ಲಿ ತಯಾರಿಸಲು ಬೇಕಾಗುವ ಪದಾರ್ಥಗಳು**

- ಹೆಸರು ಬೇಳೆ
- ತುರಿದ ಕ್ಯಾರೆಟ್
- ಮೊಸರು
- ತುರಿದ ಶುಂಠಿ
- ಹಸಿ ಮೆಣಸಿನಕಾಯಿ
- ಕತ್ತರಿಸಿದ ಕೊತ್ತಂಬರಿ ಸೊಪ್ಪು
- ಅರಿಶಿನ ಪುಡಿ (ಒಂದು ಚಿಟಿಕೆ)
- ಸಾಸಿವೆ
- ಇಂಗು
- ಸ್ವಲ್ಪ ಕರಿಬೇವು
- ರುಚಿಗೆ ತಕ್ಕಷ್ಟು ಉಪ್ಪು
- ಅಡುಗೆ ಎಣ್ಣೆ
- ಬೇಕಿಂಗ್ ಸೋಡಾ

# ಉದ್ಯಮ ವಿಸ್ತರಿಸಿದ ರೆಸ್ಟೋಲೆಕ್ಸ್, ನೋವಾ ಸ್ಲೀಪ್ ಕಂಫರ್ಟ್ಸ್ ಸಹಭಾಗಿತ್ವದಲ್ಲಿ ನೂತನ ಮಳಿಗೆ ಶುಭಾರಂಭ


• ಉದಯವಾಹಿನಿ, ಮಂಗಳೂರು

ಸ್ಪ್ರಿಂಗ್, ಕಾಯಿರ್, ಫೋಮ್ ಹಾಸಿಗೆಗಳ ಉತ್ಕೃಷ್ಟ ಶ್ರೇಣಿಗೆ ಹೆಸರುವಾಸಿಯಾದ ಪ್ರಮುಖ ಹಾಸಿಗೆ ಬ್ರಾಂಡ್ ರೆಸ್ಟೋಲೆಕ್ಸ್, ಮಂಗಳೂರಿನ ಬಲ್ಲಾಳ್ ಬಾಗ್‌ನಲ್ಲಿ ತನ್ನ ಹೊಸ ವಿಶೇಷ ಫ್ರಾಂಚೈಸಿ ಮಳಿಗೆಗೆ ಶುಕ್ರವಾರ ಚಾಲನೆ ನೀಡಿದೆ. ನೋವಾ ಸೇಲ್ಸ್ ಸ್ಲೀಪ್ ಕಂಫರ್ಟ್ಸ್ ಎಂಬ ಹೆಸರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಮಳಿಗೆಯು ಈ ಪ್ರದೇಶದ ಗ್ರಾಹಕರಿಗೆ ಗುಣಮಟ್ಟದ ನಿದ್ರೆಗೆ ಅಗತ್ಯ ಪರಿಕರಗಳನ್ನು ಒದಗಿಸಲಿದೆ ಎಂದು ಸಂಸ್ಥೆಯ ಪಾಲುದಾರರಾದ ವಿಜಯ ಕಾಮತ್ ಹೇಳಿದರು.

ಬಳಿಕ ಮಾತಾಡಿದ ಅವರು, ರೆಸ್ಟೋಲೆಕ್ಸ್ ನಾಲ್ಕು ದಶಕಗಳಿಂದ ಗ್ರಾಹಕರ ಅನುಭವಗಳನ್ನು ಹೆಚ್ಚಿಸುವುದು, ಸೂಕ್ತ ಆಯ್ಕೆಗಳನ್ನು ಬೆಂಬಲಿಸುವತ್ತ ಗಮನಹರಿಸಿದೆ. ಮಂಗಳೂರಿನಲ್ಲಿರುವ ಈ ಹೊಸ ಫ್ರಾಂಚೈಸಿ ಮಳಿಗೆಯು ನಮ್ಮ ಗ್ರಾಹಕರ ಅಗತ್ಯಗಳನ್ನು ಪೂರೈಸಲಿದೆ' ಎಂದರು, ರೆಸ್ಟೋಲೆಕ್ಸ್ ಸಿಇಒ ಸುರೇಶ್ ಬಾಬು ಉಪಸ್ಥಿತರಿದ್ದರು. ರೆಸ್ಟೋಲೆಕ್ಸ್ ಪ್ರಸ್ತುತ ಭಾರತದಾದ್ಯಂತ 85 ಮಳಿಗೆಗಳನ್ನು, ದೇಶಾದ್ಯಂತ 3,500 ಅಧಿಕೃತ ವಿತರಕರನ್ನು ಮತ್ತು ಕರ್ನಾಟಕದಲ್ಲಿ 1,100 ಅಧಿಕೃತ ವಿತರಕರನ್ನು ಹೊಂದಿದ್ದು ಮಂಗಳೂರಿನಲ್ಲಿ ಗ್ರಾಹಕರಿಗೆ ಬೇಡಿಕೆಗೆ ತಕ್ಕಂತೆ ನವನವೀನ ಮಾದರಿಯ ಹಾಸಿಗೆಗಳ ಶ್ರೇಣಿಗಳನ್ನು ಪೂರೈಸಲು ಸಜ್ಜಾಗಿದೆ.


ಉದಯವಾಹಿನಿ ಚಿತ್ರ

> **850 ಚದರ ಅಡಿ ವಿಸ್ತೀರ್ಣದಲ್ಲಿ ವ್ಯಾಪಿಸಿರುವ ಈ ಮಳಿಗೆಯು ರೆಸ್ಟೋಲೆಕ್ಸ್‌ನ ಸಂಪೂರ್ಣ ಶ್ರೇಣಿಯ ಕೊಡುಗೆಗಳನ್ನು ಒಳಗೊಂಡಿದೆ. ಇದರಲ್ಲಿ ಹಾಸಿಗೆಗಳು, ದಿಂಬುಗಳು, ಬೆಡ್‌ಶೀಟ್‌ಗಳು, ಕಂಫರ್ಟರ್ ಗಳು, ಹಾಸಿಗೆ ಕವರ್‌ಗಳು, ದಿಂಬು ಮತ್ತಿತರ ಉತ್ಪನ್ನಗಳು ಸೇರಿವೆ. ರೆಸ್ಟೋಲೆಕ್ಸ್ ಕಾಯಿರ್ ಪ್ರಾಡಕ್ಟ್ ಪ್ರೈವೇಟ್ ಲಿಮಿಟೆಡ್‌ನ ನಿರ್ದೇಶಕರಾದ ಡೇವಿಡ್ ಕುರುವಿಲ್ಲಾ ನೂತನ ಮಳಿಗೆಯನ್ನು ಉದ್ಘಾಟಿಸಿ ಶುಭ ಹಾರೈಸಿದರು.**




# ಆಗಾಗ ತಲೆನೋವು ಬರುತ್ತಿದೆಯಾ? ಹಾಗಾದ್ರೆ ದೇಹದಲ್ಲಿ ವಿಟಮಿನ್ ಡಿ ಕೊರತೆ ಕಾಣಿಸಿಕೊಂಡಿರಬಹುದು!

ತಲೆನೋವು ಎನ್ನುವುದು ಒಂದು ಸಾಮಾನ್ಯ ಸಮಸ್ಯೆ. ಅತಿಯಾದ ಒತ್ತಡ, ಮಾನಸಿಕ ತೊಂದರೆಗಳು, ಜ್ವರ ಶೀತ ಹೀಗೆ ಅನೇಕ ಕಾರಣಗಳಿಂದ ತಲೆನೋವು ಕಾಣಿಸಿಕೊಳ್ಳುತ್ತದೆ.

ಆದರೆ ದೀರ್ಘಕಾಲದವರೆಗೆ ತಲೆನೋವು ಕಾಣಿಸಿಕೊಳ್ಳುತ್ತಿದ್ದರೆ ನಿರ್ಲಕ್ಷ್ಯ ಮಾಡಲು ಹೋಗಬಾರದು ಯಾಕೆಂದರೆ ಇದು ವಿಟಮಿನ್ ಡಿಯ ಕೊರತೆಯ ಲಕ್ಷಣವಾಗಿರಬಹುದು. ತಲೆ ನೋವು ಎನ್ನುವುದು ಒಂದು ಸಾಮಾನ್ಯ ಆರೋಗ್ಯ ಸಮಸ್ಯೆ. ವಾತಾವರಣದಲ್ಲಿ ಏರುಪೇರಾದರೆ, ಶೀತ ಕೆಮ್ಮು ಜ್ವರ ಕಾಣಿಸಿಕೊಂಡರೆ, ಲೈಟ್ ಆಗಿ ತಲೆನೋವು ಕಾಣಿಸಿಕೊಳ್ಳು ವುದು ಎಲ್ಲರಲ್ಲಿಯೂ ಕಾಣಿಸಿಕೊಳ್ಳುವ ಒಂದು ಪ್ರಕ್ರಿಯೆ. ಆದರೆ ಕೆಲವೊಮ್ಮೆ ತಲೆನೋವು ಇದ್ದಕ್ಕಿದಂತೆ ಕಾಣಿಸಿಕೊಂಡು, ಇನ್ನಿಲ್ಲದ ಹಿಂಸೆ ನೀಡುತ್ತದೆ.

ಯಾಕೆ ಹೀಗೆ ಎಂದು ನೋಡುವುದಾದರೆ ಅದರಲ್ಲಿ ಜೀವನ ಶೈಲಿಯಲ್ಲಿನ ಲೋಪ ದೋಷಗಳೇ ಹೆಚ್ಚಾಗಿ



ರುತ್ತವೆ ದಿನಾ ಮಲಗುವ ಮುನ್ನ ಟೀ-ಕಾಫಿ ಅಥವಾ ಆಲ್ಕೋಹಾಲ್ ಕುಡಿಯುವುದು, ಸರಿಯಾಗಿ ನಿದ್ದೆ ಮಾಡದೇ ಇರುವುದು, ಇವೆಲ್ಲಾದರ ಜೊತೆಗೆ ಅನುವಂಶೀಯ ಕಾರಣಗಳು ಹಾಗೂ ದೇಹದಲ್ಲಿ ಕೆಲವೊಂದು ಬಗೆಯ ಪೋಷಕಾಂಶಗಳ ಕೊರತೆಯಿಂದ ಕೂಡ ತಲೆನೋವು ಬರುವ ಸಾಧ್ಯತೆ ಇರುತ್ತದೆ.

**ವಿಟಮಿನ್ ಡಿ ಕೊರತೆಯಿಂದಲೂ ತಲೆನೋವು ಬರುತ್ತೆ:** ತಲೆನೋವು ಬಂದಾಗಲೆಲ್ಲಾ ನಮ್ಮಲ್ಲಿ ಬಹುತೇಕ ಜನರು, ಈ ಸಮಸ್ಯೆಯನ್ನು ಲೈಟ್ ಆಗಿ ತೆಗೆದುಕೊಳ್ಳುತ್ತಾರೆ. ಏನೋ ಸಣ್ಣಪುಟ್ಟ ಆರೋಗ್ಯ ಸಮಸ್ಯೆಗಳಿಂದಾಗಿ ಹೀಗಾಗಿರುತ್ತೆ, ಆಮೇಲೆ ಸರಿಹೋಗುತ್ತೆ ಎಂದು ಸೈಲೆಂಟ್ ಆಗಿ ತಮ್ಮಪಾಡಿಗೆ ತಾವು ಇರುತ್ತಾರೆ. ಆದರೆ ನಿಮಗೆ ಗೊತ್ತಿರಲಿ ಕೆಲವೊಮ್ಮೆ ವಿಟಮಿನ್ ಡಿ ಕೊರತೆಯಿಂದಲೂ ತಲೆನೋವು ಬರುವ ಸಾಧ್ಯತೆ ಇರುತ್ತದೆಯಂತೆ

**ಮೈಗ್ರೇನ್ ನೋವು ಕೂಡ ಕಾಣಿಸಿಕೊಳ್ಳುತ್ತದೆಯಂತೆ:** ದೇಹದಲ್ಲಿ ವಿಟಮಿನ್ ಡಿ ಕೊರತೆಯಿದ್ದರೂ ಕೂಡ, ತಲೆನೋವಿನ ಸಮಸ್ಯೆ ಕಾಣಿಸಿಕೊಳ್ಳುತ್ತದೆಯಂತೆ! ತಲೆನೋವಿನಂತಹ ಸಣ್ಣ ಮತ್ತು ಅತ್ಯಲ್ಪ ಲಕ್ಷಣವು ಈ ಅಗತ್ಯ ವಿಟಮಿನ್ ಕೊರತೆಯ ಸಂಕೇತವಾಗಿರಬಹುದು. ನಿಮಗೆ ಗೊತ್ತಿರಲಿ ವಿಟಮಿನ್ ಡಿ ಕೊರತೆಯಿಂದಾಗಿ, ಮೈಗ್ರೇನ್ ನೋವನ್ನು ಸಹ ಎದುರಿಸಬೇಕಾಗಬಹುದು ಎನ್ನುತ್ತಾರೆ ತಜ್ಞರು. ವಿಟಮಿನ್ ಡಿ ಕೊರತೆಯು ಮೈಗ್ರೇನ್ ಸಮಸ್ಯೆಯನ್ನು ಪ್ರಚೋದಿಸಬಹುದು.

**ಒತ್ತಡಕ್ಕೊಳಗಾಗಿದ್ದರೆ:** ನೀವು ಒತ್ತಡಕ್ಕೊಳಗಾಗಿದ್ದರೆ, ನಿಮ್ಮ ದೇಹದಲ್ಲಿ ವಿಟಮಿನ್ ಡಿ ಕೊರತೆಯಿರುವ ಸಾಧ್ಯತೆಯಿದೆ. ವಿಟಮಿನ್ ಡಿ ಕೊರತೆಯು ನಿಮ್ಮ ದೈಹಿಕ ಆರೋಗ್ಯದ ಮೇಲೆ ಮಾತ್ರವಲ್ಲದೆ ನಿಮ್ಮ ಮಾನಸಿಕ ಆರೋಗ್ಯದ ಮೇಲೂ ನಕಾರಾತ್ಮಕ ಪರಿಣಾಮ ಬೀರುತ್ತದೆ. ಯಾವಾಗಲೂ ದುಃಖ, ಖಿನ್ನತೆ ಮತ್ತು ಕಿರಿಕಿರಿಯನ್ನು ಅನುಭವಿಸುವುದು ವಿಟಮಿನ್ ಡಿ ಕೊರತೆಯ ಸಂಕೇತವಾಗಿರಬಹುದು ಹಾಗಾದ್ರೆ ಈ ಸಮಸ್ಯೆಯಿಂದ ದೂರವಿರಲು ಆಹಾರಪದ್ಧತಿ ಹೇಗಿರಬೇಕು: ಈ ಅಗತ್ಯ ವಿಟಮಿನ್ ಕೊರತೆಯನ್ನು ನೀಗಿಸಲು ನೀವು ಬಯಸಿದರೆ, ನಿಮ್ಮ ಆಹಾರ ಯೋಜನೆಯಲ್ಲಿ ಕೆಲವು ವಿಷಯಗಳನ್ನು ಸೇರಿಸಿಕೊಳ್ಳಬೇಕು. ಮೊಟ್ಟೆಯ ಹಳದಿ ಲೋಳೆ, ಕೊಬ್ಬಿನ ಮೀನು, ಹಾಲು ಮತ್ತು ಅಣಬೆ ಗಳಂತಹ ಸೂಪರ್ ಆಹಾರಗಳಲ್ಲಿ ಉತ್ತಮ ಪ್ರಮಾಣದ ವಿಟಮಿನ್ ಡಿ ಕಂಡುಬರುತ್ತದೆ. ಉತ್ತಮ ಫಲಿತಾಂಶಗಳನ್ನು ಪಡೆಯಲು ಇಂತಹ ಆಹಾರಗಳನ್ನು ಸರಿಯಾದ ಪ್ರಮಾಣದಲ್ಲಿ ಮತ್ತು ಸರಿಯಾದ ರೀತಿಯಲ್ಲಿ ಸೇವಿಸಬೇಕು.

**ಮೀನು ಮತ್ತು ಸಮುದ್ರಾಹಾರವನ್ನು ಸೇವಿಸಿ:** ಸಾಲ್ಮನ್ ಉತ್ತಮ ಗುಣಮಟ್ಟದ ಮೀನು, ಇದು ಪ್ರೋಟೀನ್ ಮತ್ತು ಒಮೆಗಾ -3 ಕೊಬ್ಬಿನಾಮ್ಲಗಳ ಉತ್ತಮ ಮೂಲವಾಗಿದೆ. ಹೆಚ್ಚುವರಿಯಾಗಿ, ಇದು ವಿಟಮಿನ್ ಡಿ ಯಲ್ಲಿಯೂ ಸಮೃದ್ಧವಾಗಿದೆ. ಬೇಯಿಸಿದ ಸಾಲ್ಮನ್ ಮೀನಿನ ಒಂದು ಸರ್ವಿಂಗ್ 447 IU ವಿಟಮಿನ್ ಡಿ ಅನ್ನು ಹೊಂದಿರುತ್ತದೆ. ನಿಮ್ಮ ವಿಟಮಿನ್ ಡಿ ಮಟ್ಟವನ್ನು ಹೆಚ್ಚಿಸಲು ಸಾಲ್ಮನ್ ಅನ್ನು ನಿಮ್ಮ ಆಹಾರದಲ್ಲಿ ಸೇರಿಸಿ.

**ಅಣಬೆಗಳು**


ವಿಟಮಿನ್ ಡಿ ಯ ಏಕೈಕ ಸಸ್ಯಾಹಾರಿ ಮೂಲವೆಂದರೆ ಅಣಬೆಗಳು. ಇದರ ವೈಜ್ಞಾನಿಕ ಹೆಸರು ಅಗಾರಿಕಸ್ ಬಿಸ್ಪೊರಸ್. ಇದು ಪ್ರಪಂಚದಾದ್ಯಂತ ವ್ಯಾಪಕವಾಗಿ ಲಭ್ಯವಿದೆ. ಬಿಸಿಲಿನಲ್ಲಿ ಒಣಗಿಸಿದ ಅಣಬೆಗಳು ವಿಟಮಿನ್ ಡಿ ಯ ಅತ್ಯುತ್ತಮ ಮೂಲವಾಗಿದೆ. ಹೆಚ್ಚಿನ ಅಣಬೆಗಳು ನೈಸರ್ಗಿಕವಾಗಿ ವಿಟಮಿನ್ ಡಿ ಅನ್ನು ಹೊಂದಿರುವುದಿಲ್ಲ. ವಿಟಮಿನ್ ಡಿ ಉತ್ಪಾದಿಸಲು ಅವುಗಳಿಗೆ ಯುವಿ ಬೆಳಕಿನ ಚಿಕಿತ್ಸೆಯ ಅಗತ್ಯವಿರುತ್ತದೆ. ಅಣಬೆಗಳಲ್ಲಿ ಇರುವ ವಿಟಮಿನ್ ಡಿ ಪ್ರಮಾಣವು ಯುವಿ ಬೆಳಕಿನ ಪ್ರಮಾಣವನ್ನು ಅವಲಂಬಿಸಿರುತ್ತದೆ.



# ಪ್ರಧಾನಿ ಮೋದಿ ಹಾಗೂ ಟ್ರಂಪ್ ಉತ್ತಮ ಗೆಳೆಯರು: ಜೈಶಂಕರ್

## ಮೋದಿ ಅವರು ಅಮೆರಿಕ ಜೊತೆಗಿನ ಪಾಲುದಾರಿಕೆಗೆ ಹೆಚ್ಚಿನ ಪ್ರಾಮುಖ್ಯತೆ, ಭಾರತ, ಅಮೆರಿಕ ನಡುವಿನ ಸಂಬಂಧವನ್ನು ಗಟ್ಟಿ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವಿನ ಸಂಬಂಧದ ಬಗ್ಗೆ ವಿದೇಶಾಂಗ ಸಚಿವ ಎಸ್ ಜೈಶಂಕರ್ ಮಾತನಾಡಿದ್ದಾರೆ. ಮೋದಿ ಹಾಗೂ ಟ್ರಂಪ್ ಯಾವಾಗಲೂ ಉತ್ತಮ ಸ್ನೇಹಿತರು ಎನ್ನುವ ಮೂಲಕ ಗಮನಸೆಳೆದಿದ್ದಾರೆ. ಮೋದಿ ಅವರು ಅಮೆರಿಕ ಜೊತೆಗಿನ ಪಾಲುದಾರಿಕೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡುತ್ತಾರೆ. ಟ್ರಂಪ್ ಅವರೊಂದಿಗೆ ಅವರಿಗೆ ಉತ್ತಮ ಬಾಂಧವ್ಯವಿದೆ. ನಾವು ಅಮೆರಿಕದೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇವೆ. ಈ ಸಮಯದಲ್ಲಿ ನಾನು ಹೆಚ್ಚೇನೂ ಹೇಳಲು ಸಾಧ್ಯವಿಲ್ಲ ಎಂದು ಜೈಶಂಕರ್ ಹೇಳಿದ್ದಾರೆ. ಯುಎನ್‌ಜಿಎ ಸಭೆಯಲ್ಲಿ ಪ್ರಧಾನಿ ಮೋದಿ ಭಾಗವಹಿಸುವ ಬಗ್ಗೆ ಇನ್ನೂ ಖಚಿತವಾಗಿಲ್ಲ. ಒಂದು ವೇಳೆ ಅವರು ಭಾಗವಹಿಸಿದರೆ, ಟ್ರಂಪ್ ಅವರ ಬದ್ಧತೆಯನ್ನು ಖಚಿತಪಡಿಸಿಕೊಳ್ಳಲು ಅನುಕೂಲವಾಗುತ್ತದೆ. ಸದ್ಯಕ್ಕೆ ಜೈಶಂಕರ್



ಅವರು ಭಾರತದ ನಿಯೋಗವನ್ನು ಮುನ್ನಡೆಸಲಿದ್ದಾರೆ. ಭಾರತವು ಸೆಪ್ಟೆಂಬರ್ 26 ರಂದು UNGA ಸಭೆಯಲ್ಲಿ ಭಾಗವಹಿಸಲು ನಿರ್ಧರಿಸಿತ್ತು. ಆದರೆ, ಈಗ ಸಚಿವರ ಮಟ್ಟದಲ್ಲಿ (ಜೈಶಂಕರ್) ಭಾರತದ ಹೇಳಿಕೆಯನ್ನು ನೀಡಲಾಗುವುದು ಎಂದು ತಿಳಿಸಿದೆ. ಪ್ರಧಾನಿ ಮನಸ್ಸು ಬದಲಾಯಿಸಿದರೆ, ಅವರು ಕೂಡಾ ನ್ಯೂಯಾರ್ಕ್‌ಗೆ ಹೋಗಬಹುದು ಎನ್ನಲಾಗಿದೆ.

ಭಾರತವು ಟ್ರಂಪ್ ಅವರ ಇತ್ತೀಚಿನ ಹೇಳಿಕೆಗಳನ್ನು ನಂಬಲು ಬಯಸುತ್ತದೆ. ಈ ಹಿಂದೆ ಭಾರತ–ಪಾಕಿಸ್ತಾನ ಒಪ್ಪಂದದ ಬಗ್ಗೆ ಟ್ರಂಪ್ ಹೇಳಿಕೆ ನೀಡಿದ್ದರು. ಆದರೆ, ನಂತರ ಅದನ್ನು ಬದಲಾಯಿಸಿದ್ದರು. ಭಾರತ ಮತ್ತು ಅಮೆರಿಕ ನಡುವಿನ ಸಂಬಂಧವನ್ನು ಗಟ್ಟಿಗೊಳಿಸಲು ಬಯಸುತ್ತದೆ. ಆದರೆ, ಟ್ರಂಪ್ ಆಡಳಿತದ ಅಧಿಕಾರಿಗಳು ಭಾರತದ ವಿರುದ್ಧ ಟೀಕೆಗಳನ್ನು ಮಾಡುವುದನ್ನು ನಿಲ್ಲಿಸಬೇಕು ಎಂದು ಭಾರತ ಬಯಸುತ್ತದೆ ಎಂದಿದ್ದಾರೆ. ವಿದೇಶಾಂಗ ಸಚಿವ ಎಸ್. ಜೈಶಂಕರ್

> ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೇಳಿಕೆಗಳಿಗೆ ಪ್ರಧಾನಿ ನರೇಂದ್ರ ಮೋದಿ ತಕ್ಷಣವೇ ಸ್ಪಂದಿಸಿದ್ದಾರೆ. ಭಾರತ–ಅಮೆರಿಕ ಸಂಬಂಧಗಳ ಬಗ್ಗೆ ಟ್ರಂಪ್ ಸಕಾರಾತ್ಮಕವಾಗಿ ಮಾತನಾಡಿದ್ದಾರೆ. ಕಳೆದ 20 ವರ್ಷಗಳಲ್ಲಿ ಉತ್ತಮವಾಗಿದ್ದ ಸಂಬಂಧ ಟ್ರಂಪ್ ಆಡಳಿತದಲ್ಲಿ ಹದಗೆಟ್ಟಿದೆ. ಈಗ ಮತ್ತೆ ಸಂಬಂಧ ಸುಧಾರಿಸುವ ಸಾಧ್ಯತೆ ಇದೆ ಎಂದು ಹೇಳಿದ್ದಾರೆ.

ಸಹ ಮೋದಿ ಮತ್ತು ಟ್ರಂಪ್ ನಡುವೆ ಉತ್ತಮ ಬಾಂಧವ್ಯವಿದೆ ಎಂದಿದ್ದಾರೆ. ಈ ಬೆಳವಣಿಗೆಯಿಂದಾಗಿ ಉಭಯ ನಾಯಕರ ನಡುವೆ ಫೋನ್ ಸಂಭಾಷಣೆ ನಡೆಯುವ ಸಾಧ್ಯತೆ ಇದೆ.

ಭಾರತದ ವಿದೇಶಾಂಗ ನೀತಿಯಲ್ಲಿ ಬದಲಾವಣೆಗಳಾಗುತ್ತಿರುವ ಬಗ್ಗೆ ಚರ್ಚೆಗಳು ನಡೆಯುತ್ತಿವೆ. ಎಸ್‌ಸಿಒ ಶೃಂಗಸಭೆಯ ನಂತರ ಈ ಬಗ್ಗೆ ಹೆಚ್ಚು ಮಾತುಕತೆಗಳು ಕೇಳಿಬರುತ್ತಿವೆ. ಆದರೆ, ಅಮೆರಿಕ ಜೊತೆಗಿನ ಕಾರ್ಯತಂತ್ರದ ಸಹಭಾಗಿತ್ವವನ್ನು ಭಾರತ ಗೌರವಿಸುತ್ತದೆ ಎಂದು ಎಮ್‌ಇಎ ಹೇಳಿದೆ


### ಐಟಿ ಉದ್ಯೋಗಿಗಳಿಗೆ ತೊಂದರೆ

ಟ್ರಂಪ್ ಅವರು ಚೀನಾವನ್ನು ಬೆಂಬಲಿಸುತ್ತಿದ್ದಾರೆ. ಇದು ಭಾರತಕ್ಕೆ ತೊಂದರೆಯಾಗಬಹುದು. ಅಲ್ಲದೆ, ಅಮೆರಿಕದ ಹೊಸ ವಲಸೆ ನೀತಿಯಿಂದ ಭಾರತೀಯ ಐಟಿ ಉದ್ಯೋಗಿಗಳಿಗೆ ತೊಂದರೆಯಾಗುವ ಸಾಧ್ಯತೆ ಇದೆ. ಪಾಕಿಸ್ತಾನದೊಂದಿಗೆ ಟ್ರಂಪ್ ಅವರ ಸಂಬಂಧವು ಭಾರತಕ್ಕೆ ಕಳವಳಕಾರಿಯಾಗಿದೆ. ಒಟ್ಟಾರೆಯಾಗಿ, ಭಾರತ ಮತ್ತು ಅಮೆರಿಕದ ನಡುವಿನ ಸಂಬಂಧದಲ್ಲಿ ಏರಿಳಿತಗಳು ಕಂಡುಬರುತ್ತಿವೆ. ಟ್ರಂಪ್ ಅವರ ಇತ್ತೀಚಿನ ಹೇಳಿಕೆಗಳು ಸಂಬಂಧವನ್ನು ಸುಧಾರಿಸುವ ನಿರೀಕ್ಷೆ ಮೂಡಿಸಿವೆ.

# ಆಸ್ಟ್ರೋನೊಮರ್ ಸಿಇಒ ತಬ್ಬಿಕೊಂಡಿದ್ದ ಮಹಿಳೆ ಬಾಳಲ್ಲಿ ಬಿರುಕು ಮಾಜಿ ಹೆಚ್‌ಆರ್‌ಗೆ ಡಿವೋರ್ಸ್ ಕೊಟ್ಟ ಪತಿ

**ವಾಷಿಂಗ್ಟನ್:** ಕಾರ್ಯಕ್ರಮವೊಂದರಲ್ಲಿ ಆಸ್ಟ್ರೋನೊಮರ್ ಕಂಪನಿಯ ಸಿಇಒ ಮತ್ತು ಹೆಚ್‌ಆರ್ ತಬ್ಬಿಕೊಂಡು ವಿವಾದಕ್ಕೆ ಸೃಷ್ಟಿಸಿದ್ದ ಪ್ರಕರಣಕ್ಕೆ ಮತ್ತೊಂದು ತಿರುವು ಸಿಕ್ಕಿದೆ. ಘಟನೆಯಾದ 1 ತಿಂಗಳ ಬಳಿಕ ಹೆಚ್‌ಆರ್ ಆಗಿದ್ದ ಮಹಿಳೆ ಮತ್ತು ಆಕೆಯ ಪತಿ ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ್ದಾರೆ. ಜುಲೈ 16 ರಂದು, ಬೋಸ್ಟನ್‌ನಲ್ಲಿ ನಡೆದ ಕೋಲ್ಡ್‌ಪ್ಲೇ ಸಂಗೀತ ಕಚೇರಿಯಲ್ಲಿ ಆಸ್ಟ್ರೋನೊಮರ್ ಸಿಇಒ ಆಂಡಿ ಬೈರನ್ ಮತ್ತು ಕಂಪನಿಯ ಹೆಚ್ ಆರ್ ವಿಭಾಗದ ಮುಖ್ಯಸ್ಥೆ ಕ್ರಿಸ್ಟನ್ ಕ್ಯಾಬೋಟ್ ಅವರನ್ನು ತಬ್ಬಿಕೊಂಡಿದ್ದ ದೃಶ್ಯ ಕ್ಯಾಮೆರಾದಲ್ಲಿ ಸೆರೆಯಾಗಿತ್ತು. ಈ ಪ್ರಕರಣ ವಿಶ್ವದಾದ್ಯಂತ ವಿವಾದಕ್ಕೆ ಕಾರಣವಾಗಿತ್ತು.

**ಪ್ರಕರಣ ಏನು?:** ಬ್ರಿಟಿಷ್ ಬ್ಯಾಂಡ್‌ನ ಪ್ರದರ್ಶನದ ಭಾಗವಾಗಿ, ಕಿಸ್ ಕ್ಯಾಮ್ ಬೈರನ್ ಮತ್ತು ಕ್ಯಾಬೋಟ್‌ರನ್ನು ಉದ್ದೇಶಿಸಿ ಮಾತನಾಡಲಾಯಿತು. ಈ ವೇಳೆ ಅವರಿದ್ದ ಕಡೆಗೆ ಕ್ಯಾಮೆರಾ ಹಿಡಿಯಲಾಯಿತು. ಆಗ, ಕ್ಯಾಬೋಟ್ ಅವರನ್ನು ಬೈರನ್ ತಬ್ಬಿಕೊಂಡಿದ್ದರು. ಇಬ್ಬರೂ ದಂಪತಿಯಂತೆ ನಿಂತಿದ್ದು ಕಂಡುಬಂತು. ತಮ್ಮ ವಿಡಿಯೋ ಪ್ರದರ್ಶನವಾಗುತ್ತಿದ್ದಂತೆ ಇಬ್ಬರೂ ಮುಜುಗರಕ್ಕೆ ಒಳಗಾದರು. ಈ ವೀಡಿಯೊ ಸಾಮಾಜಿಕ



ಮಾಧ್ಯಮದಲ್ಲಿ ಭಾರಿ ಚರ್ಚೆ ಹುಟ್ಟುಹಾಕಿತು. ನಂತರ ಇಬ್ಬರೂ ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಿದರು. ಘಟನೆಯಾದ ಒಂದು ತಿಂಗಳ ಬಳಿಕ ಹೆಚ್‌ಆರ್ ಮಾಜಿ ಮುಖ್ಯಸ್ಥೆ ಕ್ರಿಸ್ಟನ್ ಕ್ಯಾಬಟ್‌ಗೆ ಆಕೆಯ ಪತಿ ಆಂಡ್ರ್ಯೂ ಕ್ಯಾಬಟ್ ವಿಚ್ಛೇದನ ನೀಡಲು ಮುಂದಾಗಿದ್ದಾರೆ. ಆ.13 ರಂದು ನ್ಯೂ ಹ್ಯಾಂಪ್‌ಶೈರ್‌ನ ಪೋರ್ಟ್ಸ್‌ಮೌತ್‌ನಲ್ಲಿರುವ ನ್ಯಾಯಾಲಯದಲ್ಲಿ ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ್ದಾರೆ.

ಘಟನೆ ಬಳಿಕ ದಂಪತಿ ಸಂಬಂಧ ಹದಗೆಟ್ಟಿತ್ತು. ಆಂಡ್ರ್ಯೂ ತನ್ನ ಹೆಂಡತಿಯ ಅಕ್ರಮ ಸಂಬಂಧದ ಬಗ್ಗೆ ತಿಳಿದಾಗ ನೊಂದುಕೊಂಡಿದ್ದರು. ಅಲ್ಲದೇ, ವಿಚಾರ ಎಲ್ಲೆಡೆ ವೈರಲ್ ಆದಾಗ ಮತ್ತಷ್ಟು ಮುಜುಗರಕ್ಕೆ ಒಳಗಾಗಿದ್ದರು.

# ಭಾರತದ ವಿರುದ್ಧ ಮತ್ತೆ ನಾಲಿಗೆ ಹರಿಬಿಟ್ಟ ನವಾರೋ

**ನ್ಯೂಯಾರ್ಕ್:** ರಷ್ಯಾ ತೈಲ ಖರೀದಿಯನ್ನು ಮುಂದುವರಿಸಿದ್ದಕ್ಕಾಗಿ ಶ್ವೇತಭವನದ ವ್ಯಾಪಾರ ಸಲಹೆಗಾರ ಪೀಟರ್ ನವರೊ ಮತ್ತೊಮ್ಮೆ ಭಾರತವನ್ನು ಟೀಕಿಸಿದ್ದಾರೆ.ಕಳೆದ ಕೆಲವು ವಾರಗಳಲ್ಲಿ, ನವರೊ ರಷ್ಯಾದೊಂದಿಗಿನ ಇಂಧನ ಸಂಬಂಧಗಳಿಗಾಗಿ ನವದೆಹಲಿಯ ಮೇಲೆ ಸರಣಿ ದಾಳಿಗಳನ್ನು ನಡೆಸುತ್ತಿದ್ದಾರೆ. ಭಾರತ ಲಾಭ ಗಳಿಸಲು ಮಾತ್ರ ರಷ್ಯಾ ತೈಲವನ್ನು ಖರೀದಿಸುತ್ತದೆ. ರಷ್ಯಾ ಉಕ್ರೇನ್ ಅನ್ನು ಆಕ್ರಮಿಸುವ ಮೊದಲು ಅದು ಯಾವುದನ್ನೂ ಖರೀದಿಸಲಿಲ್ಲ. ಭಾರತೀಯ ಸರ್ಕಾರಿ ಸ್ಪಿನ್ ಮೆಷಿನ್ ಹೆಚ್ಚಿನ ಓರೆಯಾಗಿ ಚಲಿಸುತ್ತಿದೆ. ಉಕ್ರೇನಿಯನ್ನರನ್ನು ಕೊಲ್ಲುವುದನ್ನು ನಿಲ್ಲಿಸಿ. ಅಮೆರಿಕನ್ನರ ಉದ್ಯೋಗಗಳನ್ನು ತೆಗೆದುಕೊಳ್ಳುವುದನ್ನು ನಿಲ್ಲಿಸಿ ಎಂದು ನವರೊ ಎಕ್ಸ್ ಪೋಸ್ಟ್‌ನಲ್ಲಿ ಹೇಳಿದರು.

ಭಾರತವು ತನ್ನ ಇಂಧನ ಸಂಗ್ರಹಣೆಯನ್ನು ರಾಷ್ಟ್ರೀಯ ಹಿತಾಸಕ್ತಿ, ಮಾರುಕಟ್ಟೆ ಚಲನಶೀಲತೆಯಿಂದ ನಡೆಸುತ್ತಿದೆ ಎಂದು ಸಮರ್ಥಿಸಿಕೊಂಡಿದೆ.ಭಾರತವು ರಷ್ಯಾದ ತೈಲವನ್ನು ಖರೀದಿಸುವುದು ರಷ್ಯಾದ ಯುದ್ಧ ಯಂತ್ರವನ್ನು ಪೋಷಿಸುತ್ತದೆ ಎಂದು ಹೇಳಿಕೊಂಡಿದ್ದ ತನ್ನ ಹಿಂದಿನ ಪೋಸ್ಟ್‌ನ ಸಮುದಾಯ ಟಿಪ್ಪಣಿಗೆ ನವರೊ ಪ್ರತಿಕ್ರಿಯಿಸುತ್ತಿದ್ದರು.



ಇಂಧನ ಭದ್ರತೆಗಾಗಿ ಭಾರತದ ಕಾನೂನು ಬದ್ಧ, ಸಾರ್ವಭೌಮ ರಷ್ಯಾದ ತೈಲ ಖರೀದಿಗಳು ಅಂತರ ರಾಷ್ಟ್ರೀಯ ಕಾನೂನನ್ನು ಉಲ್ಲಂಘಿಸುವುದಿಲ್ಲ. ಅಮೆರಿಕವು ಭಾರತದ ಮೇಲೆ ಒತ್ತಡ ಹೇರುತ್ತಲೇ, ಯುರೇನಿಯಂನಂತಹ ಶತಕೋಟಿ ರಷ್ಯಾದ ಸರಕುಗಳನ್ನು ಆಮದು ಮಾಡಿಕೊಳ್ಳುವುದನ್ನು ಮುಂದುವರೆಸಿದೆ, ಇದು ಸ್ಪಷ್ಟವಾದ ದ್ವಂದ್ವ ಮಾನ ದಂಡವನ್ನು ಬಹಿರಂಗಪಡಿಸುತ್ತದೆ ಎಂದು ಅದು ಹೇಳಿದೆ.

ರಷ್ಯಾದ ಕಚ್ಚಾ ತೈಲ ಸಂಗ್ರಹಣೆಗಾಗಿ ನವರೊ ಅವರ ದಾಳಿಯನ್ನು ಭಾರತವು ತಪ್ಪಾದ ಮತ್ತು ದಾರಿತಪ್ಪಿಸುವ ಎಂದು ತಿರಸ್ಕರಿಸಿದೆ. ಕಳೆದ ವಾರ, ನವರೊ ಭಾರತವನ್ನು ಕ್ರೆಮ್ಲಿನ್‌ಗೆ ತೈಲ ಹಣ ಅಕ್ರಮ ವರ್ಗಾವಣೆ ಮಾಡುವ ಸಂಸ್ಥೆ ಎಂದು ಆರೋಪಿಸಿದರು, ನವದೆಹಲಿ ರಷ್ಯಾದ ಶಸ್ತ್ರಾಸ್ತ್ರಗಳನ್ನು ಖರೀದಿಸುವುದನ್ನು ಮುಂದುವರಿಸುವುದನ್ನು ಕಾರ್ಯತಂತ್ರದ ಫ್ರೀಲೋಡಿಂಗ್ ಎಂದು ಬಣ್ಣಿಸಿದರು ಮತ್ತು ಅಮೆರಿಕದ ರಕ್ಷಣಾ ಸಂಸ್ಥೆಗಳನ್ನು ಸೂಕ್ಷ್ಮ ಮಿಲಿಟರಿ ತಂತ್ರಜ್ಞಾನಗಳನ್ನು ವರ್ಗಾಯಿಸಲು ಮತ್ತು ಭಾರತದಲ್ಲಿ ಉತ್ಪಾದನಾ ಘಟಕಗಳನ್ನು ಸ್ಥಾಪಿಸಲು ಒತ್ತಾಯಿಸಿದರು.

> ಭಾರತವು ಹೆಚ್ಚಿನ ಸುಂಕಗಳನ್ನು ವಿಧಿಸುವುದರಿಂದ ಅಮೆರಿಕದ ಉದ್ಯೋಗಗಳು ಹಾಳಾಗುತ್ತವೆ. ಭಾರತವು ಲಾಭ ಗಳಿಸಲು ರಷ್ಯಾದ ಯುದ್ಧ ಯಂತ್ರವನ್ನು ಪೋಷಿಸಲು ಮಾತ್ರ ರಷ್ಯಾದ ತೈಲವನ್ನು ಖರೀದಿಸುತ್ತದೆ. ಉಕ್ರೇನಿಯನ್ನರು ಹಾಗೂ ರಷ್ಯನ್ನರು ಸಾಯುತ್ತಾರೆ. ಅಮೆರಿಕದ ತೆರಿಗೆದಾರರು ಹೆಚ್ಚಿನ ಹಣವನ್ನು ಖರ್ಚು ಮಾಡುತ್ತಾರೆ. ಭಾರತವು ಸುಳಿವುಗಳನ್ನು ನಿಭಾಯಿಸಲು ಸಾಧ್ಯವಿಲ್ಲ ಎಂದು ಅವರು ಹೇಳಿದ್ದರು.

# ಹೆಲಿಕಾಪ್ಟರ್‌ನಲ್ಲಿ ಬಂದು ಪರೀಕ್ಷೆ ಬರೆದ ವಿದ್ಯಾರ್ಥಿಗಳು

**ಪಿತ್ತೋರ್‌ಗಢ:** ಆಗದು ಎಂದು ಕೈ ಕಟ್ಟಿ ಕುಳಿತರೆ ಸಾಗದು ಕೆಲಸವು ಮುಂದೆ ಎನ್ನುವ ಹಾಡಿನಂತೆ ಮಳೆಯಿಂದ ನದಿಯಂತಾಗಿರುವ ಉತ್ತರಾಖಂಡದಲ್ಲಿ ಪರೀಕ್ಷಾ ಕೇಂದ್ರಕ್ಕೆ ತೆರಳಲು ಸಾಧ್ಯವಾಗದ ರಾಜಸ್ಥಾನದ ನಾಲ್ವರು ವಿದ್ಯಾರ್ಥಿಗಳು ಹೆಲಿಕಾಪ್ಟರ್‌ನಲ್ಲಿ ಬಂದು ಪರೀಕ್ಷೆ ಬರೆದು ವಾಪಸ್ಸಾಗಿರುವ ಘಟನೆ ಪಿತ್ತೋರ್‌ಗಢದಲ್ಲಿ ನಡೆದಿದೆ. ಮಳೆ, ಪ್ರವಾಹ, ಭೂಕುಸಿತ ಏನೇ ಬರಲಿ ಆ ಕಾರಣವಿಟ್ಟುಕೊಂಡು ವರ್ಷಪೂರ್ತಿ ಓದಿದ್ದನ್ನು ನೀರಿನಲ್ಲಿ ಹೋಮ ಮಾಡಲು ಈ ವಿದ್ಯಾರ್ಥಿಗಳಿಗೆ ಇಷ್ಟವಿರಲಿಲ್ಲ. ಕಳೆದ ಒಂದು ತಿಂಗಳಿನಿಂದ ದೇಶದೆಲ್ಲೆಡೆ ಪ್ರವಾಹದಂಥಾ ಮಳೆಯಾಗುತ್ತಿದೆ. ಅಲ್ಲಲ್ಲಿ ಭೂಕುಸಿತ, ರಸ್ತೆಗಳು ಬಂದ್ ಆಗಿವೆ. ಹಾಗೆಯೇ ಪಿಥೋರ್‌ಗಢದ ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಗಳು ಬಿ.ಇಡಿ ಪರೀಕ್ಷೆ ಬರೆಯಬೇಕಿತ್ತು. ಅದಕ್ಕೆ ಎಲ್ಲಾ ತಯಾರಿಯೂ ನಡೆದಿತ್ತು.

ಆದರೆ ಮಳೆಯಿಂದಾಗಿ ಉತ್ತರಾಖಂಡದಲ್ಲಿ ಎಲ್ಲಾ ರಸ್ತೆಗಳು ಬಂದ್ ಆಗಿದ್ದವು. ಹಾಗಾದರೆ ಪರೀಕ್ಷಾ ಕೇಂದ್ರಕ್ಕೆ ಹೋಗುವುದಾದರೂ ಹೇಗೆ ಎಂದು ಆಲೋಚಿಸಿದ ರಾಜಸ್ಥಾನದ ನಾಲ್ವರು ವಿದ್ಯಾರ್ಥಿಗಳು, ಹೆಲಿಕಾಪ್ಟರ್‌ನ್ನು ಬಾಡಿಗೆ ಪಡೆದು



ಪರೀಕ್ಷಾ ಕೇಂದ್ರಕ್ಕೆ ತೆರಳಿ ಪರೀಕ್ಷೆ ಬರೆದಿದ್ದಾರೆ. ಪರೀಕ್ಷೆ ಬರೆದ ನಂತರ, ನಾಲ್ವರೂ ಹೆಲಿಕಾಪ್ಟರ್ ಮೂಲಕ ಹಿಂತಿರುಗಿದ್ದಾರೆ.

ಆದರೆ ಈ ಪರೀಕ್ಷೆಗೆ ಬರಲು, ಹೋಗಲು ಅವರು 40 ಸಾವಿರ ರೂ.ಗಳಿಗಿಂತ ಹೆಚ್ಚು ಖರ್ಚು ಮಾಡಬೇಕಾಯಿತು. ಹಣ ಖರ್ಚು ಮಾಡಲಾಗಿತ್ತು, ಆದರೆ ಒಂದು ವರ್ಷ ವ್ಯರ್ಥವಾಗದಂತೆ ನೋಡಿಕೊಂಡಿದ್ದೇವೆ ಎಂದು ವಿದ್ಯಾರ್ಥಿಗಳು ಹೇಳಿಕೊಂಡಿದ್ದಾರೆ. ಉತ್ತರಾಖಂಡ ಮುಕ್ತ ವಿಶ್ವವಿದ್ಯಾಲಯದ ಬಿ.ಇಡಿ ಪರೀಕ್ಷೆ ಬರೆಯಬೇಕಿತ್ತು.

ಇದಕ್ಕಾಗಿ, ರಾಜಸ್ಥಾನದ ಬಲೋತ್ರಾ ನಿವಾಸಿಗಳಾದ ಓಮರಮ್ ಜಾಟ್, ಮಗರಂ ಜಾಟ್, ಪ್ರಕಾಶ್ ಗೋದಾರ ಜಾಟ್ ಮತ್ತು ನರಪತ್ ಕುಮಾರ್ ಪರೀಕ್ಷಾ ಕೇಂದ್ರವಾದ ಮುನ್ಸಾರಿ ಮಹಾವಿದ್ಯಾಲಯಕ್ಕೆ ತಲುಪಬೇಕಾಯಿತು.

> ಹೆಲಿಕಾಪ್ಟರ್ ಸೇವೆಯನ್ನು ಒದಗಿಸಿದ್ದಕ್ಕಾಗಿ ಅವರು ಸಿಇಒ ರೋಹಿತ್ ಮಾಥುರ್ ಮತ್ತು ಪೈಲಟ್ ಪ್ರತಾಪ್ ಸಿಂಗ್ ಅವರಿಗೆ ಧನ್ಯವಾದ ಅರ್ಪಿಸಿದರು. ಏತನ್ಮಧ್ಯೆ, ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರವನ್ನು ತಾವೇ ಆಯ್ಕೆ ಮಾಡಿಕೊಳ್ಳುತ್ತಾರೆ.
>
> –ಸೋಮೇಶ್ ಕುಮಾರ್
> ಯುಒಯು ಪರೀಕ್ಷಾ ಉಸ್ತುವಾರಿ

ಎರಡು ದಿನಗಳ ಹಿಂದೆ ಅವರು ಹಲ್ದ್ವಾನಿ ತಲುಪಿದಾಗ, ಭೂಕುಸಿತದ ನಂತರ ಅನೇಕ ಸ್ಥಳಗಳಲ್ಲಿ ರಸ್ತೆಗಳು ಮುಚ್ಚಲ್ಪಟ್ಟಿವೆ ಎಂಬುದು ಅವರಿಗೆ ಗೊತ್ತಾಯಿತು. ಪರೀಕ್ಷೆ ಬರೆಯದಿದ್ದರೆ ಒಂದು ವರ್ಷ ಕಷ್ಟಪಟ್ಟಿದ್ದೆಲ್ಲಾ ವ್ಯರ್ಥವಾಗುತ್ತದೆ ಎಂದು ಚಿಂತಿಸಲಾರಂಭಿಸಿ ಅವರು, ಹಲ್ದ್ವಾನಿ–ಮುನ್ಸಾರಿ ಹೆಲಿಕಾಪ್ಟರ್ ಸೇವೆಯನ್ನು ನಿರ್ವಹಿಸುವ ಕಂಪನಿಯನ್ನು ಸಂಪರ್ಕಿಸಿ ತಮ್ಮ ಪರೀಕ್ಷೆಯ ಬಗ್ಗೆ ತಿಳಿಸಿದರು. ಕಂಪನಿಯ ಸಹಕಾರದೊಂದಿಗೆ, ಅವರು ಮುನ್ಸಾರಿಗೆ ಬಂದು ಪರೀಕ್ಷೆಗೆ ಹಾಜರಾಗಿರುವುದಾಗಿ ಓಮರಮ್ ಜಾಟ್ ಹೇಳಿದರು.

# ಆಸಿಯಾನ್ ಶೃಂಗಸಭೆಯಲ್ಲಿ ಮೋದಿ-ಟ್ರಂಪ್ ಭೇಟಿ ಸಾಧ್ಯತೆ

**ನವದೆಹಲಿ:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಪ್ರಧಾನಿ ನರೇಂದ್ರ ಮೋದಿ ಅವರು ಅಕ್ಟೋಬರ್ 26 ರಂದು ಮಲೇಷ್ಯಾದಲ್ಲಿ ನಡೆಯಲಿರುವ ಆಸಿಯಾನ್ ಶೃಂಗಸಭೆಯ ಸಂದರ್ಭದಲ್ಲಿ ಭೇಟಿಯಾಗುವ ಸಾಧ್ಯತೆ ಇದೆ.

ಟ್ರಂಪ್ ಈಗಾಗಲೇ ಶೃಂಗಸಭೆಯಲ್ಲಿ ಭಾಗವಹಿಸುವುದನ್ನು ದೃಢಪಡಿಸಿದ್ದಾರೆ. ಆದರೆ ಆಸಿಯಾನ್ ಸಭೆಗಳಲ್ಲಿ ನಿಯಮಿತವಾಗಿ ಭಾಗವಹಿಸುತ್ತಿರುವ ಪ್ರಧಾನಿ ಮೋದಿ ಅವರು ತಮ್ಮ ಉಪಸ್ಥಿತಿಯ ಕುರಿತು ಇನ್ನೂ ಔಪಚಾರಿಕ ಘೋಷಣೆ ಮಾಡಿಲ್ಲ. ಈ ವರ್ಷದ ಆಸಿಯಾನ್ ಶೃಂಗಸಭೆಯು ಇಬ್ಬರು ನಾಯಕರ ನಡುವಿನ ದ್ವಿಪಕ್ಷೀಯ ಮಾತುಕತೆಗೆ ಏಕೈಕ ಅವಕಾಶವಾಗಿ ಪರಿಣಮಿಸಬಹುದು. ಟ್ರಂಪ್ ನವೆಂಬರ್‌ನಲ್ಲಿ ಜಿ 20 ಶೃಂಗಸಭೆಗಾಗಿ ದಕ್ಷಿಣ ಆಫ್ರಿಕಾಕ್ಕೆ ಪ್ರಯಾಣಿಸುವುದಿಲ್ಲ.ಕ್ವಾಡ್ ವೇದಿಕೆಯು ಸಭೆಗೆ ಸಂಭಾವ್ಯ ವೇದಿಕೆಯಾಗಿ ಉಳಿದಿದೆ, ಆದರೂ ಅದು ರಾಜತಾಂತ್ರಿಕ ಚರ್ಚೆಗಳ ಫಲಿತಾಂಶವನ್ನು ಅವಲಂಬಿಸಿರುತ್ತದೆ. ಮಲೇಷ್ಯಾವು ಅಕ್ಟೋಬರ್ 26 ರಿಂದ 28ರವರೆಗೆ 47 ನೇ ಆಸಿಯಾನ್ ಶೃಂಗಸಭೆಯನ್ನು ಆಯೋಜಿಸಲಿದ್ದು, 10 ಸದಸ್ಯರ ಬಣದ ನಾಯಕರನ್ನು ಒಟ್ಟುಗೂಡಿಸಿ ಆರ್ಥಿಕ ಏಕೀಕರಣ, ಭದ್ರತಾ ಸವಾಲುಗಳು ಮತ್ತು ಸುಸ್ಥಿರ ಬೆಳವಣಿಗೆಯಂತಹ ಪ್ರಾದೇಶಿಕ ಆದ್ಯತೆಗಳ ಕುರಿತು ಚರ್ಚಿಸಲಿದೆ. ಈ ಶೃಂಗಸಭೆಯು ಇತ್ತೀಚಿನ ವರ್ಷಗಳಲ್ಲಿ ಆಗ್ನೇಯ ಏಷ್ಯಾದ ಗುಂಪು ಆಯೋಜಿಸಿರುವ ಅತಿದೊಡ್ಡ ಸಭೆಗಳಲ್ಲಿ ಒಂದಾಗುವ ನಿರೀಕ್ಷೆಯಿದೆ.

ಭಾರತೀಯ ಸರಕುಗಳ ಮೇಲೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು 50% ರಷ್ಟು ಹೆಚ್ಚಿನ ಸುಂಕಗಳನ್ನು ವಿಧಿಸಿದ್ದಾರೆ ಮತ್ತು ರಷ್ಯಾದಿಂದ ಭಾರತದ ತೈಲ ಆಮದುಗಳ ಬಗ್ಗೆ ಅವರು ಪದೇ ಪದೇ ಟೀಕಿಸಿದ್ದಾರೆ. ಯುದ್ಧದ ಮಾನವ ಸಾವುನೋವುಗಳಿಗೆ ನವದೆಹಲಿ ಪರೋಕ್ಷವಾಗಿ ಕೊಡುಗೆ ನೀಡಿದೆ ಎಂದು ಆರೋಪಿಸಿದ ಟ್ರಂಪ್, ಅನೇಕ ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಭಾರತವನ್ನು ದೂಷಿಸುವವರೆಗೂ ಹೋದರು.

ಈ ವಾರದ ಆರಂಭದಲ್ಲಿ ಟ್ರಂಪ್ ತಮ್ಮ ಸಾಮಾಜಿಕ ಮಾಧ್ಯಮ ವೇದಿಕೆಯಾದ ಟ್ರೂತ್ ಸೋಶಿಯಲ್‌ನಲ್ಲಿ ವಿವಾದಾತ್ಮಕ ಸಂದೇಶವನ್ನು ಪೋಸ್ಟ್ ಮಾಡಿದಾಗ ಪರಿಸ್ಥಿತಿ ಉಲ್ಬಣಗೊಂಡಿತು. ಟಿಯಾಂಜಿನ್‌ನಲ್ಲಿ ನಡೆದ ಶಾಂಘೈ ಸಹಕಾರ ಸಂಸ್ಥೆ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಚೀನಾ



ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರೊಂದಿಗೆ ಇರುವ ಚಿತ್ರಣವನ್ನು ಹಂಚಿಕೊಂಡ ಟ್ರಂಪ್, ನಾವು ಭಾರತ ಮತ್ತು ರಷ್ಯಾವನ್ನು ಅತ್ಯಂತ ಆಳವಾದ, ಕತ್ತಲೆಯಾದ ಚೀನಾಕ್ಕೆ ಕಳೆದುಕೊಂಡಂತೆ ಕಾಣುತ್ತಿದೆ. ಅವರು ಒಟ್ಟಿಗೆ ದೀರ್ಘ ಮತ್ತು ಸಮೃದ್ಧ ಭವಿಷ್ಯವನ್ನು ಹೊಂದಿರಲಿ! ಎಂದು ಬರೆದಿದ್ದರು. ಈ ಪೋಸ್ಟ್ ವಾಷಿಂಗ್ಟನ್ ಮತ್ತು ನವದೆಹಲಿ ಎರಡರಲ್ಲೂ ದ್ವಿಪಕ್ಷೀಯ ಸಂಬಂಧಗಳ ಪಥದ ಬಗ್ಗೆ ಕಳವಳವನ್ನು ಹುಟ್ಟುಹಾಕಿತ್ತು, ಹೆಚ್ಚುತ್ತಿರುವ ಅಸಮಾಧಾನವನ್ನು ಗ್ರಹಿಸಿದ ಟ್ರಂಪ್, ಶ್ವೇತಭವನದ ಪತ್ರಿಕಾ ಗೋಷ್ಠಿಯಲ್ಲಿ ತಮ್ಮ ಹೇಳಿಕೆಗಳನ್ನು ಹಿಂದಕ್ಕೆ ಪಡೆಯಲು ಪ್ರಯತ್ನಿಸಿದರು. ನಾನು ಯಾವಾಗಲೂ ಮೋದಿಯೊಂದಿಗೆ ಸ್ನೇಹಿತನಾಗಿರುತ್ತೇನೆ. ಅವರು ಒಬ್ಬ ಮಹಾನ್ ಪ್ರಧಾನಿ ಎಂದು ಟ್ರಂಪ್ ಬಣ್ಣಿಸಿದ್ದರು. ಭಾರತವು ತನ್ನ ಪಾಲಿಗೆ ಸ್ಥಿರವಾದ ನಿಲುವನ್ನು ಕಾಯ್ದುಕೊಂಡಿದೆ. ವಿದೇಶಾಂಗ ಸಚಿವಾಲಯವು ಅಮೆರಿಕದೊಂದಿಗಿನ ಸಂಬಂಧಗಳು ನವದೆಹಲಿಯ ವಿದೇಶಾಂಗ ನೀತಿಯ ಕೇಂದ್ರಬಿಂದುವಾಗಿದೆ ಎಂದು ಪುನರುಚ್ಚರಿಸಿದ್ದು, ರಾಷ್ಟ್ರೀಯ ಹಿತಾಸಕ್ತಿಯ ಆದ್ಯತೆಯನ್ನು ಒತ್ತಿಹೇಳುತ್ತದೆ.

ಭಾರತ, ಅಮೆರಿಕ ನಡುವಿನ ಸಂಬಂಧಗಳು ನಮಗೆ ಮುಖ್ಯ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಭಾರತ ಮತ್ತು ಅಮೆರಿಕ ನಡುವೆ ಸಮಗ್ರ ಜಾಗತಿಕ ಪಾಲುದಾರಿಕೆ ಇದೆ, ಎರಡೂ ರಾಷ್ಟ್ರಗಳ ಪರಸ್ಪರ ಪ್ರಯೋಜನವನ್ನು ಮುಂದಕ್ಕೆ ತೆಗೆದುಕೊಳ್ಳಬೇಕು. ಅದೇ ಸಮಯದಲ್ಲಿ, ಭಾರತ ಯಾವಾಗಲೂ ತನ್ನ ರಾಷ್ಟ್ರೀಯ ಹಿತಾಸಕ್ತಿಗೆ ಮೊದಲ ಸ್ಥಾನ ನೀಡುತ್ತದೆ ಎಂದು ಹೇಳಿದ್ದಾರೆ. ಈ ವರ್ಷದ ಕೊನೆಯಲ್ಲಿ ಮಲೇಷ್ಯಾದಲ್ಲಿ ನಡೆಯಲಿರುವ ಆಸಿಯಾನ್ ಶೃಂಗಸಭೆಯ ಸಂದರ್ಭದಲ್ಲಿ ಟ್ರಂಪ್, ಮೋದಿ ನಡುವಿನ ಮುಖಾಮುಖಿ ಸಭೆಯು ನಿರ್ಣಾಯಕವಾಗಬಹುದು ಎಂದು ವಿಶ್ಲೇಷಕರು ನಂಬಿದ್ದಾರೆ.

# ಗುಂಡಿನ ಚಕಮಕಿಯಲ್ಲಿ ಮಾವೋವಾದಿ ಬಲಿ

**ಚೈಬಾಸಾ:** ಜಾರ್ಖಂಡ್‌ನ ಪಶ್ಚಿಮ ಸಿಂಗ್‌ಭೂಮ್ ಜಿಲ್ಲೆಯಲ್ಲಿ ಭದ್ರತಾ ಪಡೆಗಳೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ತಲೆಗೆ 10 ಲಕ್ಷ ರೂ. ಬಹುಮಾನ ಹೊಂದಿದ್ದ ಮಾವೋವಾದಿಯಬ್ಬ ಸಾವನ್ನಪ್ಪಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.



ಗೋಲ್‌ಕೇರಾ ಪೊಲೀಸ್ ಠಾಣೆ ಪ್ರದೇಶದ ಬುರ್ಜುವಾ ಬೆಟ್ಟದಲ್ಲಿ ಬೆಳಿಗ್ಗೆ ಈ ಘಟನೆ ನಡೆದಿದೆ. ಶೋಧ ಕಾರ್ಯಾಚರಣೆಯ ಸಮಯದಲ್ಲಿ ಒಂದು ಶವ ಪತ್ತೆಯಾಗಿದೆ ಎಂದು ಐಜಿಪಿ, ಜಾರ್ಖಂಡ್ ಪೊಲೀಸ್ ವಕ್ತಾರ ಮೈಕೆಲ್ ರಾಜ್ ಎಸ್ ತಿಳಿಸಿದರು, ಮೃತನನ್ನು ಸಿಪಿಐನ ಸ್ವಯಂ ಘೋಷಿತ ವಲಯ ಕಮಾಂಡರ್ ಅಮಿತ್ ಹನ್ಸ್ದಾ ಅಲಿಯಾಸ್ ಆಪ್ತಾನ್ ಎಂದು ಗುರುತಿಸಲಾಗಿದೆ, ಈ ಪ್ರದೇಶದಲ್ಲಿ ಇನ್ನೂ ಶೋಧ ಕಾರ್ಯಾಚರಣೆ ನಡೆಯುತ್ತಿದೆ ಎಂದು ಅವರು ಹೇಳಿದರು.

ಗೋಯಿಲ್ಕೆರಾ ಪೊಲೀಸ್ ಠಾಣೆ ವ್ಯಾಪ್ತಿಯ ರೆಲಾಪರಲ್ ಪ್ರದೇಶದಲ್ಲಿ ಮಾವೋವಾದಿಗಳು ಇರುವ ಬಗ್ಗೆ ಚೈಬಾಸಾ ಪೊಲೀಸ್ ವರಿಷ್ಠಾಧಿಕಾರಿಗೆ ಸುಳಿವು ಸಿಕ್ಕಿತ್ತು ಎಂದು ಮತ್ತೊಬ್ಬ ಅಧಿಕಾರಿ ತಿಳಿಸಿದ್ದಾರೆ. ಮಾಹಿತಿಯ ಆಧಾರದ ಮೇಲೆ, ಭದ್ರತಾ ಪಡೆಗಳ ತಂಡಗಳು ಬೆಳಿಗ್ಗೆ ಶೋಧ ಕಾರ್ಯಾಚರಣೆ ನಡೆಸಿದ್ದು, ಬೆಳಿಗ್ಗೆ 6 ಗಂಟೆ ಸುಮಾರಿಗೆ ಎನ್‌ಕೌಂಟರ್ ನಡೆದಿದೆ ಎಂದು ಅವರು ಹೇಳಿದರು. ಭದ್ರತಾ ಪಡೆಗಳು ತಮ ಮೇಲೆ ಹಿಡಿತ ಸಾಧಿಸುತ್ತಿರುವುದನ್ನು ಗಮನಿಸಿದ ಮಾವೋವಾದಿಗಳು ದಟ್ಟವಾದ ಕಾಡಿಗೆ ಓಡಿಹೋದರು ಮತ್ತು ನಂತರದ ಶೋಧ ಕಾರ್ಯಾಚರಣೆಯ ಸಮಯದಲ್ಲಿ, ಹನ್ಸ್ದಾ ಅವರ ಮೃತದೇಹವು ಬಂದೂಕಿನೊಂದಿಗೆ ಪತ್ತೆಯಾಗಿದೆ ಎಂದು ಅಧಿಕಾರಿ ಹೇಳಿದರು.

# ರಾಹುಲ್ ಗಾಂಧಿ ಬ್ರಿಟಿಷ್ ಪ್ರಜೆ ಎಂದು ಆರೋಪ ಬಿಜೆಪಿ ಕಾರ್ಯಕರ್ತನಿಗೆ ಇಡಿ ಸಮನ್ಸ್

**ನವದಹಲಿ:** ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಬ್ರಿಟಿಷ್ ಪ್ರಜೆ ಎಂದು ಆರೋಪಿಸಿ ಅಲಹಾಬಾದ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದ ಕರ್ನಾಟಕದ ಬಿಜೆಪಿ ಕಾರ್ಯಕರ್ತರೊಬ್ಬರಿಗೆ ಜಾರಿ ನಿರ್ದೇಶನಾಲಯ ಸಮನ್ಸ್ ಜಾರಿ ಮಾಡಿದೆ ಎಂದು ಮೂಲಗಳು ತಿಳಿಸಿವೆ. ಅರ್ಜಿ ಸಲ್ಲಿಸಿದ್ದ ವ್ಯಕ್ತಿಯನ್ನು ಎಸ್.ವಿಶ್ವೇಶ್ ಶಿಶಿರ್ ಎಂದು ಗುರುತಿಸಲಾಗಿದೆ.



ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆಯ ನಿಬಂಧನೆಗಳ ಪ್ರಕಾರ ಪ್ರಕರಣಕ್ಕೆ ಸಂಬಂಧಿಸಿದಂತೆ ತಾವು ಹೊಂದಿರುವ ಎಲ್ಲಾ ಸಾಕ್ಷ್ಯಗಳೊಂದಿಗೆ ಸೆ.9ರಂದು ವಿಚಾರಣೆಗೆ ಹಾಜರಾಗುವಂತೆ ಶಿಶಿರ್‌ಗೆ ಸೂಚಿಸಲಾಗಿದೆ ಎಂದು ಇ.ಡಿ. ಮೂಲಗಳು ಮಾಹಿತಿ ನೀಡಿವೆ. ರಾಹುಲ್ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ತನಿಖೆ ಪ್ರಗತಿಯಲ್ಲಿದೆ ಎಂದೂ ಹೇಳಿವೆ. ವ್ಯಕ್ತಿಗಳು ಅಥವಾ ಕಂಪನಿಗಳು ವಿದೇಶಿ ವಿನಿಮಯ ಕಾನೂನು ಉಲ್ಲಂಘನೆಗೆ ಸಂಬಂಧಿಸಿದ ಪ್ರಕರಣಗಳನ್ನು FEMA ಕಾಯ್ದೆ ಅಡಿಯಲ್ಲಿ ಇ.ಡಿ. ತನಿಖೆ ನಡೆಸುತ್ತದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಲು ಕಾಂಗ್ರೆಸ್ ನಿರಾಕರಿಸಿದೆ.

**ಶಿಶಿರ್ ಅರ್ಜಿಯಲ್ಲಿ ಏನಿದೆ?:** ಲೋಕಸಭೆಯ ವಿರೋಧ ಪಕ್ಷದ ನಾಯಕರೂ ಆಗಿರುವ ರಾಹುಲ್ ಗಾಂಧಿ ಅವರು ಬ್ರಿಟಿಷ್ ಪ್ರಜೆ ಎಂಬುದನ್ನು ಸಾಬೀತು ಮಾಡುವ ದಾಖಲೆಗಳು, ಬ್ರಿಟನ್ ಸರ್ಕಾರದ ಕೆಲವು ಇ–ಮೇಲ್‌ಗಳು ತಮ್ಮ ಬಳಿ ಇವೆ. ಹಾಗಾಗಿ, ಅವರು ಭಾರತದ ಚುನಾವಣೆಗಳಲ್ಲಿ ಸ್ಪರ್ಧಿಸಲು ಅನರ್ಹ ಎಂಬುದಾಗಿ ಶಿಶಿರ್ ಅವರು ಅಲಹಾಬಾದ್ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದಾರೆ. ಇದರ ಬೆನ್ನಲ್ಲೇ, ಶಿಶಿರ್‌ಗೆ 24/7 ಸೂಕ್ತ ಭದ್ರತೆ ಒದಗಿಸಬೇಕು ಎಂದು ಕೇಂದ್ರ ಸರ್ಕಾರಕ್ಕೆ ಹೈಕೋರ್ಟ್ ಆಗಸ್ಟ್ 30ರಂದು ಸೂಚಿಸಿತ್ತು. ಪ್ರಕರಣದ ವಿಚಾರಣೆಯನ್ನು ಅಕ್ಟೋಬರ್ 9ಕ್ಕೆ ಮುಂದೂಡಲಾಗಿದೆ.

# ದೇಶವ್ಯಾಪಿ ಎಸ್‌ಐಆರ್‌ಗೆ ಚುನಾವಣಾ ಆಯೋಗ ಸಿದ್ಧತೆ

## ರಾಜ್ಯ ಚುನಾವಣಾ ಅಧಿಕಾರಿಗಳೊಂದಿಗೆ ಸೆ.10ರಂದು ಕೇಂದ್ರ ಚುನಾವಣಾ ಆಯೋಗದ ಸಭೆ

**ನವದೆಹಲಿ:** ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಗೆ ವಿರೋಧ ವ್ಯಕ್ತವಾಗಿರುವಾಗಲೇ, ದೇಶದಾದ್ಯಂತ ಎಸ್‌ಐಆರ್ ಜಾರಿಗೊಳಿಸಲು ಕೇಂದ್ರ ಚುನಾವಣಾ ಆಯೋಗ ಸಿದ್ಧತೆ ನಡೆಸಿದೆ. ದೇಶವ್ಯಾಪಿ ಎಸ್‌ಐಆರ್ ಜಾರಿಗೆ ಕೈಗೊಳ್ಳಬೇಕಿರುವ ಸಿದ್ಧತೆಗಳ ಕುರಿತು ಚರ್ಚಿಸಲು ಆಯೋಗದ ಉನ್ನತ ಅಧಿಕಾರಿಗಳು ಸೆಪ್ಟೆಂಬರ್ 10ರಂದು ವಿವಿಧ ರಾಜ್ಯಗಳ ಚುನಾವಣಾ ಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಡೆಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಮುಖ್ಯ ಚುನಾವಣಾ ಆಯುಕ್ತರಾಗಿ (ಸಿಇಸಿ) ಜ್ಞಾನೇಶ್ ಕುಮಾರ್ ಅವರು ಅಧಿಕಾರ ಸ್ವೀಕರಿಸಿದ ಬಳಿಕ, ರಾಜ್ಯಗಳ ಮುಖ್ಯ ಚುನಾವಣಾ ಅಧಿಕಾರಿಗಳೊಂದಿಗೆ ನಡೆಸುತ್ತಿರುವ ಮೂರನೆಯ ಸಭೆ ಇದಾಗಿದೆ.

ಬಿಹಾರದ ನಂತರ ದೇಶದ ಉಳಿದ ರಾಜ್ಯಗಳಲ್ಲೂ ಎಸ್‌ಐಆರ್ ಜಾರಿಗೊಳಿಸುವುದಾಗಿ ಚುನಾವಣಾ ಆಯೋಗ ಈ ಹಿಂದೆಯೇ ಹೇಳಿತ್ತು. 2026ರಲ್ಲಿ ಅಸ್ಸಾಂ, ಕೇರಳ, ಪುದುಚೇರಿ, ತಮಿಳುನಾಡು, ಪಶ್ಚಿಮ ಬಂಗಾಳದಲ್ಲಿ ವಿಧಾನಸಭಾ ಚುನಾವಣೆ ನಡೆಯಲಿದ್ದು ಇದಕ್ಕೂ ಮುನ್ನ ಅಂದರೆ, ಈ ವರ್ಷಾಂತ್ಯದಿಂದಲೇ ಈ ರಾಜ್ಯಗಳಲ್ಲಿ ಎಸ್‌ಐಆರ್ ಪ್ರಕ್ರಿಯೆಗಳು ಆರಂಭಗೊಳ್ಳುವ ಸಾಧ್ಯತೆ ಇದೆ.

**ವಿರೋಧ ಪಕ್ಷಗಳ ಆರೋಪ**

★ ಬಿಹಾರದಲ್ಲಿ ವಿಧಾನಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಬಿಜೆಪಿಗೆ ಸಹಾಯ ಮಾಡಲು ಆಯೋಗವು ಎಸ್‌ಐಆರ್ ಜಾರಿಗೊಳಿಸಿದೆ

★ ಅರ್ಹ ಮತದಾರರು ದಾಖಲೆಗಳ ಕೊರತೆ ಕಾರಣದಿಂದ ಅಮೂಲ್ಯವಾದ ಮತದಾನದ ಹಕ್ಕಿನಿಂದ ವಂಚಿತರಾಗುತ್ತಾರೆ





### ಎಸ್‌ಐಆರ್ ಉದ್ದೇಶ

- ★ ಜನ್ಮಸ್ಥಳ ಪರಿಶೀಲನೆಯ ಮೂಲಕ ವಿದೇಶಿ ಅಕ್ರಮ ವಲಸಿಗರನ್ನು ಮತದಾರರ ಪಟ್ಟಿಯಿಂದ ಹೊರಗಿಡುವುದು
- ★ ಬಾಂಗ್ಲಾದೇಶ, ಮ್ಯಾನ್ಮಾರ್ ಸೇರಿ ದೇಶದಲ್ಲಿ ನುಸುಳಿರುವ ವಿದೇಶಿ ಅಕ್ರಮ ವಲಸಿಗರನ್ನು ಗುರುತಿಸುವುದು
- ★ ಮತದಾರರ ಪಟ್ಟಿಯ ಸಮಗ್ರತೆ ರಕ್ಷಿಸಲು, ಸಾಂವಿಧಾನಿಕ ಆದೇಶ ನಿರ್ವಹಿಸಲು ಮುಂದಾದ ಆಯೋಗ
- ★ ಮತಗಟ್ಟೆ ಅಧಿಕಾರಿಗಳು ಬೂತ್ ಮಟ್ಟದಲ್ಲಿ ಪ್ರತಿ ಮನೆಗೆ ಭೇಟಿ ನೀಡಿ, ಮತದಾರರ ವಿವರವನ್ನು ಸಂಗ್ರಹಿಸಿ, ಖಚಿತಪಡಿಸಿಕೊಳ್ಳುವುದು

### ಸುಪ್ರೀಂಕೋರ್ಟ್ ಸೂಚನೆ

ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಮತ್ತು ಮತದಾನದ ಹಕ್ಕಿನಿಂದ ವಂಚಿತರಾಗುತ್ತಿಲ್ಲ ಎನ್ನುವುದನ್ನು ಖಚಿತಪಡಿಸಿಕೊಳ್ಳುವಂತೆ ಸುಪ್ರೀಂಕೋರ್ಟ್ ಚುನಾವಣಾ ಆಯೋಗಕ್ಕೆ ಸೂಚನೆ ನೀಡಿದೆ. ಕೆಲವು ರಾಜ್ಯಗಳ ಮುಖ್ಯ ಚುನಾವಣಾ ಅಧಿಕಾರಿಗಳು ಈಗಾಗಲೇ ತಮ್ಮ ರಾಜ್ಯಗಳಲ್ಲಿ ಕೊನೆಯ ಬಾರಿ ಪರಿಷ್ಕರಣೆ ಆಗಿರುವ ಮತದಾರರ ಪಟ್ಟಿಯನ್ನು ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸುತ್ತಿದ್ದಾರೆ. ಹೆಚ್ಚಿನ ರಾಜ್ಯಗಳು 2002–2004ರ ಅವಧಿಯಲ್ಲಿ ಮತದಾರರ ಪಟ್ಟಿಯನ್ನು ಪರಿಷ್ಕರಿಸಿದ್ದವು.

ಘೋಷಣಾ ಪತ್ರ – ಹೊಸ ನಮೂನೆ

ಮತದಾರರ ಪಟ್ಟಿಗೆ ಹೊಸದಾಗಿ ಹೆಸರು ಸೇರ್ಪಡೆ ಮಾಡಲು ಬಯಸುವವರಿಗೆ ಮತ್ತು ಹೊರ ರಾಜ್ಯಗಳಿಗೆ ಸ್ಥಳಾಂತರಗೊಂಡವರಿಗೆ ಎಸ್‌ಐಆರ್‌ನಲ್ಲಿ ಘೋಷಣಾ ಪತ್ರ ಎಂಬ ಹೊಸ ನಮೂನೆಯನ್ನು ಪರಿಚಯಿಸಲಾಗಿದೆ. ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಮಾಡುವವರು 1987ರ ಜುಲೈ 1ರ ಮೊದಲು ಜನಿಸಿದವರಾಗಿದ್ದರೆ ಭಾರತದಲ್ಲಿ ಜನಿಸಿದ್ದೇವೆ ಎನ್ನುವುದಕ್ಕೆ ಜನ್ಮ ದಿನಾಂಕ ಮತ್ತು ಜನ್ಮಸ್ಥಳದ ದಾಖಲೆ ಒದಗಿಸಬೇಕು. 1987ರ ಜುಲೈ 1ರಿಂದ 2004ರ ಡಿಸೆಂಬರ್ 2ರ ಒಳಗೆ ಜನಿಸಿದವರು ತಮ್ಮ ಪೋಷಕರ ಜನ್ಮದಿನಾಂಕ ಜನ್ಮಸ್ಥಳದ ದಾಖಲೆಯನ್ನೂ ಒದಗಿಸಬೇಕು.

## ಮಿನಿ ನ್ಯೂಸ್

### ಪಾಕ್ ಸ್ಟೇಡಿಯಂನಲ್ಲಿ ಸ್ಫೋಟ ಓರ್ವ ಸಾವು, ಹಲವರಿಗೆ ಗಾಯ

**ಇಸ್ಲಾಮಾಬಾದ್:** ಕ್ರಿಕೆಟ್ ಪಂದ್ಯ ನಡೆಯುತ್ತಿದ್ದಾಗಲೇ ಸ್ಟೇಡಿಯಂನಲ್ಲಿ ಸ್ಫೋಟ ಸಂಭವಿಸಿದ ಘಟನೆ ಪಾಕಿಸ್ತಾನದ ವಾಯುವ್ಯ ಖೈಬರ್ ಪಖ್ತುನ್ಖ್ವಾ ಪ್ರಾಂತ್ಯದಲ್ಲಿ ನಡೆದಿದೆ.

ಸ್ಫೋಟಕ್ಕೆ ಓರ್ವ ಬಲಿಯಾಗಿದ್ದು, ಹಲವು ಮಂದಿ ಗಾಯಗೊಂಡಿದ್ದಾರೆ. ಬಜೌರ್ ಜಿಲ್ಲೆಯ ಖಾರ್ ತೆಹ್ಸಿಲ್‌ನಲ್ಲಿರುವ ಕೌಸರ್ ಕ್ರಿಕೆಟ್ ಮೈದಾನದಲ್ಲಿ ಸ್ಫೋಟ ಸಂಭವಿಸಿದೆ. ಬಜೌರ್ ಜಿಲ್ಲಾ ಪೊಲೀಸ್ ಅಧಿಕಾರಿ ವಕಾಸ್ ರಫೀಕ್ ಅವರು ಸುಧಾರಿತ ಸ್ಫೋಟಕ ಸಾಧನದ ಮೂಲಕ ಸ್ಫೋಟವನ್ನು ನಡೆಸಲಾಗಿದೆ ಎಂದು ಖಚಿತಪಡಿಸಿದ್ದಾರೆ. ಸ್ಫೋಟಗೊಂಡ ಬೆನ್ನಲ್ಲೇ ಪಂದ್ಯ ವೀಕ್ಷಿಸುತ್ತಿದ್ದ ಅಭಿಮಾನಿಗಳು ದಿಕ್ಕಾಪಾಲಾಗಿ ಓಡಿ ಹೋಗಿದ್ದಾರೆ. ಮೈದಾನದಲ್ಲಿ ದಟ್ಟವಾದ ಹೊಗೆ ಏಳುತ್ತಿರುವ ದೃಶ್ಯ ವಿಡಿಯೋದಲ್ಲಿ ಸೆರೆಯಾಗಿದೆ.

### ಬರ್ತ್‌ಡೇ ಸೆಲೆಬ್ರೇಟ್‌ಗೆ ಕರೆದೊಯ್ದು ಪರಿಚಯಸ್ಥರಿಂದಲೆ ಗ್ಯಾಂಗ್ ರೇಪ್

**ಕೋಲ್ಕತ್ತಾ:** ಮಹಿಳೆಯೊಬ್ಬಳ ಹುಟ್ಟುಹಬ್ಬದ ದಿನವೇ ಆಕೆಯ ಮೇಲೆ ಇಬ್ಬರು ಪರಿಚಯಸ್ಥರು ಸೇರಿ ಸಾಮೂಹಿಕ ಅತ್ಯಾಚಾರ ಎಸಗಿರುವುದು ಕೋಲ್ಕತ್ತಾದಲ್ಲಿ ನಡೆದಿದೆ. ನಗರದ ದಕ್ಷಿಣ ಹೊರವಲಯದಲ್ಲಿರುವ ರೀಜೆಂಟ್ ಪಾರ್ಕ್ ಪ್ರದೇಶದಲ್ಲಿ ಅತ್ಯಾಚಾರ ನಡೆದಿದೆ. ಕೃತ್ಯ ಎಸಗಿ ನಾಪತ್ತೆಯಾಗಿದ್ದ ಇಬ್ಬರು ಆರೋಪಿಗಳನ್ನು ಚಂದನ್ ಮಲಿಕ್ ಮತ್ತು ದೀಪ್ ಎಂದು ಗುರುತಿಸಲಾಗಿದೆ. ದೀಪ್ ಸರ್ಕಾರಿ ಉದ್ಯೋಗಿ ಎಂದು ವರದಿಯಾಗಿದೆ. ಹರಿದೇವ್‌ಪುರದ ಮಹಿಳೆಯನ್ನು ಹುಟ್ಟುಹಬ್ಬದ ಆಚರಣೆ ನೆಪದಲ್ಲಿ ಚಂದನ್, ದೀಪ್ ಮನೆಗೆ ಕರೆದುಕೊಂಡು ಹೋಗಿದ್ದ. ಈ ವೇಳೆ ಹಲ್ಲೆನಡೆಸಿ ಆಕೆಯ ಮೇಲೆ ಅತ್ಯಾಚಾರ ಎಸಗಲಾಗಿದೆ. ಬಳಿಕ ಶನಿವಾರ ಬೆಳಗ್ಗೆ ಮಹಿಳೆ ಅಲ್ಲಿಂದ ತಪ್ಪಿಸಿಕೊಂಡು ಬಂದು ಕುಟುಂಬಸ್ಥರಿಗೆ ಮಾಹಿತಿ ನೀಡಿದ್ದಳು. ಈ ಸಂಬಂಧ ಮಹಿಳೆಯ ಕುಟುಂಬಸ್ಥರು ಪೊಲೀಸರಿಗೆ ದೂರು ನೀಡಿದ್ದು, ಎಫ್‌ಐಆರ್ ದಾಖಲಾಗಿದೆ. ದೂರಿನಲ್ಲಿ, ಮಹಿಳೆಗೆ ಚಂದನ್ ಹಲವು ದಿನಗಳಿಂದ ಪರಿಚಯವಾಗಿದ್ದ. ಆತ ತನ್ನನ್ನು ದಕ್ಷಿಣ ಕೋಲ್ಕತ್ತಾದಲ್ಲಿರುವ ದುರ್ಗಾ ಪೂಜಾ ಸಮಿತಿಯ ಮುಖ್ಯಸ್ಥ ಎಂದು ಹೇಳಿಕೊಂಡಿದ್ದ. ಅಲ್ಲದೇ ಆತ ದೀಪ್‌ನನ್ನು ಪರಿಚಯ ಮಾಡಿಕೊಟ್ಟಿದ್ದ. ಮಹಿಳೆಯನ್ನೂ ಸಮಿತಿಯಲ್ಲಿ ಸೇರಿಸಿಕೊಳ್ಳುವುದಾಗಿ ಭರವಸೆ ನೀಡಿದ್ದು ಎಂದು ಉಲ್ಲೇಖಿಸಲಾಗಿದೆ. ಜೂ. 25 ರಂದು ದಕ್ಷಿಣ ಕಲ್ಕತ್ತಾ ಕಾನೂನು ಕಾಲೇಜು ಆವರಣದಲ್ಲಿ ಕಾನೂನು ವಿದ್ಯಾರ್ಥಿನಿಯ ಮೇಲೆ ಅತ್ಯಾಚಾರ ನಡೆದಿತ್ತು. ಈ ಸಂಬಂಧ ಕಾಲೇಜಿನ ಹಳೆಯ ವಿದ್ಯಾರ್ಥಿ ಮೋನೋಜಿತ್ ಮಿಶ್ರಾನನ್ನು ಬಂಧಿಸಲಾಗಿತ್ತು. ಇನ್ನೂ ಕಳೆದ ವರ್ಷ ಆರ್‌ಜಿಕರ್ ಆಸ್ಪತ್ರೆಯಲ್ಲಿ ಟ್ರೈನಿ ವೈದ್ಯೆಯ ಮೇಲೆ ಅತ್ಯಾಚಾರ ಎಸಗಿ ಕೊಲೆ ಮಾಡಲಾಗಿತ್ತು. ಈ ಪ್ರಕರಣದ ಆರೋಪಿಗೆ ಜೀವಾವಧಿ ಶಿಕ್ಷೆ ವಿಧಿಸಲಾಗಿದೆ. ಇತ್ತೀಚೆಗೆ ನಗರದಲ್ಲಿ ಹೆಚ್ಚಾಗಿರುವ ಅತ್ಯಾಚಾರ, ಅಪರಾಧ ಪ್ರಕರಣಗಳ ಬಗ್ಗೆ ಸಾರ್ವಜನಿಕರು ಆಕ್ರೋಶ ಹೊರಹಾಕಿದ್ದಾರೆ.

### ಪಂಜಾಬ್‌ಗೆ ಪ್ರಧಾನಿ ಮೋದಿ ಭೇಟಿ ವಿಶೇಷ ಪ್ಯಾಕೇಜ್ ಘೋಷಿಸುವ ಸಾಧ್ಯತೆ

**ಚಂಡೀಗಢ:** ಪ್ರಧಾನಿ ಮೋದಿ ಪ್ರವಾಹ ಪೀಡಿತ ಪಂಜಾಬ್‌ಗೆ ಭೇಟಿ ನೀಡಲಿದ್ದು, ಈ ವೇಳೆ ಪರಿಹಾರಕ್ಕಾಗಿ ವಿಶೇಷ ಪ್ಯಾಕೇಜ್ ಘೋಷಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ. ಕಳೆದ ಒಂದು ತಿಂಗಳ ಅವಧಿಯಲ್ಲಿ ನಿರಂತರ ಮಳೆಯಿಂದಾಗಿ ಪಂಜಾಬ್ ಸೇರಿದಂತೆ ಇತರ ಪ್ರದೇಶಗಳು ತೀವ್ರ ಹಾನಿಗೊಳಗಾಗಿವೆ. ಈ ಹಿನ್ನೆಲೆ ಪ್ರಧಾನಿ ನರೇಂದ್ರ ಮೋದಿ ಅವರು ಪಂಜಾಬ್‌ನ ಗುರುದಾಸ್ಪುರಕ್ಕೆ ಭೇಟಿ ನೀಡುತ್ತಿದ್ದು, ಪ್ರವಾಹ ಪೀಡಿತ ಪ್ರದೇಶಗಳ ಪರಿಶೀಲನೆ ನಡೆಸಲಿದ್ದಾರೆ. ಇದೇ ವೇಳೆ ರಕ್ಷಣಾ ಕಾರ್ಯಾಚರಣೆಯನ್ನು ವೀಕ್ಷಿಸಲಿದ್ದಾರೆ.

ಈ ಕುರಿತು ರಾಜ್ಯ ಬಿಜೆಪಿ ತನ್ನ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದೆ. ಗುರುದಾಸ್ಪುರ ಭೇಟಿ ವೇಳೆ ಮೋದಿಯವರು ಪ್ರವಾಹ ಪೀಡಿತರನ್ನು ನೇರವಾಗಿ ಭೇಟಿ ಮಾಡಿ, ಅವರ ಸಮಸ್ಯೆಗಳನ್ನು ಆಲಿಸಲಿದ್ದಾರೆ. ಜೊತೆಗೆ ಪರಿಹಾರಕ್ಕೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳಲಿದ್ದಾರೆ. ಈ ಮೂಲಕ ಕೇಂದ್ರ ಬಿಜೆಪಿ ಸರ್ಕಾರ ಯಾವಾಗಲೂ ಪಂಜಾಬ್ ಜನರೊಂದಿಗಿದೆ ಹಾಗೂ ಕಷ್ಟದಲ್ಲಿ ಸಹಾಯ ಮಾಡುತ್ತದೆಂದು ಸಾಬೀತುಪಡಿಸುತ್ತದೆ ಎಂದು ಬರೆದುಕೊಂಡಿದೆ.

ಮೂಲಗಳ ಪ್ರಕಾರ, ಕೇಂದ್ರ ಸರ್ಕಾರವು ಪಂಜಾಬ್ ರಾಜ್ಯಕ್ಕೆ ವಿಶೇಷ ಪರಿಹಾರ ಪ್ಯಾಕೇಜ್‌ನ್ನು ಘೋಷಿಸುವ ಸಾಧ್ಯತೆಯಿದೆ ಎನ್ನಲಾಗಿದೆ. ಧಾರಾಕಾರ ಮಳೆಯಿಂದಾಗಿ ಉಂಟಾದ ಪ್ರವಾಹವು ಪಂಜಾಬ್‌ನ 14 ಜಿಲ್ಲೆಗಳಲ್ಲಿ ತೀವ್ರಹಾನಿಯನ್ನುಂಟು ಮಾಡಿದೆ. ಈವರೆಗೂ 46 ಜನರು ಸಾವನ್ನಪ್ಪಿದ್ದು, ಸುಮಾರು 2,000 ಗ್ರಾಮಗಳು ಮುಳುಗಡೆಯಾಗಿವೆ. ಇನ್ನೂ ಜಮ್ಮು ಮತ್ತು ಕಾಶ್ಮೀರ, ಹಿಮಾಚಲ ಪ್ರದೇಶ, ಪಂಜಾಬ್, ಉತ್ತರಾಖಂಡ ರಾಜ್ಯದಲ್ಲಿ ನಿರಂತರ ಮಳೆಯಿಂದ ಉಂಟಾದ ಹಠಾತ್ ಪ್ರವಾಹ. ಭೂಕುಸಿತದಿಂದಾಗಿ ಅಪಾರ ಪ್ರಮಾಣದ ಹಾನಿಯುಂಟಾಗಿದೆ.

### ಗಣೇಶ ವಿಸರ್ಜನೆ ವೇಳೆ ಅವಘಡ; 4 ಸಾವು, 13 ಮಂದಿ ನಾಪತ್ತೆ

**ಮುಂಬೈ:** ಮಹಾರಾಷ್ಟ್ರದ ವಿವಿಧ ಜಿಲ್ಲೆಗಳಲ್ಲಿ ಗಣೇಶ ಮೂರ್ತಿ ವಿಸರ್ಜನೆ ವೇಳೆ ಕನಿಷ್ಠ ನಾಲ್ವರು ಜನರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದು, 13 ಮಂದಿ ನಾಪತ್ತೆಯಾಗಿದ್ದಾರೆ.

ಪುಣೆ ಜಿಲ್ಲೆಯ ಚಕನ್ ಪ್ರದೇಶದಲ್ಲಿ, ಪ್ರತ್ಯೇಕ ಘಟನೆಗಳಲ್ಲಿ ನಾಲ್ವರು ಜನರು ಕೊಚ್ಚಿ ಹೋಗಿದ್ದಾರೆ. ವಾಕಿ ಖುರ್ದ್‌ನಲ್ಲಿ ಭಾಮಾ ನದಿಯಲ್ಲಿ ಇಬ್ಬರು ಪುರುಷರು ಮತ್ತು ಶೆಲ್ ಪಿಂಪಾಲ್‌ಗಾಂವ್‌ನಲ್ಲಿ ಮತ್ತೊಬ್ಬರು ಕೊಚ್ಚಿ ಹೋಗಿದ್ದಾರೆ. ಪುಣೆ ಗ್ರಾಮೀಣ ಪ್ರದೇಶದ ಬಿರ್ವಾಡಿಯಲ್ಲಿ ಮತ್ತೊಬ್ಬ ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾನೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಇಬ್ಬರು ಮೃತದೇಹಗಳನ್ನು ಹೊರತೆಗೆಯಲಾಗಿದೆ. ಉಳಿದ ಇಬ್ಬರಿಗಾಗಿ ಶೋಧ ಕಾರ್ಯಾಚರಣೆ ಮುಂದುವರೆದಿದೆ. ನಾಂದೇಡ್ ಜಿಲ್ಲೆಯ ಗಡೇಗಾಂವ್‌ನಲ್ಲಿ ನದಿಯಲ್ಲಿ ಮೂವರು ಕೊಚ್ಚಿ ಹೋಗಿದ್ದಾರೆ.

ಅವರ ಪೈಕಿ ಒಬ್ಬನನ್ನು ರಕ್ಷಿಸಲಾಗಿದೆ. ಇನ್ನಿಬ್ಬರಿಗಾಗಿ ಹುಡುಕಾಟ ನಡೆಯುತ್ತಿದೆ. ನಾಶಿಕ್, ಜಲಗಾಂವ್, ಥಾಣೆ ಮತ್ತು ಅಮರಾವತಿಯಲ್ಲೂ ಇದೇ ರೀತಿಯ ಘಟನೆಗಳು ವರದಿಯಾಗಿವೆ. ನಾಶಿಕ್‌ನಲ್ಲಿ, ಮುಳುಗಿಸುವ ಪ್ರಕ್ರಿಯೆಯಲ್ಲಿ ನಾಲ್ವರು ಮುಳುಗಿ ಸಾವನ್ನಪ್ಪಿದ್ದಾರೆ. ಸಿನ್ನಾರ್‌ನಲ್ಲಿ ಒಂದು ಶವ ಪತ್ತೆಯಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಜಲಗಾಂವ್‌ನಲ್ಲಿ ಪ್ರತ್ಯೇಕ ಘಟನೆಗಳಲ್ಲಿ ಮೂವರು ಜನರು ಕೊಚ್ಚಿ ಹೋಗಿದ್ದು, ಅವರ ಪತ್ತೆಗಾಗಿ ಕಾರ್ಯಾಚರಣೆ ಮುಂದುವರಿದಿದೆ. ಥಾಣೆ ಜಿಲ್ಲೆಯಲ್ಲಿ ಮೂವರು ಜನರು ಕೊಚ್ಚಿ ಹೋಗಿದ್ದು, ಇದುವರೆಗೆ ಒಂದು ಮೃತದೇಹ ಪತ್ತೆಯಾಗಿದೆ. ಅಮರಾವತಿಯಲ್ಲಿ ಗಣೇಶ ಮೂರ್ತಿ ಮುಳುಗಿಸುವ ಸಮಯದಲ್ಲಿ ಒಬ್ಬ ವ್ಯಕ್ತಿ ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.




# ನನ್ನನ್ನೇಕೆ ಕುಳ್ಳಿ ಎಂದೆ

ಸುಕೃತಾ ವೈಷ್ಣವಿ ಸಖತ್ ಫನ್

'ಅಗ್ನಿಸಾಕ್ಷಿ' ಧಾರಾವಾಹಿ ಬಗ್ಗೆ ಯಾರಿಗೆತಾನೇ ಗೊತ್ತಿಲ್ಲ ಹೇಳಿ. ಹಲವು ವರ್ಷಗಳ ಕಾಲ ಈ ಧಾರಾವಾಹಿ ಪ್ರಸಾರ ಕಂಡಿತು. ಈ ಧಾರಾವಾಹಿಯಲ್ಲಿ ವೈಷ್ಣವಿ ಗೌಡ, ಸುಕೃತಾ ನಾಗ್, ವಿಜಯ್ ಸೂರ್ಯ, ರಾಜೇಶ್ ಧ್ರುವ, ಪ್ರಿಯಾಂಕಾ, ಶೋಭಾ ಶೆಟ್ಟಿ, ಇಶಿತಾ ವರ್ಷಾ, ಮುಖ್ಯಮಂತ್ರಿ ಚಂದ್ರು ಮೊದಲಾದವರು ಧಾರಾವಾಹಿಯಲ್ಲಿ ನಟಿಸಿದ್ದರು. ಈ ಧಾರಾವಾಹಿ ಎಲ್ಲರ ಮೆಚ್ಚುಗೆ ಪಡೆದಿತ್ತು. ಈ ಧಾರಾವಾಹಿ ತಂಡದವರ ರೀ-ಯೂನಿಯ್ ನಡೆದಿದೆ. ಈ ಸಂದರ್ಭದ ವಿಡಿಯೋನ ತಂಡವು ಹಂಚಿಕೊಂಡಿದೆ ಎಂಬುದು ವಿಶೇಷ. 'ಅಗ್ನಿಸಾಕ್ಷಿ' ಧಾರಾವಾಹಿಯು ಪ್ರಸಾರ ಆರಂಭಿಸಿದ್ದು 2013ರ ಡಿಸೆಂಬರ್ 2ರಂದು. ಈ ಧಾರಾವಾಹಿ 2020ರ ಜನವರಿ 3ರಂದು ತನ್ನ ಕೊನೆಯ ಎಪಿಸೋಡ್‌ನ ಪ್ರಸಾರ ಮಾಡಿತು. ಕಲರ್ಸ್ ಕನ್ನಡದಲ್ಲಿ ಈ ಧಾರಾವಾಹಿ ಪ್ರಸಾರ ಕಂಡಿತು ಮತ್ತು ಮೈಸೂರು ಮಂಜು ಅವರು ಇದನ್ನು ನಿರ್ದೇಶನ ಮಾಡಿದರು. ವೈಷ್ಣವಿ ಗೌಡ ಅವರು ಸನ್ನಿಧಿ ಪಾತ್ರದಲ್ಲಿ ಕಾಣಿಸಿಕೊಂಡರೆ, ವಿಜಯ್ ಸೂರ್ಯ ಅವರು ಸಿದ್ಧಾರ್ಥ್ ಪಾತ್ರದಲ್ಲಿ ನಟಿಸಿದರು. ಈಗ ಧಾರಾವಾಹಿ ತಂಡದವರು ಒಂದು ಕಡೆ ಸೇರಿದ್ದಾರೆ.

ಈ ಧಾರಾವಾಹಿ ಪೂರ್ಣಗೊಂಡು ಐದು ವರ್ಷಗಳು ಕಳೆದಿರುವುದರಿಂದ ಎಲ್ಲರ ಬದುಕು ಭಿನ್ನ ಭಿನ್ನವಾಗಿವೆ. ಅನೇಕರಿಗೆ ವಿವಾಹ ಆಗಿದ್ದು, ಎಲ್ಲರೂ ತಮ್ಮದೇ ಲೈಫ್ ಬ್ಯುಸಿ ಇದ್ದಾರೆ. ಆದರೆ ಈಗ ಸಮಯ ಮಾಡಿಕೊಂಡು ಮತ್ತೊಮ್ಮೆ ಸೇರಿದ್ದಾರೆ. ಈ ವಿಡಿಯೋನ ವೈಷ್ಣವಿ ಗೌಡ ಮೊದಲಾದವರು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಇದಕ್ಕೆ ಫ್ಯಾನ್ಸ್ ಖುಷಿಯಿಂದ ಕಮೆಂಟ್ ಮಾಡುತ್ತಾ ಇದ್ದಾರೆ. ಕುಳ್ಳಿ ಎಂದು ಕರೆದಿದ್ದಕ್ಕೆ ಸುಕೃತಾ ಫನ್ ಆಗಿ 'ನನ್ನನ್ನೇಕೆ ಕುಳ್ಳಿ' ಎಂದೆ ಎಂದು ಪ್ರಶ್ನೆ ಮಾಡಿದ್ದಾರೆ. ವೈಷ್ಣವಿ ಗೌಡ ಅವರಿಗೆ ವಿವಾಹ ಆಗಿದೆ. ಅವರು ಅನುಕೂಲ್ ಮಿಶ್ರಾ ಅವರನ್ನು ವಿವಾಹ ಆಗಿದ್ದಾರೆ. ಅದೇ ರೀತಿ ಈ ಧಾರಾವಾಹಿಯಲ್ಲಿ ಪಾತ್ರ ಮಾಡಿದ್ದ ಇಶಿತಾ ವರ್ಷಾಗೂ ಮದುವೆ ಆಗಿದೆ. ಎಲ್ಲರೂ ಖುಷಿ, ಖುಷಿಯಿಂದ ರೀಯೂನಿಯನ್‌ನಲ್ಲಿ ಭಾಗಿ ಆಗಿದ್ದಾರೆ. ವೈಷ್ಣವಿ ಗೌಡ ಅವರು ಕೊನೆಯದಾಗಿ ಕಾಣಿಸಿಕೊಂಡಿದ್ದು ಜೀ ಕನ್ನಡದ 'ಸೀತಾ ರಾಮ' ಧಾರಾವಾಹಿಯಲ್ಲಿ. ಈ ಧಾರಾವಾಹಿ ಎಲ್ಲರ ಮೆಚ್ಚುಗೆ ಪಡೆಯಿತು. ಆ ಬಳಿಕ ವೈಷ್ಣವಿ ಗೌಡ ವಿವಾಹ ಆದರು.





# ಕಿಚ್ಚ ಸುದೀಪ್ ಸ್ಟೈಲ್‌ನಲ್ಲಿ ಬಿಗ್ ಬಾಸ್ ನಿರೂಪಣೆ

ಬಿಗ್ ಬಾಸ್ ಕಾಲ ಆರಂಭ ಆಗಿದೆ. ಹಿಂದಿಯಲ್ಲಿ ಹೊಸ ಸೀಸನ್ ಶುರುವಾಗಿದೆ. ತೆಲುಗಿನಲ್ಲಿ ಸೆಪ್ಟೆಂಬರ್ 7ರಿಂದ ಬಿಗ್ ಬಾಸ್ 9ನೇ ಸೀಸನ್ ಪ್ರಸಾರ ಆಗಲಿದೆ. ಕಿಚ್ಚ ಸುದೀಪ್ ಅವರು ಸೆಪ್ಟೆಂಬರ್ 28ರಿಂದ 'ಬಿಗ್ ಬಾಸ್ ಕನ್ನಡ ಸೀಸನ್ 12' ನಡೆಸಿಕೊಡಲಿದ್ದಾರೆ.

ಎಲ್ಲಾ ಭಾಷೆಗಳಲ್ಲೂ ಬಿಗ್ ಬಾಸ್ ರಿಯಾಲಿಟಿ ಶೋಗೆ ಜನಪ್ರಿಯತೆ ಇದೆ. ಈ ಬಾರಿ ಕೂಡ ತೆಲುಗಿನಲ್ಲಿ ನಾಗಾರ್ಜುನ ಅವರು ಬಿಗ್ ಬಾಸ್ ನಿರೂಪಣೆ ಮಾಡುತ್ತಿದ್ದಾರೆ. ಟ್ವಿಸ್ಟ್ ಏನೆಂದರೆ ಅವರು ತಮ್ಮ ನಿರೂಪಣಾ ಶೈಲಿಯಲ್ಲಿ ಕೊಂಚ ಬದಲಾವಣೆ ಮಾಡಿಕೊಳ್ಳಲಿದ್ದಾರೆ. ಸುದೀಪ್ ರೀತಿ ಖಡಕ್ ಆಗಿ ಶೋ ನಡೆಸಿಕೊಡಲು ಅವರು ನಿರ್ಧರಿಸಿದ್ದಾರೆ ಎನ್ನಲಾಗಿದೆ.

ಸುದೀಪ್ ಅವರು ಬಿಗ್ ಬಾಸ್ ಕಾರ್ಯಕ್ರಮವನ್ನು ನಡೆಸಿಕೊಡುವ ರೀತಿಗೆ ವೀಕ್ಷಕರು ಫಿದಾ ಆಗಿದ್ದಾರೆ. ಯಾರೇ ಬಂದರೂ ಸುದೀಪ್ ಅವರು ಬೇಧ-ಭಾವ ಮಾಡುವವರಲ್ಲ, ಎಲ್ಲರನ್ನೂ ಸಮಾನವಾಗಿ ಕಾಣುತ್ತಾರೆ. ಸ್ಪರ್ಧಿಗಳನ್ನು ತಮ್ಮ ಮನೆಯ ಸದಸ್ಯರಂತೆಯೇ ಪ್ರೀತಿಸುತ್ತಾರೆ. ಆದರೆ ಅದೇ ಸ್ಪರ್ಧಿಗಳು ತಪ್ಪು ಮಾಡಿದಾಗ ಮುಲಾಜಿಲ್ಲದೇ ಕ್ಲಾಸ್ ತೆಗೆದುಕೊಳ್ಳುತ್ತಾರೆ. ಕಟು ಮಾತುಗಳಿಂದ ಟೀಕಿಸುತ್ತಾರೆ.

ಈ ಹಿಂದಿನ ಸೀಸನ್‌ಗಳಲ್ಲಿ ನಾಗಾರ್ಜುನ ಅವರು ಸ್ಪರ್ಧಿಗಳ ಬಗ್ಗೆ ಕೊಂಚ ಮೃದು ಧೋರಣೆ ಹೊಂದಿದ್ದರು. ಸ್ಪರ್ಧಿಗಳು ನಿಯಮ ಮುರಿದಾಗ ಅಷ್ಟೇನೂ ಗಟ್ಟಿ ಧ್ವನಿಯಲ್ಲಿ ಎಚ್ಚರಿಕೆ ನೀಡಿರಲಿಲ್ಲ. ಇದರಿಂದ ತೆಲುಗು ಬಿಗ್ ಬಾಸ್ ಮನೆಯೊಳಗೆ ಅಂಥದ್ದೇನೂ ಡ್ರಾಮಾ ನಡೆಯಲಿಲ್ಲ. ಈ ಬಾರಿ ಆ ರೀತಿ ಆಗದಂತೆ ನೋಡಿಕೊಳ್ಳಲು ಅವರು ತೀರ್ಮಾನಿಸಿದ್ದಾರೆ. ಕಿಚ್ಚ ಸುದೀಪ್ ರೀತಿಯೇ ನಾಗಾರ್ಜುನ ಕೂಡ ಈ ಬಾರಿ ಕಟ್ಟುನಿಟ್ಟಾಗಿ ನಡೆದುಕೊಳ್ಳಲಿದ್ದಾರೆ. ಒಂದುವೇಳೆ ಸ್ಪರ್ಧಿಗಳಿಂದ ಮನೆಯ ನಿಯಮಗಳು ಉಲ್ಲಂಘನೆ ಆದರೆ ಖಡಕ್ ಆಗಿ ಕ್ಲಾಸ್ ತೆಗೆದುಕೊಳ್ಳಲಿದ್ದಾರೆ. ಆ ಮೂಲಕ ಶೋನಲ್ಲಿ ಹೆಚ್ಚಿನ ಕುತೂಹಲ ಇರುವಂತೆ ನೋಡಿಕೊಳ್ಳಲಿದ್ದಾರೆ ಎಂದು ತೆಲುಗಿನ ಮಾಧ್ಯಮಗಳು ವರದಿ ಮಾಡಿವೆ.


# ಲೂಸಿಯಾ ಸಿನಿಮಾ ತೆರೆಕಂಡು ಕಳೆಯಿತು 12 ವರ್ಷ

ಫೋಟೋಗಳಿಂದ ನೆನಪು ಮೆಲುಕು


ಸತೀಶ್ ನೀನಾಸಂ ನಟನೆಯ 'ಲೂಸಿಯಾ' ಸಿನಿಮಾ ತುಂಬ ಸ್ಪೆಷಲ್ ಪ್ರಯತ್ನ. ಆ ಚಿತ್ರ ಬಿಡುಗಡೆಯಾಗಿ 12 ವರ್ಷಗಳು ಕಳೆದಿವೆ. ಅಂದಿನ ನೆನಪುಗಳನ್ನು ಫೋಟೋ ಮೂಲಕ ಚಿತ್ರತಂಡ ಮೆಲುಕು ಹಾಕಿದೆ. ಪವನ್ ಕುಮಾರ್ ಅವರು 'ಲೂಸಿಯಾ' ಚಿತ್ರಕ್ಕೆ ನಿರ್ದೇಶನ ಮಾಡಿದರು. ಈ ಚಿತ್ರದ ಮೂಲಕ ಅವರಿಗೆ ಬಹಳ ಜನಪ್ರಿಯತೆ ಸಿಕ್ಕಿತು. ಇಂದಿಗೂ ಪ್ರೇಕ್ಷಕರ ಫೇವರಿಟ್ ಸಿನಿಮಾಗಳ ಪಟ್ಟಿಯಲ್ಲಿ 'ಲೂಸಿಯಾ' ಸಿನಿಮಾ ಇದೆ. ಶ್ರುತಿ ಹರಿಹರನ್ ಅವರು 'ಲೂಸಿಯಾ' ಚಿತ್ರದಲ್ಲಿ ನಾಯಕಿಯಾಗಿ ಅಭಿನಯಿಸಿದರು. ಇದು ಅವರು ನಟಿಸಿದ ಮೊದಲ ಕನ್ನಡ ಸಿನಿಮಾ. ಬಳಿಕ ಅವರು ಸ್ಟಾರ್ ನಟಿಯಾಗಿ ಚಿತ್ರರಂಗದಲ್ಲಿ ಗುರುತಿಸಿಕೊಂಡರು. 'ಲೂಸಿಯಾ' ಸಿನಿಮಾವನ್ನು ಕ್ರೌಡ್ ಫಂಡಿಂಗ್ ಮೂಲಕ ನಿರ್ಮಾಣ ಮಾಡಲಾಯಿತು.

ಪೂರ್ಣಚಂದ್ರ ತೇಜಸ್ವಿ ಅವರು ಸಂಗೀತ ನೀಡಿದ ಹಾಡುಗಳು ಜನರಿಗೆ ಬಹಳ ಇಷ್ಟವಾದವು. ಜನ ಈಗಲೂ ಗುನುಗುತ್ತಿದ್ದಾರೆ.

ಪರಭಾಷೆ ಮಂದಿ ಕೂಡ 'ಲೂಸಿಯಾ' ಸಿನಿಮಾವನ್ನು ಹೊಗಳುತ್ತಾರೆ. 12 ವರ್ಷ ಕಳೆದಿದ್ದರೂ ಕೂಡ ಜನರು ಈ ಸಿನಿಮಾದ ಬಗ್ಗೆ ಮಾತನಾಡುತ್ತಾರೆ. ಡಿಫರೆಂಟ್ ಸಿನಿಮಾಗಳ ಪಟ್ಟಿಯಲ್ಲಿ ಈ ಸಿನಿಮಾಗೆ ಸ್ಥಾನವಿದೆ.








# 'ಸು ಫ್ರಮ್ ಸೋ' ಒಟಿಟಿ ರಿಲೀಸ್: ಸೆಪ್ಟೆಂಬರ್ 9ರಿಂದ ಜಿಯೋ ಹಾಟ್‌ಸ್ಟಾರ್ ಮೂಲಕ ಪ್ರಸಾರ

ಚಿತ್ರಮಂದಿರಗಳಲ್ಲಿ 'ಸು ಫ್ರಮ್ ಸೋ' ಸಿನಿಮಾ ಅಬ್ಬರಿಸಿದೆ. ಈಗಲೂ ಕೂಡ ಈ ಅನೇಕ ಕಡೆಗಳಲ್ಲಿ ಪ್ರದರ್ಶನ ಕಾಣುತ್ತಿದೆ. 44 ದಿನ ಕಳೆದರೂ ಕೂಡ ಹೌಸ್‌ಫುಲ್ ಆಗುತ್ತಿದೆ. ಸದ್ಯದಲ್ಲೇ ಈ ಸಿನಿಮಾ 50 ದಿನಗಳನ್ನು ಯಶಸ್ವಿಯಾಗಿ ಪೂರೈಸುತ್ತಿದೆ. ಅಷ್ಟರಲ್ಲಾಗಲೇ ಒಟಿಟಿ ಅಂಗಳಕ್ಕೆ ಕಾಲಿಡುತ್ತಿದೆ. ಹೌದು, 'ಸು ಫ್ರಮ್ ಸೋ' ಒಟಿಟಿ ಬಿಡುಗಡೆ ಬಗ್ಗೆ ಅಧಿಕೃತ ಮಾಹಿತಿ ಸಿಕ್ಕಿದೆ. ಜೆಪಿ ತುಮಿನಾಡು, ಶನೀಲ್ ಗೌತಮ್, ಸಂಧ್ಯಾ ಅರಕೆರೆ, ರಾಜ್ ಬಿ. ಶೆಟ್ಟಿ ಮುಂತಾದವರು ನಟಿಸಿರುವ ಈ ಸಿನಿಮಾ ಈಗ ಒಟಿಟಿಗೆ ಬರುತ್ತಿದೆ. 'ಜಿಯೋ ಹಾಟ್‌ಸ್ಟಾರ್' ಮೂಲಕ ಸೆಪ್ಟೆಂಬರ್ 9ರಿಂದ ಪ್ರಸಾರ ಆರಂಭಿಸಲಿದೆ.

ಜೆ.ಪಿ. ತುಮಿನಾಡು ಅವರು 'ಸು ಫ್ರಮ್ ಸೋ' ಸಿನಿಮಾಗೆ ನಿರ್ದೇಶನ ಮಾಡಿದ್ದಾರೆ. ಇದು ಅವರ ಮೊದಲ ನಿರ್ದೇಶನದ ಸಿನಿಮಾ. ಚೊಚ್ಚಲ ಪ್ರಯತ್ನದಲ್ಲೇ ಅವರಿಗೆ ದೊಡ್ಡ ಗೆಲುವು ಸಿಕ್ಕಿದೆ. ದೊಡ್ಡ ಪರದೆಯಲ್ಲಿ ನೋಡಿ ಎಂಜಾಯ್ ಮಾಡಿದ ಬಳಿಕ ಪ್ರೇಕ್ಷಕರು ಒಟಿಟಿಯಲ್ಲಿ ಮತ್ತೊಮ್ಮೆ ನೋಡಲು ಕಾದಿದ್ದಾರೆ. ಒಳ್ಳೆಯ ಮೊತ್ತಕ್ಕೆ ಒಟಿಟಿ ಪ್ರಸಾರ ಹಕ್ಕುಗಳು ಸೇಲ್ ಆಗಿವೆ. 'ಸು ಫ್ರಮ್ ಸೋ' ಸಿನಿಮಾದ ಒಟಿಟಿ ರಿಲೀಸ್ ಬಗ್ಗೆ ಮೊದಲಿನಿಂದಲೂ ಅಂತೆ-ಕಂತೆಗಳು ಕೇಳಿಬರುತ್ತಿತ್ತು. ಆದರೆ ಅದು ಖಚಿತವಾಗಲಿಲ್ಲ. ಈಗ 'ಜಿಯೋ ಹಾಟ್‌ಸ್ಟಾರ್' ಮೂಲಕವೇ ಅಧಿಕೃತವಾಗಿ ತಿಳಿಸಲಾಗಿದೆ. 'ಜಿಯೋ ಹಾಟ್‌ಸ್ಟಾರ್' ಆಪ್‌ನ ಅಪ್‌ಕಮಿಂಗ್ ಸಿನಿಮಾಗಳ ಪಟ್ಟಿಯಲ್ಲಿ 'ಸು ಫ್ರಮ್ ಸೋ' ಕೂಡ ಇದೆ. ಸೆಪ್ಟೆಂಬರ್ 9ರಿಂದ ಎಂದು ದಿನಾಂಕವನ್ನು ಕೂಡ ತಿಳಿಸಲಾಗಿದೆ.

ಚೊಚ್ಚಲ ಪ್ರಯತ್ನದಲ್ಲೇ ದೊಡ್ಡ ಗೆಲುವು



# ಗೌರಿ ಅಭಿನಯಕ್ಕೆ ಸೈಮಾ ಪ್ರಶಸ್ತಿ

ನಿರ್ದೇಶಕ ಇಂದ್ರಜಿತ್ ಲಂಕೇಶ್ ಅವರ ಪುತ್ರ ಸಮರ್ಜಿತ್ ಲಂಕೇಶ್ ಅವರು 'ಸೈಮಾ' ಪ್ರಶಸ್ತಿ ಪಡೆದುಕೊಂಡಿದ್ದಾರೆ. 'ಗೌರಿ' ಸಿನಿಮಾದಲ್ಲಿ ಹೀರೋ ಆಗಿ ನಟಿಸಿದ ಅವರಿಗೆ ಈ ಅವಾರ್ಡ್ ನೀಡಲಾಗಿದೆ. 'ಗೌರಿ' ಸಿನಿಮಾದ ಮೂಲಕ ಸಮರ್ಜಿತ್ ಲಂಕೇಶ್ ಅವರು ನಾಯಕ ನಟನಾಗಿ ಚಿತ್ರರಂಗಕ್ಕೆ ಕಾಲಿಟ್ಟರು. ಮೊದಲ ಸಿನಿಮಾದಲ್ಲಿಯೇ ಅವರು ಪ್ರತಿಷ್ಠಿತ ಪ್ರಶಸ್ತಿಗಳನ್ನು ಬಾಚಿಕೊಂಡು ಗಮನ ಸೆಳೆದಿದ್ದಾರೆ.

ದುಬೈನಲ್ಲಿ 13ನೇ ದಕ್ಷಿಣ ಭಾರತ ಅಂತಾರಾಷ್ಟ್ರೀಯ ಸಿನಿಮಾ ಪ್ರಶಸ್ತಿ ಸಮಾರಂಭ ನಡೆದಿದೆ. ಚಿತ್ರರಂಗ ಹಲವು ಸೆಲೆಬ್ರಿಟಿಗಳು ಇದರಲ್ಲಿ ಭಾಗಿ ಆಗಿದ್ದಾರೆ. ಸಮರ್ಜಿತ್ ಅವರು ಅವಾರ್ಡ್ ಹಿಡಿದು ಸಂಭ್ರಮಿಸಿದ್ದಾರೆ.

ತಂದೆ ನಿರ್ದೇಶಕನಾಗಿದ್ದರೂ ಕೂಡ ಸಮರ್ಜಿತ್ ಅವರು ಸುಮ್ಮನೇ ಚಿತ್ರರಂಗಕ್ಕೆ ಬಂದಿಲ್ಲ. ಸಾಕಷ್ಟು ತಯಾರಿ ಮಾಡಿಕೊಂಡು ಅವರು ಬಣ್ಣದ ಲೋಕಕ್ಕೆ ಕಾಲಿಟ್ಟಿದ್ದಾರೆ. ಅದರ ಫಲವಾಗಿ ಪ್ರಶಸ್ತಿ ಅವರ ಕೈ ಸೇರಿದೆ. 'ಎಲ್ಲರಿಗೂ ಧನ್ಯವಾದಗಳು. ಬೆಂಬಲ ನೀಡಿದ ನಿಮಗೆಲ್ಲ ನಾನು ಋಣಿಯಾಗಿದ್ದೇನೆ. ಗೌರಿ ಸಿನಿಮಾ ಆಗಲು ಕಾರಣರಾದ ಎಲ್ಲರಿಗೂ ಧನ್ಯವಾದ. ತಂದೆ-ತಾಯಿಗೆ ಧನ್ಯವಾದಗಳು' ಎಂದು ಸಮರ್ಜಿತ್ ಲಂಕೇಶ್ ಹೇಳಿದ್ದಾರೆ.

# ಏಷ್ಯಾಕಪ್‌ಗೆ ಟೀಮ್ ಇಂಡಿಯಾದ 11 ಆಟಗಾರರು ಅಲಭ್ಯ..!




ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ

ಏಷ್ಯಾಕಪ್ ಟೂರ್ನಿ ಆರಂಭಕ್ಕೆ ಇನ್ನು ಕೌಂಟ್ ಡೌನ್ ಶುರುವಾಗಿದೆ. ಸೆಪ್ಟೆಂಬರ್ 9 ರಿಂದ ಆರಂಭವಾಗಲಿರುವ ಈ ಟೂರ್ನಿಯಲ್ಲಿ ಟೀಮ್ ಇಂಡಿಯಾದ ಪ್ರಮುಖ ಆಟಗಾರರು ಕಾಣಿಸಿಕೊಳ್ಳುವುದಿಲ್ಲ ಎಂಬುದು ವಿಶೇಷ. ಅಂದರೆ ಈ ಹಿಂದೆ ಟಿ20 ವಿಶ್ವಕಪ್ ತಂಡದಲ್ಲಿ ಕಾಣಿಸಿಕೊಂಡಿದ್ದ ಕೆಲ ಆಟಗಾರರಿಗೆ ಈ ಬಾರಿಯ ತಂಡದಲ್ಲಿ ಸ್ಥಾನ ಸಿಕ್ಕಿಲ್ಲ. ಹಾಗೆಯೇ ಇವರಲ್ಲಿ ಕೆಲವರು ಈಗಾಗಲೇ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿದ್ದಾರೆ. ಅದರಂತೆ ಈ ಬಾರಿಯ ಏಷ್ಯಾಕಪ್‌ನಿಂದ ಹೊರಗುಳಿದಿರುವ ಟೀಮ್ ಇಂಡಿಯಾದ 11 ಆಟಗಾರರ ಪಟ್ಟಿ ಈ ಕೆಳಗಿನಂತಿದೆ...

**ರೋಹಿತ್ ಶರ್ಮಾ:** 2024ರ ಟಿ20 ವಿಶ್ವಕಪ್‌ನಲ್ಲಿ ಭಾರತ ತಂಡವನ್ನು ಮುನ್ನಡೆಸಿದ್ದು ರೋಹಿತ್ ಶರ್ಮಾ. ಆದರೆ ವಿಶ್ವಕಪ್‌ನಲ್ಲಿ ಟೀಮ್ ಇಂಡಿಯಾ ಚಾಂಪಿಯನ್ ಪಟ್ಟ ಅಲಂಕರಿಸಿದ ಬೆನ್ನಲ್ಲೇ ಹಿಟ್‌ಮ್ಯಾನ್ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿದ್ದರು. ಹೀಗಾಗಿ ಈ ಬಾರಿಯ ಏಷ್ಯಾಕಪ್ ತಂಡದ ಆಯ್ಕೆಗೆ ರೋಹಿತ್ ಶರ್ಮಾ ಅವರನ್ನು ಪರಿಗಣಿಸಲಾಗಿಲ್ಲ.

**ವಿರಾಟ್ ಕೊಹ್ಲಿ:** ಟಿ20 ವಿಶ್ವಕಪ್ 2024 ರಲ್ಲಿ ಫೈನಲ್ ಪಂದ್ಯದ ಬೆನ್ನಲ್ಲೇ ವಿರಾಟ್ ಕೊಹ್ಲಿ ಕೂಡ ಚುಟುಕು ಕ್ರಿಕೆಟ್‌ನಿಂದ ನಿವೃತ್ತಿ ಘೋಷಿಸಿದ್ದರು. ಇತ್ತ ಈ ಬಾರಿ ಏಷ್ಯಾಕಪ್ ನಡೆಯುವುದು ಟಿ20 ಸ್ವರೂಪದಲ್ಲಿ. ಹೀಗಾಗಿ ಮುಂಬರುವ ಏಷ್ಯಾಕಪ್ ಟೂರ್ನಿಯಲ್ಲಿ ಕಿಂಗ್ ಕೊಹ್ಲಿ ಕಾಣಿಸಿಕೊಳ್ಳುವುದಿಲ್ಲ.

**ರವೀಂದ್ರ ಜಡೇಜಾ:** ಟಿ20 ವಿಶ್ವಕಪ್ ಗೆಲುವಿನ ಬೆನ್ನಲ್ಲೇ ನಿವೃತ್ತಿ ಘೋಷಿಸಿದ ಮೂರನೇ ಆಟಗಾರ ರವೀಂದ್ರ ಜಡೇಜಾ. ಚುಟುಕು ಕ್ರಿಕೆಟ್‌ಗೆ ಗುಡ್ ಬೈ ಹೇಳಿರುವ ಜಡೇಜಾ ಇದೀಗ ಏಕದಿನ ಹಾಗೂ ಟೆಸ್ಟ್ ಕ್ರಿಕೆಟ್‌ನತ್ತ ಫೋಕಸ್ ಮಾಡಿದ್ದಾರೆ.

**ಯಜ್ವೇಂದ್ರ ಚಹಲ್:** 2024ರ ಟಿ20 ವಿಶ್ವಕಪ್‌ನಲ್ಲಿ ಯಜ್ವೇಂದ್ರ ಚಹಲ್ ಸ್ಪಿನ್ನರ್ ಆಗಿ ಸ್ಥಾನ ಪಡೆದಿದ್ದರು. ಇದಾಗ್ಯೂ ಅವರಿಗೆ ಒಂದೇ ಒಂದು ಪಂದ್ಯದಲ್ಲಿ ಕಣಕ್ಕಿಳಿಯಲು ಅವಕಾಶ ಸಿಕ್ಕಿರಲಿಲ್ಲ. ಅಲ್ಲದೆ 2023ರ ಬಳಿಕ ಚಹಲ್ ಭಾರತದ ಪರ ಯಾವುದೇ ಟಿ20 ಪಂದ್ಯವಾಡಿಲ್ಲ. ಇದೀಗ ಏಷ್ಯಾಕಪ್ ತಂಡದಲ್ಲೂ ಸ್ಥಾನ ಪಡೆಯುವಲ್ಲಿ ವಿಫಲರಾಗಿದ್ದಾರೆ.

**ಮೊಹಮ್ಮದ್ ಶಮಿ:** ಚಾಂಪಿಯನ್ಸ್ ಟ್ರೋಫಿ ಟೂರ್ನಿಯಲ್ಲಿ ಟೀಮ್ ಇಂಡಿಯಾ ಪರ ಕಣಕ್ಕಿಳಿದಿದ್ದ ಮೊಹಮ್ಮದ್ ಶಮಿಗೆ ಏಷ್ಯಾಕಪ್ ತಂಡದಲ್ಲಿ ಸ್ಥಾನ ನೀಡಲಾಗಿಲ್ಲ. ಇದಕ್ಕೂ ಮುನ್ನ ನಡೆದ ಇಂಗ್ಲೆಂಡ್ ವಿರುದ್ಧದ ಟಿ20 ಸರಣಿಯಲ್ಲಿ ಶಮಿ ಕಣಕ್ಕಿಳಿದಿದ್ದರು. ಆದರೆ ಈ ಬಾರಿಯ ಟಿ20 ತಂಡದಲ್ಲಿ ಸ್ಥಾನ ಪಡೆಯುವಲ್ಲಿ ವಿಫಲರಾಗಿದ್ದಾರೆ.

**ರಿಷಭ್ ಪಂತ್:** ಟಿ20 ವಿಶ್ವಕಪ್ 2024 ರಲ್ಲಿ ಟೀಮ್ ಇಂಡಿಯಾ ಪರ ವಿಕೆಟ್ ಕೀಪರ್ ಆಗಿ ರಿಷಭ್ ಪಂತ್ ಕಣಕ್ಕಿಳಿದಿದ್ದರು. ಅಲ್ಲದೆ ಈ ಬಾರಿ ಏಷ್ಯಾಕಪ್‌ನಲ್ಲೂ ಸ್ಥಾನ ಪಡೆಯುವ ನಿರೀಕ್ಷೆಯಲ್ಲಿದ್ದರು. ಆದರೆ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿ ವೇಳೆ ಗಾಯಗೊಂಡಿರುವ ಕಾರಣ ಅವರನ್ನು ಏಷ್ಯಾಕಪ್ ತಂಡದಿಂದ ಹೊರಗಿಡಲಾಗಿದೆ.

**ಕೆಎಲ್ ರಾಹುಲ್:** ಚಾಂಪಿಯನ್ಸ್ ಟ್ರೋಫಿ ಟೂರ್ನಿಯಲ್ಲಿ ಭಾರತದ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿದ್ದ ಕೆಎಲ್ ರಾಹುಲ್ ಅವರಿಗೂ ಏಷ್ಯಾಕಪ್ ತಂಡದಲ್ಲಿ ಸ್ಥಾನ ಲಭಿಸಿಲ್ಲ. ವಿಕೆಟ್ ಕೀಪರ್ ಬ್ಯಾಟರ್ ಆಗಿ ಟಿ20 ತಂಡಕ್ಕೆ ಕಂಬ್ಯಾಕ್ ಮಾಡುವ ನಿರೀಕ್ಷೆಯಲ್ಲಿ ರಾಹುಲ್ ಅವರಿಗೆ ಅವಕಾಶ ನೀಡದಿರುವುದು ಅಚ್ಚರಿಯೇ ಸರಿ.

**ಮೊಹಮ್ಮದ್ ಸಿರಾಜ್:** 2024ರ ಟಿ20 ವಿಶ್ವಕಪ್ ಚಾಂಪಿಯನ್ ತಂಡದ ಭಾಗವಾಗಿದ್ದ ಮೊಹಮ್ಮದ್ ಸಿರಾಜ್‌ರನ್ನು ಮುಂಬರುವ ಏಷ್ಯಾಕಪ್‌ಗೆ ಆಯ್ಕೆ ಮಾಡಲಾಗಿಲ್ಲ. ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯಲ್ಲಿ ಅದ್ಭುತ ಪ್ರದರ್ಶನ ನೀಡಿರುವ ಸಿರಾಜ್‌ಗೆ ವಿಶ್ರಾಂತಿ ನೀಡುವ ಸಲುವಾಗಿ ಟಿ20 ತಂಡದಿಂದ ಕೈ ಬಿಡಲಾಗಿದೆ.

**ಶ್ರೇಯಸ್ ಅಯ್ಯರ್:** ಚಾಂಪಿಯನ್ಸ್ ಟ್ರೋಫಿ ಟೂರ್ನಿಯಲ್ಲಿ ಭಾರತದ ಪರ ಮಧ್ಯಮ ಕ್ರಮಾಂಕದಲ್ಲಿ ಉತ್ತಮ ಪ್ರದರ್ಶನ ನೀಡಿದ್ದ ಶ್ರೇಯಸ್ ಅಯ್ಯರ್ ಕೂಡ ಏಷ್ಯಾಕಪ್ ತಂಡದಲ್ಲಿ ಸ್ಥಾನ ಪಡೆಯುವ ನಿರೀಕ್ಷೆಯಲ್ಲಿದ್ದರು. ಆದರೆ 15 ಸದಸ್ಯರುಗಳ ತಂಡದಲ್ಲಿ ಅವರಿಗೆ ಸ್ಥಾನ ಲಭಿಸಿಲ್ಲ.

**ಯಶಸ್ವಿ ಜೈಸ್ವಾಲ್:** ಟಿ20 ವಿಶ್ವಕಪ್ ತಂಡದಲ್ಲಿ ಸ್ಥಾನ ಪಡೆದಿದ್ದ ಯಶಸ್ವಿ ಜೈಸ್ವಾಲ್ ಈ ಬಾರಿ 15 ಸದಸ್ಯರುಗಳ ತಂಡದಲ್ಲಿ ಸ್ಥಾನ ನೀಡಲಾಗಿಲ್ಲ. ಬದಲಾಗಿ ಅವರನ್ನು ಮೀಸಲು ಆಟಗಾರರ ಪಟ್ಟಿಯಲ್ಲಿರಿಸಲಾಗಿದೆ. ಅಂದರೆ ಯಾರಾದರೂ ಗಾಯಗೊಂಡು ಹೊರಗುಳಿದರೆ ಮಾತ್ರ ಅವರಿಗೆ ಏಷ್ಯಾಕಪ್ ತಂಡದಲ್ಲಿ ಚಾನ್ಸ್ ಸಿಗಲಿದೆ.

**ವಾಷಿಂಗ್ಟನ್ ಸುಂದರ್:** ಚಾಂಪಿಯನ್ಸ್ ಟ್ರೋಫಿ ಟೂರ್ನಿಯಲ್ಲಿ ಟೀಮ್ ಇಂಡಿಯಾದ ಭಾಗವಾಗಿದ್ದ ಸ್ಪಿನ್ ಆಲ್‌ರೌಂಡರ್ ವಾಷಿಂಗ್ಟನ್ ಸುಂದರ್‌ಗೂ ಈ ಬಾರಿಯ ಏಷ್ಯಾಕಪ್ ತಂಡದಲ್ಲಿ ಸ್ಥಾನ ಲಭಿಸಿಲ್ಲ. ಬದಲಾಗಿ ಮೀಸಲು ಆಟಗಾರರ ಪಟ್ಟಿಯಲ್ಲಿ ಸುಂದರ್ ಅವರನ್ನು ಇರಿಸಲಾಗಿದೆ.



# ಕರುಣ್ ವೃತ್ತಿ ಜೀವನ ಬಹುತೇಕ ಅಂತ್ಯ

ಭಾರತೀಯ ಕ್ರಿಕೆಟ್ ತಂಡ ಇತ್ತೀಚೆಗೆ ಇಂಗ್ಲೆಂಡ್ ಪ್ರವಾಸ ಕೈಗೊಂಡಿತ್ತು. ಇಲ್ಲಿ ಟೀಮ್ ಇಂಡಿಯಾ ಇಂಗ್ಲೆಂಡ್ ವಿರುದ್ಧದ ಐದು ಪಂದ್ಯಗಳ ಟೆಸ್ಟ್ ಸರಣಿಯನ್ನು 2-2 ಅಂತರದಿಂದ ಡ್ರಾ ಮಾಡಿಕೊಂಡಿತು. ಈ ಸರಣಿಯಲ್ಲಿ ಕರುಣ್ ನಾಯರ್ ಸುಮಾರು 8 ವರ್ಷಗಳ ನಂತರ ಭಾರತೀಯ ತಂಡದಲ್ಲಿ ಆಡುವ ಅವಕಾಶ ಪಡೆದರು. ಆದಾಗ್ಯೂ, ಅವರ ಪ್ರದರ್ಶನ ಉತ್ತಮವಾಗಿರಲಿಲ್ಲ. ಇದೀಗ ಕರುಣ್ ನಾಯರ್ ಅವರಿಗೆ ಮತ್ತೆ ಭಾರತೀಯ ತಂಡದಲ್ಲಿ ಸ್ಥಾನ ಸಿಗುವುದಿಲ್ಲ ಎಂಬುದು ಬಹುತೇಕ ಖಚಿತವಾಗಿದೆ.

ಲಕ್ನೋದಲ್ಲಿ ಆಸ್ಟ್ರೇಲಿಯಾ ಎ ವಿರುದ್ಧ ನಡೆಯಲಿರುವ ಎರಡು ಅನಧಿಕೃತ ನಾಲ್ಕು ದಿನಗಳ ಪಂದ್ಯಗಳಿಗೆ ಭಾರತ ಎ ತಂಡವನ್ನು ಘೋಷಿಸಲಾಗಿದೆ. ಈ ತಂಡದಲ್ಲಿ ಕರುಣ್ ನಾಯರ್ ಅವರ ಹೆಸರಿಲ್ಲ. ಇದು 33 ವರ್ಷದ ಬ್ಯಾಟ್ಸ್‌ಮನ್‌ನ ಭಾರತೀಯ ಕ್ರಿಕೆಟ್ ವೃತ್ತಿಜೀವನ ಈಗ ಮುಗಿದಿದೆ ಎಂಬ ಊಹಾಪೋಹಕ್ಕೆ ಕಾರಣವಾಗಿದೆ. ಒಂದು ಕಾಲದಲ್ಲಿ ಅವರನ್ನು ದೀರ್ಘ ಸ್ವರೂಪಕ್ಕೆ ಉತ್ತಮ ಆಟಗಾರ ಎಂದು ಪರಿಗಣಿಸಲಾಗಿತ್ತು.

ಆದರೆ ಈಗ ಆಯ್ಕೆದಾರರು ಅವರನ್ನು ತಂಡಕ್ಕೆ ಆಯ್ಕೆ ಮಾಡಿಲ್ಲ. ಇತ್ತೀಚೆಗಷ್ಟೆ ಇಂಗ್ಲೆಂಡ್‌ನಲ್ಲಿ ನಡೆದ ಆಂಡರ್ಸನ್ ತೆಂಡೂಲ್ಕರ್ ಟ್ರೋಫಿಯಲ್ಲಿ ಕರುಣ್ ನಾಯರ್ ತಂಡಕ್ಕೆ ಮರಳಿದರು. ಇದು ಐದು ಟೆಸ್ಟ್ ಸರಣಿಯಾಗಿತ್ತು. ಸುಮಾರು 9 ವರ್ಷಗಳ ನಂತರ ಅವರನ್ನು ತಂಡಕ್ಕೆ ಸೇರಿಸಲಾಯಿತು. ಆದರೆ ಅವರ ಪ್ರದರ್ಶನ ಉತ್ತಮವಾಗಿರಲಿಲ್ಲ. ಅವರು 6 ಇನ್ನಿಂಗ್ಸ್‌ಗಳಲ್ಲಿ ಒಮ್ಮೆ ಮಾತ್ರ 50 ಕ್ಕೂ ಹೆಚ್ಚು ರನ್ ಗಳಿಸಿದರು. ಈ ರೀತಿಯಾಗಿ ಅವರು ತಮ್ಮ ಟೆಸ್ಟ್ ವೃತ್ತಿಜೀವನವನ್ನು ಪುನರಾರಂಭಿಸುವ ಅವಕಾಶ ಕಳೆದುಕೊಂಡರು.

ಕರುಣ್ ನಾಯರ್ 2016 ರಲ್ಲಿ ಇಂಗ್ಲೆಂಡ್ ವಿರುದ್ಧ ತ್ರಿಶತಕ ಗಳಿಸಿದರು.



7 ಭರ್ಜರಿ ಸಿಕ್ಸ್

# ಆರ್‌ಸಿಬಿ ಆಟಗಾರನ ಸಿಡಿಲಬ್ಬರಕ್ಕೆ ಎದುರಾಳಿ ತತ್ತರ

ಇಂಗ್ಲೆಂಡ್‌ನಲ್ಲಿ ನಡೆಯುತ್ತಿರುವ ಟಿ20 ಬ್ಲಾಸ್ಟ್‌ನ ಮೂರನೇ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಲಂಕಾಶೈರ್ ತಂಡವು ರೋಚಕ ಜಯ ಸಾಧಿಸಿದೆ. ಈ ರೋಚಕ ಜಯದ ರೂವಾರಿ ಲಿಯಾಮ್ ಲಿವಿಂಗ್‌ಸ್ಟೋನ್. ಮ್ಯಾಂಚೆಸ್ಟರ್‌ನ ಓಲ್ಡ್ ಟ್ರಾಫೋರ್ಡ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಲಂಕಾಶೈರ್ ಹಾಗೂ ಕೆಂಟ್ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಟಾಸ್ ಗೆದ್ದ ಕೆಂಟ್ ತಂಡದ ನಾಯಕ ಸ್ಯಾಮ್ ಬಿಲ್ಲಿಂಗ್ಸ್ ಬ್ಯಾಟಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ಕೆಂಟ್ ತಂಡವು 20 ಓವರ್‌ಗಳಲ್ಲಿ 153 ರನ್ ಕಲೆಹಾಕಿದ್ದರು.

154 ರನ್‌ಗಳ ಸ್ಪರ್ಧಾತ್ಮಕ ಗುರಿ ಬೆನ್ನತ್ತಿದ ಲಂಕಾಶೈರ್ ತಂಡವು ಕೇವಲ 31 ರನ್‌ಗಳಿಗೆ 3 ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿದ್ದರು. ಈ ಹಂತದಲ್ಲಿ ಕಣಕ್ಕಿಳಿದ ಲಿಯಾಮ್ ಲಿವಿಂಗ್‌ಸ್ಟೋನ್ ಸ್ಫೋಟಕ ಬ್ಯಾಟಿಂಗ್ ಪ್ರದರ್ಶಿಸಿದರು. ಒಂದೆಡೆ ಲಂಕಾಶೈರ್ ವಿಕೆಟ್ ಕಳೆದುಕೊಳ್ಳುತ್ತಿದ್ದರೆ, ಮತ್ತೊಂದೆಡೆ ಲಿವಿಂಗ್‌ಸ್ಟೋನ್ ಆಕ್ರಮಣಕಾರಿ ಬ್ಯಾಟಿಂಗ್‌ನೊಂದಿಗೆ ಅಬ್ಬರಿಸಿದರು. ಪರಿಣಾಮ ಲಿವಿಂಗ್‌ಸ್ಟೋನ್ ಬ್ಯಾಟ್‌ನಿಂದ 7 ಭರ್ಜರಿ ಸಿಕ್ಸ್ ಹಾಗೂ 4 ಫೋರ್‌ಗಳು ಮೂಡಿಬಂದವು.

ಅಲ್ಲದೆ ಕೇವಲ 45 ಎಸೆತಗಳಲ್ಲಿ ಅಜೇಯ 85 ರನ್‌ಗಳಿಸುವ ಮೂಲಕ ಲಿಯಾಮ್ ಲಿವಿಂಗ್‌ಸ್ಟೋನ್ 18 ಓವರ್‌ಗಳಲ್ಲಿ ಗುರಿ ಮುಟ್ಟಿಸಿ ಲಂಕಾಶೈರ್ ತಂಡಕ್ಕೆ 3 ವಿಕೆಟ್‌ಗಳ ರೋಚಕ ಗೆಲುವು ತಂದುಕೊಟ್ಟರು. ಈ ಭರ್ಜರಿ ಪ್ರದರ್ಶನದೊಂದಿಗೆ ಲಿವಿಂಗ್‌ಸ್ಟೋನ್ ಪಂದ್ಯ ಶ್ರೇಷ್ಠ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡರು.

# ದಾಖಲೆಯ ಅರ್ಧಶತಕ ಸಿಡಿಸಿದ ಪೊಲಾರ್ಡ್

ಕೆರಿಬಿಯನ್ ಪ್ರೀಮಿಯರ್ ಲೀಗ್‌ನ 23ನೇ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಟ್ರಿನ್‌ಬಾಗೊ ನೈಟ್ ರೈಡರ್ಸ್ ತಂಡವು 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 167 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ಗಯಾನಾ ಅಮೆಝಾನ್ ವಾರಿಯರ್ಸ್ ತಂಡವು 19.5 ಓವರ್‌ಗಳಲ್ಲಿ ಗುರಿ ಮುಟ್ಟುವ ಮೂಲಕ 3 ವಿಕೆಟ್‌ಗಳ ಜಯ ಸಾಧಿಸಿದೆ.



ಬ್ಯಾಟರ್‌ಗಳ ಪಟ್ಟಿಯಲ್ಲೂ ಮೂರನೇ ಸ್ಥಾನ

ಕೆರಿಬಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಕೀರನ್ ಪೊಲಾರ್ಡ್ ಆರ್ಭಟ ಮುಂದುವರೆದಿದೆ. ಕಳೆದ ಕೆಲ ಪಂದ್ಯಗಳ ಮೂಲಕ ವಿಶ್ವ ದಾಖಲೆ ನಿರ್ಮಿಸಿದ್ದ ಪೊಲಾರ್ಡ್ ಇದೀಗ ವೇಗದ ಅರ್ಧಶತಕದೊಂದಿಗೆ ದಾಖಲೆ ಬರೆದಿದ್ದಾರೆ. ಅದು ಕೂಡ ಕೇವಲ 17 ಎಸೆತಗಳಲ್ಲಿ ಹಾಫ್ ಸೆಂಚುರಿ ಪೂರೈಸುವ ಮೂಲಕ..!

ಗಯಾನಾದ ಪ್ರಾವಿಡೆನ್ಸ್ ಸ್ಟೇಡಿಯಂನಲ್ಲಿ ನಡೆದ ಸಿಪಿಎಲ್‌ನ 23ನೇ ಪಂದ್ಯದಲ್ಲಿ ಟ್ರಿನ್‌ಬಾಗೊ ನೈಟ್ ರೈಡರ್ಸ್ ಹಾಗೂ ಗಯಾನಾ ಅಮೆಝಾನ್ ವಾರಿಯರ್ಸ್ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಟ್ರಿನ್‌ಬಾಗೊ ನೈಟ್ ರೈಡರ್ಸ್ ಪರ 6ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಪೊಲಾರ್ಡ್ ತೂಫಾನ್ ಬ್ಯಾಟಿಂಗ್ ಪ್ರದರ್ಶಿಸಿದರು. ಬಿರುಸಿನ ಬ್ಯಾಟಿಂಗ್‌ನೊಂದಿಗೆ ಗಯಾನಾ ಅಮೆಝಾನ್ ವಾರಿಯರ್ಸ್ ಬೌಲರ್‌ಗಳ ಬೆಂಡೆತ್ತಿದ ಕೀರನ್ ಪೊಲಾರ್ಡ್ ಕೇವಲ 17 ಎಸೆತಗಳಲ್ಲಿ ಅರ್ಧಶತಕ ಪೂರೈಸಿದರು. ಇದು ಈ ಬಾರಿಯ ಕೆರಿಬಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಮೂಡಿಬಂದ ಅತೀ ವೇಗದ ಹಾಫ್ ಸೆಂಚುರಿ ಎಂಬುದು ವಿಶೇಷ.

ಅಲ್ಲದೆ ಕೆರಿಬಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಅತೀ ಕಡಿಮೆ ಎಸೆತಗಳಲ್ಲಿ ಅರ್ಧಶತಕ ಬಾರಿಸಿದ ಬ್ಯಾಟರ್‌ಗಳ ಪಟ್ಟಿಯಲ್ಲೂ ಕೀರನ್ ಪೊಲಾರ್ಡ್ ಮೂರನೇ ಸ್ಥಾನಕ್ಕೇರಿದ್ದಾರೆ. ಹಾಗೆಯೇ ಟ್ರಿನ್‌ಬಾಗೊ ನೈಟ್ ರೈಡರ್ಸ್ ಪರ ಅತೀ ವೇಗದ ಹಾಫ್ ಸೆಂಚುರಿ ಸಿಡಿಸಿದ ಹೆಗ್ಗಳಿಕೆಯನ್ನು ಕೂಡ ಪೊಲಾರ್ಡ್ ತಮ್ಮದಾಗಿಸಿಕೊಂಡಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966